ಸಂಪುಟ: 06 ಸಂಚಿಕೆ: 129 ಪುಟಗಳು: 08 ಬುಧವಾರ 22 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಎಲ್ಲಾ ಬೈಗುಳಗಳನ್ನೂ ಸ್ವೀಕರಿಸಬೇಕೆಂದಿಲ್ಲ. ಆದರೆ ಪ್ರೀತಿಯಿಟ್ಟು ತಿದ್ದಲೆಂದು ಆಡಿದ ಮಾತುಗಳಿಗೆ ತಲೆ ಬಾಗಲೇಬೇಕು!

# ನೀಟ್ ಸಮರ

## ನಮೋ ವಿದ್ಯಾರ್ಥಿಗಳ ಪರ



### ಪ್ರಶ್ನೆಪತ್ರಿಕೆ ಸೋರಿಕೆ ತಡೆಯುವುದು ಸಾಮೂಹಿಕ ಹೊಣೆಗಾರಿಕೆ




## ರಾಜ್ಯದ ಬಹುತೇಕ ಭಾಗಗಳಿಗೆ ಯೆಲ್ಲೋ ಅಲರ್ಟ್; ಹೊನ್ನಾವರದಲ್ಲಿ ದಾಖಲೆಯ ಮಳೆ



• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದಲ್ಲಿ ನೈರುತ್ಯ ಮುಂಗಾರು ಮತ್ತೆ ಚುರುಕುಗೊಂಡಿದ್ದು, ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಉತ್ತಮ ಮಳೆಯಾಗುತ್ತಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡು ಭಾಗಗಳಲ್ಲಿ ವರ್ಷಧಾರೆಯ ನಡುವೆ, ಮಹಾರಾಷ್ಟ್ರದ ಪಶ್ಚಿಮಘಟ್ಟ ಪ್ರದೇಶದಲ್ಲಿ ಮಳೆ ಆರ್ಭಟ ಹಿನ್ನೆಲೆ ಉತ್ತರ ಕರ್ನಾಟಕದ ಬುತೇಕ ಭಾಗಗಳಲ್ಲಿಯೂ ನೆರೆ ಸ್ಥಿತಿ ಉಂಟಾಗಿದೆ. ರಾಜ್ಯದ ಬಹುತೇಕ ಭಾಗಗಳಿಗೆ ನಾಳೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದ್ದು, ಮಳೆಯ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಕರಾವಳಿ ಜಿಲ್ಲೆಗಳಾದ ಉತ್ತರ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಒಂದು ಅಥವಾ ಎರಡು ಪ್ರದೇಶಗಳಲ್ಲಿ ಭಾರಿ ಮಳೆಯ ಸಾಧ್ಯತೆ ಇದೆ. ದಕ್ಷಿಣ ಕನ್ನಡದಲ್ಲಿ ಸಾಧಾರಣ ಮಳೆ ನಿರೀಕ್ಷಿಸಲಾಗಿದೆ. ಹಾಗೆಯೇ ಮಲೆನಾಡು ಭಾಗದ ಶಿವಮೊಗ್ಗದಲ್ಲಿ ಗಂಟೆಗೆ 40–50 ಕಿ.ಮೀ. ವೇಗದ ಜೊತೆಗೆ ಮಳೆಯ ಮುನ್ನೆಚ್ಚರಿಕೆ ನೀಡಲಾಗಿದ್ದು, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿಯೂ ಮಳೆಯ ಸಾಧ್ಯತೆ ಇದೆ ಎನ್ನಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರದ ನಗರಬಸ್ತಿಕೇರಿಯಲ್ಲಿ ರಾಜ್ಯದಲ್ಲೇ ಅತಿ ಹೆಚ್ಚು 121 ಮಿ.ಮೀ. ಮಳೆಯಾಗಿದೆ.

## ದಲಿತರ ಭೂಮಿ ಅಕ್ರಮ ಒತ್ತುವರಿ ಆರೋಪ ಆರ್ಟ್ ಆಫ್ ಲೀವಿಂಗ್ ವಿರುದ್ಧ ಎಸ್ ಐಟಿ ತನಿಖೆಗೆ ಆದೇಶ

• **ಉದಯವಾಹಿನಿ, ಬೆಂಗಳೂರು**

ದಲಿತರ ಭೂಮಿಯನ್ನು ಅಕ್ರಮವಾಗಿ ಸ್ವಾಧೀನ ಮಾಡಿಕೊಂಡಿರೋ ಆರೋಪದ ಮೇಲೆ ಆರ್ಟ್ ಆಫ್ ಲೀವಿಂಗ್ ಸಂಸ್ಥೆ ವಿರುದ್ಧ ತನಿಖೆಗೆ ಸರ್ಕಾರ ಎಸ್‌ಐಟಿ ರಚನೆ ಮಾಡಿದೆ. ಬೆಂಗಳೂರು ಭಾಗದ ಪ್ರಾದೇಶಿಕ ಆಯುಕ್ತರ ನೇತೃತ್ವದಲ್ಲಿ ಎಸ್ ಐಟಿ ರಚನೆ ಮಾಡಲಾಗಿದೆ. ವಿಧಾನಸೌಧದಲ್ಲಿ ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಡಿಸಿಎಂ ಪರಮೇಶ್ವರ್, ರವಿಶಂಕರ್ ಗೂರೂಜಿ ಅವರ ನೇತೃತ್ವದ ಆರ್ಟ್ ಆಫ್ ಲೀವಿಂಗ್ ಸಂಸ್ಥೆ ದಲಿತರಿಗೆ ಸೇರಿದ 150 ಎಕರೆ ಜಾಗ ಅಕ್ರಮವಾಗಿ ಸ್ವಾಧೀನ ಮಾಡಿಕೊಂಡಿದ್ದಾರೆ ಅಂತ ದೂರು ಬಂದಿದೆ. ದಲಿತ ಸಂಘಟನೆಗಳು ಹಾಗೂ ಸಾರ್ವಜನಿಕರು ದೂರು ಕೊಟ್ಟಿದ್ದರು. ದೂರಿನ ಅನ್ವಯ ಈಗ ಎಸ್‌ಐಟಿ ರಚನೆ ಮಾಡಲಾಗಿದೆ. ಬೆಂಗಳೂರು ವಿಭಾಗ ಪ್ರಾದೇಶಿಕ ಆಯುಕ್ತರ ನೇತೃತ್ವದಲ್ಲಿ ತನಿಖೆ ನಡೆಯಲಿದ್ದು, ಅಕ್ರಮವಾಗಿದ್ದರೆ ಕ್ರಮ ಆಗುತ್ತದೆ ಅಂತ ತಿಳಿಸಿದರು.

## ಸಾವಿರ ವರ್ಷ ಕಳೆದರೂ ಕೊರೋನಾ ವೈರಸ್ ಇರುತ್ತೆ, ಭಯ ಬೇಡ ಎಚ್ಚರವಿರಲಿ: ಆರೋಗ್ಯ ಸಚಿವ ಯು.ಟಿ. ಖಾದರ್



• **ಉದಯವಾಹಿನಿ, ಬೆಂಗಳೂರು**

ದೇಶಾದ್ಯಂತ ಮತ್ತೆ ಕೊರೋನಾ, ಡೆಂಗ್ಯೂ ಹಾಗೂ ನಂತಹ ವೈರಲ್ ರೋಗಗಳ ಭೀತಿ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಯಾವುದೇ ಕಾರಣಕ್ಕೂ ಆತಂಕ ಪಡಬೇಕಾದ ಅಗತ್ಯವಿಲ್ಲ, ಭಯಕ್ಕಿಂತ ಎಚ್ಚರಿಕೆ ವಹಿಸುವುದು ಮುಖ್ಯ ಎಂದು ಆರೋಗ್ಯ ಸಚಿವ ಯು.ಟಿ ಖಾದರ್ ಅಭಯ ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಂಕ್ರಾಮಿಕ ರೋಗಗಳ ನಿಯಂತ್ರಣ, ಲಸಿಕೆ ಹಾಗೂ ಸಾರ್ವಜನಿಕ ಆರೋಗ್ಯದ ಕುರಿತು ಮಹತ್ವದ ಮಾಹಿತಿಗಳನ್ನು ಹಂಚಿಕೊಂಡರು. ಕೋವಿಡ್ ಪ್ರಕರಣಗಳ ಕುರಿತು ಮಾತನಾಡಿದ ಸಚಿವರು, ಸಾವಿರ ವರ್ಷ ಕಳೆದರೂ ಈ ವೈರಸ್ ಇದ್ದೇ ಇರುತ್ತದೆ. ಕೆಲವೊಂದು ವೈರಸ್‌ಗಳು ಗಾಳಿಯಲ್ಲಿ ನಿರಂತರವಾಗಿ ಇರುತ್ತವೆ. ನಾವು ಟೆಸ್ಟಿಂಗ್ ಹೆಚ್ಚಿಸಿದಾಗ ಕೆಲವೊಂದು ಪ್ರಕರಣಗಳು ಪಾಸಿಟಿವ್ ಬಂದೇ ಬರುತ್ತವೆ. ಇದಕ್ಕಾಗಿ ಯಾರೂ ಭಯಪಡುವ ಅಗತ್ಯವಿಲ್ಲ ಎಂದರು. ರೋಗ ನಿರೋಧಕ ಶಕ್ತಿ ಕಡಿಮೆ ಇರುವವರಿಗೆ ರೋಗ ಬೇಗ ತಗುಲುತ್ತದೆ. ವೈರಸ್‌ಗಿಂತ ನಾವು ಗಟ್ಟಿಯಾಗಬೇಕು ಮತ್ತು ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿಕೊಳ್ಳಬೇಕು. ಇದು ಸಾಂಕ್ರಾಮಿಕ ರೋಗಗಳ ಹಾಗೂ ವೈರಲ್ ಫೀವರ್ ಸೀಸನ್ ಆಗಿರುವುದರಿಂದ ಸೊಳ್ಳೆಗಳ ಉತ್ಪತ್ತಿಯಿಂದ ರೋಗಗಳು ಹೆಚ್ಚಾಗುತ್ತಿವೆ.

## ಆರ್‌ಎಸ್‌ಎಸ್‌ಗೆ ಅವಹೇಳನ ಪ್ರಕರಣ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ನಿಂದ ಪ್ರಿಯಾಂಕ್ ಖರ್ಗೆಗೆ ಮತ್ತೆ ಸಮನ್ಸ್

• **ಉದಯವಾಹಿನಿ, ಬೆಂಗಳೂರು**

ಆರ್‌ಎಸ್‌ಎಸ್ ವಿರುದ್ಧ ಗೃಹಸಚಿವ ಪ್ರಿಯಾಂಕ್ ಖರ್ಗೆ ಅವಹೇಳನಕಾರಿ ಹೇಳಿಕೆ ನೀಡಿದ ಪ್ರಕರಣ ಸಂಬಂಧ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇಂದು ಮತ್ತೆ ಸಮನ್ಸ್ ಜಾರಿ ಮಾಡಿದೆ. ಆರ್‌ಎಸ್‌ಎಸ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದಲ್ಲಿ ತೇಜಸ್ ಗೌಡ ಎಂಬುವವರು ಕಳೆದ ವರ್ಷ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ್ರು.

ಗೃಹಸಚಿವ ಪ್ರಿಯಾಂಕ್ ಖರ್ಗೆ, ಮಹಮ್ಮದ್ ನಲಪಾಡ್ ಖುದ್ದು ಹಾಜರಾತಿಗೆ ಕೋರ್ಟ್ ಸೂಚಿಸಿತ್ತು. ಆದರೆ ಇವರ ಬದಲಾಗಿ ಸದಾಶಿವನಗರ ಪೊಲೀಸರು, ಅಶೋಕ್ ನಗರ ಪೊಲೀಸರು ಹಾಜರಾಗಿ ನ್ಯಾಯಾಲಯಕ್ಕೆ ವರದಿ ಸಲ್ಲಿಕೆ ಮಾಡಿದ್ರು. ವರದಿ ಪರಿಶೀಲನೆ ನಡೆಸಿದ ನ್ಯಾಯಾಧೀಶರು ವರದಿ ತೃಪ್ತಿಕರವಾಗಿಲ್ಲ ಅಂತಾ ಅಭಿಪ್ರಾಯ ವ್ಯಕ್ತಪಡಿಸಿ, ಗೃಹಸಚಿವ ಪ್ರಿಯಾಂಕ್ ಖರ್ಗೆ, ಮಹಮ್ಮದ್ ನಲಪಾಡ್ ಮತ್ತೆ ಆಗಸ್ಟ್ 01ರಂದು ಕೋರ್ಟ್‌ಗೆ ಹಾಜರಾಗುವಂತೆ ಮರು ಸಮನ್ಸ್ ಜಾರಿ ಮಾಡಿದೆ.

## ಸಿಎಂ ಡಿಕೆಶಿ, ಖರ್ಗೆ ಸೇರಿ ಹಿರಿಯ ನಾಯಕರ ಸಾಥ್

**ಯುವ ವಿದ್ಯಾರ್ಥಿಗಳ ಮೇಲಿನ ದೌರ್ಜನ್ಯವನ್ನು ವಿರೋಧಿಸಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸದತ್ತ ಮೆರವಣಿಗೆ ನಡೆಸಿದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಕೆ.ಸಿ. ವೇಣುಗೋಪಾಲ್ ಮತ್ತು ಪ್ರಿಯಾಂಕಾ ಗಾಂಧಿ ವಾದ್ರಾ, ಕರ್ನಾಟಕದ ಸಿಎಂ ಡಿ ಕೆ ಶಿವಕುಮಾರ್ ಸೇರಿದಂತೆ ಪಕ್ಷದ ಇತರ ಹಿರಿಯ ನಾಯಕರು ಸಹ ಹಾಜರಿದ್ದರು.**

**ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಒತ್ತಾಯಿಸಿ ಲೋಕ ಕಲ್ಯಾಣ್ ಮಾರ್ಗದಲ್ಲಿ ರಾಹುಲ್ ಗಾಂಧಿ ಪ್ರತಿಭಟನೆ ನಡೆಸಿದರು. ಈ ಬಗ್ಗೆ ಎಕ್ಸ್ ಪೋಸ್ಟ್ ಮಾಡಿರುವ ರಾಹುಲ್ ಗಾಂಧಿ, ವಿದ್ಯಾರ್ಥಿಗಳ ಮೇಲಿನ ದೌರ್ಜನ್ಯಗಳಿಗೆ ಅವರಿಂದ ಉತ್ತರಗಳನ್ನು ಕೋರಲು ನಾವು ಪ್ರಧಾನಿ ಮೋದಿ ಅವರ ಮನೆಗೆ ಮೆರವಣಿಗೆ ನಡೆಸಿದ್ದೇವೆ. ಸರ್ಕಾರ ಯಾವುದೇ ಹೊಣೆಗಾರಿಕೆಯನ್ನು ತೆಗೆದುಕೊಳ್ಳಲು ಬಯಸುವುದಿಲ್ಲ, ಅಥವಾ ಸಂಸತ್ತಿನಲ್ಲಿ ಅದರ ಬಗ್ಗೆ ಚರ್ಚೆ ನಡೆಸಲು ಬಯಸುತ್ತಿಲ್ಲ.**

**ಭಾರತದ ಯುವಕರ ಭವಿಷ್ಯವನ್ನು ನಾಶಪಡಿಸಿದ್ದಕ್ಕಾಗಿ ಪ್ರಧಾನಿ ಮತ್ತು ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು. ಇದಕ್ಕೂ ಮೊದಲು, ಸಂಸತ್ ಭವನದ ಸಂಕೀರ್ಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಗಾಂಧಿ, ಬೆಳಗ್ಗೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರನ್ನು ಇತರ ಸಂಸದರೊಂದಿಗೆ ಭೇಟಿಯಾಗಿ ಪ್ರತಿಪಕ್ಷಗಳು ವಿದ್ಯಾರ್ಥಿಗಳ ಸಮಸ್ಯೆಯನ್ನು ಚರ್ಚಿಸಲು ಬಯಸುತ್ತವೆ ಎಂದು ತಿಳಿಸಿದರು. ಅವರು ಸರ್ಕಾರವನ್ನು ಕೇಳಬೇಕಾಗುತ್ತದೆ ಎಂದು ಹೇಳಿದರು.**



## ವಿದ್ಯಾರ್ಥಿಗಳ ಭವಿಷ್ಯದ ಜೊತೆ ಆಟವಾಡಲು ಅವಕಾಶವಿಲ್ಲ

**ವಿದ್ಯಾರ್ಥಿಗಳ ಭವಿಷ್ಯಕ್ಕೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳಲು ನೀಟ್ ಮರುಪರೀಕ್ಷೆಗೆ ಆದ್ಯತೆ ನೀಡಲಾಯಿತು. ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿ, ಫಲಿತಾಂಶವನ್ನೂ ಯಾವುದೇ ವಿಳಂಬವಿಲ್ಲದೆ ಪ್ರಕಟಿಸಲಾಯಿತು ಎಂದು ಪ್ರಧಾನಿ ತಿಳಿಸಿದ್ದಾರೆ ಎಂದು ರಿಜಿಜು ಹೇಳಿದರು. ಪ್ರಶ್ನೆಪತ್ರಿಕೆ ಸೋರಿಕೆಗಳು ಮರುಕಳಿಸದಂತೆ ಈಗಾಗಲೇ ಹಲವು ಕಠಿಣ ಕ್ರಮಗಳನ್ನು ಜಾರಿಗೆ ತರಲಾಗಿದೆ. ಪ್ರಶ್ನೆಪತ್ರಿಕೆ ಸೋರಿಕೆ ಜಾಲದಲ್ಲಿ ಭಾಗಿಯಾಗಿರುವವರನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿದೆ. ಅಲ್ಲದೆ, ಈ ಪ್ರಕರಣದ ತಪ್ಪಿತಸ್ಥರಿಗೆ ದೇಶದ ಅತ್ಯುತ್ತಮ ಕಾನೂನು ತಜ್ಞರ ನೆರವಿನಿಂದ ಅತ್ಯಂತ ಕಠಿಣ ಶಿಕ್ಷೆ ಆಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಪ್ರಧಾನಿ ಸೂಚಿಸಿದ್ದಾರೆ ಎಂದು ತಿಳಿಸಿದರು. ಯುವಕರ ಭವಿಷ್ಯದೊಂದಿಗೆ ಯಾರೂ ಆಟವಾಡದಂತೆ ಬಲವಾದ ಕ್ರಮ ಕೈಗೊಳ್ಳಲಾಗಿದೆ. ಭವಿಷ್ಯದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ನಡೆಯದಂತೆ ತಡೆಯಲು ಎಲ್ಲಾ ರಾಜ್ಯ ಸರ್ಕಾರಗಳು ಮತ್ತು ಕೇಂದ್ರ ಸರ್ಕಾರ ರಾಜಕೀಯ ಪಕ್ಷಭೇದ ಮರೆತು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ರಾಜಕೀಯ ವಿಷಯವಲ್ಲ, ರಾಷ್ಟ್ರದ ಹಿತಾಸಕ್ತಿಗೆ ಸಂಬಂಧಿಸಿದ ವಿಷಯ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ ಎಂದು ವಿವರಿಸಿದರು.**

**1** ನೀಟ್ ಪ್ರಶ್ನೆ ಪತ್ರಿಕೆ ಬಗ್ಗೆ ಮೌನ ಮುರಿದ ಪ್ರಧಾನಿ ಮೋದಿ

**2** ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕು,

**3** ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ 13 ಜನರನ್ನು ಬಂಧಿಸಿ ಜೈಲಿಗೆ ಹಾಕಲಾಗಿದೆ.



• **ಉದಯವಾಹಿನಿ, ನವದೆಹಲಿ**

ನೀಟ್–ಯುಜಿ 2026 ಪ್ರಶ್ನೆಪತ್ರಿಕೆ ಸೋರಿಕೆ ವಿವಾದದ ಕುರಿತು ಕೇಂದ್ರ ಸರ್ಕಾರ ವಿದ್ಯಾರ್ಥಿಗಳ ಪರವಾಗಿದೆ. ಯಾವುದೇ ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಯುವುದು ನಮ್ಮೆಲ್ಲರ ಜವಾಬ್ದಾರಿ. ಯುವಜನತೆಯ ಭವಿಷ್ಯದ ಜೊತೆ ಆಟವಾಡಲು ಅವಕಾಶ ನೀಡದಂತೆ ತಪ್ಪಿತಸ್ಥರನ್ನು ಶಿಕ್ಷಿಸಬೇಕಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಎನ್‌ಡಿಎ ಸಂಸದೀಯ ಪಕ್ಷದ ಸಭೆಯಲ್ಲಿ ಹೇಳಿದ್ದಾರೆ.

ಸಭೆಯ ನಂತರ ಮಾಧ್ಯಮಗಳ ಜೊತೆ ಮಾತನಾಡಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಪ್ರಶ್ನೆಪತ್ರಿಕೆ ಸೋರಿಕೆಯನ್ನು ರಾಜಕೀಯಗೊಳಿಸಬಾರದು. ಇಂತಹ ಘಟನೆಗಳು ಮರುಕಳಿಸದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡಬೇಕು ಎಂದು ಪ್ರಧಾನಿ ಹೇಳಿದ್ದಾರೆ ಎಂದು ತಿಳಿಸಿದರು. ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ಸಾಮೂಹಿಕ ಪ್ರಯತ್ನ ಅಗತ್ಯ. ಸ್ಪರ್ಧಾತ್ಮಕ ಪರೀಕ್ಷೆಗಳ ವಿಶ್ವಾಸಾರ್ಹತೆಯನ್ನು ಕಾಪಾಡಲು ಸಂಘಟಿತ ಪ್ರಯತ್ನಗಳಿಗೆ ಪ್ರಧಾನಿ ಕರೆ ನೀಡಿದ್ದಾರೆ ಎಂದು ಅವರು ಹೇಳಿದರು.

ನೀಟ್–ಯುಜಿ ಪರೀಕ್ಷೆಯ ಅಕ್ರಮ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ, ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳಿಗೆ ತಲಾ 1 ಕೋಟಿ ರೂಪಾಯಿ ಪರಿಹಾರ ನೀಡಬೇಕು ಎಂದು ಒತ್ತಾಯಿಸಿ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಸಂಸತ್ ಚಲೋ ಪ್ರತಿಭಟನೆ ನಡೆಸಿದ ಮರುದಿನವೇ ಪ್ರಧಾನಿ ಮೋದಿ ಅವರ ಈ ಹೇಳಿಕೆ ಹೊರಬಿದ್ದಿದೆ.

ಪ್ರಶ್ನೆ ಪತ್ರಿಕೆ ಸೋರಿಕೆಯ ವರದಿಗಳು ಬಂದ ಕೂಡಲೇ ಸರ್ಕಾರ ಕ್ರಮ ಕೈಗೊಂಡಿದ್ದು, ಘಟನೆಯಲ್ಲಿ ಭಾಗಿಯಾದವರನ್ನು ಬಂಧಿಸಿದೆ. 13 ಆರೋಪಿಗಳು ಜೈಲು ಸೇರಿದ್ದಾರೆ. ವಿದ್ಯಾರ್ಥಿಗಳು ಈ ವಿವಾದದಿಂದ ಸಮಸ್ಯೆ ಅನುಭವಿಸದಂತೆ ನೋಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವನ್ನು ರಕ್ಷಿಸುವ ಸಲುವಾಗಿ, ನೀಟ್ ಮರುಪರೀಕ್ಷೆಯನ್ನು ತಕ್ಷಣವೇ ಹಮ್ಮಿಕೊಳ್ಳಲಾಯಿತು. ಅದರ ಹಿಂದೆಯೇ ಫಲಿತಾಂಶ ಘೋಷಿಸಲಾಯಿತು ಎಂದು ಅವರು ಹೇಳಿದರು. ಪ್ರಶ್ನೆ ಪತ್ರಿಕೆ ಸೋರಿಕೆ ಪಿಡುಗು ಪಕ್ಷ, ರಾಜಕೀಯವನ್ನು ಮೀರಿ, ಲಕ್ಷಾಂತರ ಯುವಕರ ಭವಿಷ್ಯಕ್ಕೆ ಸಂಬಂಧಿಸಿದ್ದಾಗಿದೆ. ಭವಿಷ್ಯದಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯನ್ನು ತಡೆಗಟ್ಟಲು ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ವಿಶ್ವಾಸಾರ್ಹತೆಯನ್ನು ಬಲಪಡಿಸಲು ಕೇಂದ್ರ ಮತ್ತು ರಾಜ್ಯಗಳು ಒಟ್ಟಾಗಿ ಕೆಲಸ ಮಾಡಿ ಯುವಕರ ಆತ್ಮವಿಶ್ವಾಸ ಉಳಿಸಿಕೊಳ್ಳಬೇಕಿದೆ ಎಂದು ತಿಳಿಸಿದರು. ಸಂಸತ್ ಕಡೆಗೆ ಮೆರವಣಿಗೆ ನಡೆಸುತ್ತಿದ್ದಾಗ ಪ್ರತಿಭಟನಾನಿರತ ವಿದ್ಯಾರ್ಥಿಗಳು ಮತ್ತು ದೆಹಲಿ ಪೊಲೀಸರ ನಡುವೆ ಘರ್ಷಣೆಗಳು ನಡೆದವು. ಪೊಲೀಸರು ಗುಂಪನ್ನು ಚದುರಿಸಲು ಲಾಠಿ ಮತ್ತು ಅಶ್ರುವಾಯು ಪ್ರಯೋಗಿಸಿದರು. ಇದನ್ನು ಕಾಂಗ್ರೆಸ್ ಸೇರಿದಂತೆ ವಿರೋಧ ಪಕ್ಷಗಳು ಖಂಡಿಸಿ ಪ್ರತಿಭಟನೆ ನಡೆಸುತ್ತಿವೆ. ನಡೆಯುತ್ತಿರುವ ಸಂಸತ್ ಅಧಿವೇಶನದಲ್ಲಿ ಈ ಕುರಿತು ಚರ್ಚೆ ನಡೆಸುವಂತೆ ವಿಪಕ್ಷಗಳು ಪಟ್ಟು ಹಿಡಿದಿದ್ದು, ಅಧಿವೇಶನದ ಎರಡು ದಿನಗಳು ವ್ಯರ್ಥವಾಗಿದೆ.

## ರಾಹುಲ್, ಪ್ರಿಯಾಂಕಾ ಗಾಂಧಿ ಸೇರಿ ಇತರರನ್ನು ವಶಕ್ಕೆ ಪಡೆದ ಪೊಲೀಸರು

ವಿದ್ಯಾರ್ಥಿಗಳ ವಿರುದ್ಧದ ಪೊಲೀಸರ ದೌರ್ಜನ್ಯಕ್ಕಾಗಿ ಪ್ರಧಾನಿ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿ ಪ್ರಧಾನಿ ನಿವಾಸದ ಹೊರಗೆ ಪ್ರತಿಭಟನೆ ನಡೆಸುತ್ತಿದ್ದ ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿ ಅನೇಕ ಕಾಂಗ್ರೆಸ್ ನಾಯಕರನ್ನು ದೆಹಲಿ ಪೊಲೀಸರು ಬಂಧಿಸಿದ್ದಾರೆ. ರಾಹುಲ್ ಗಾಂಧಿ ಮತ್ತು ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು ಮಂಗಳವಾರ ಪ್ರಧಾನಿಯವರ ಲೋಕ ಕಲ್ಯಾಣ ಮಾರ್ಗದ ನಿವಾಸದ ಹೊರಗೆ ಪ್ರತಿಭಟನೆ ನಡೆಸಿದರು. ಪ್ರಧಾನಿ ವಿರುದ್ಧ ಘೋಷಣೆಗಳನ್ನು ಕೂಗಿದ ಕಾಂಗ್ರೆಸ್ ಸಂಸದರು ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷರ ನೇತೃತ್ವದಲ್ಲಿ ಧರಣಿಯಲ್ಲಿ ಭಾಗವಹಿಸಿದ್ದರು. ಸಿಜೆಪಿ ನೇತೃತ್ವದಲ್ಲಿ ಸಂಸತ್ ಭವನ ಮುತ್ತಿಗೆ ಮೆರವಣಿಗೆಯಲ್ಲಿ ವಿದ್ಯಾರ್ಥಿಗಳ ಮೇಲೆ ಪೊಲೀಸರು ದೌರ್ಜನ್ಯ ನಡೆಸಿದ್ದಾರೆ ಎಂದು ಆರೋಪಿಸಿ ಕಾಂಗ್ರೆಸ್ ನಾಯಕರು ಪ್ರಧಾನಿಯವರ ನಿವಾಸದವರೆಗೆ ಮೆರವಣಿಗೆ ನಡೆಸಿ ಧರಣಿ ಕೈಗೊಂಡಿದ್ದರು. ವಿದ್ಯಾರ್ಥಿಗಳ ಮೇಲಿನ ದೌರ್ಜನ್ಯಕ್ಕೆ ಪ್ರಧಾನಿ ಮೋದಿ ಅವರಿಂದ ಉತ್ತರಗಳನ್ನು ಬಯಸಿ ನಾವು ಅವರ ನಿವಾಸದ ವರೆಗೂ ಮೆರವಣಿಗೆ ನಡೆಸಿದ್ದೇವೆ. ಸರ್ಕಾರ ಯಾವುದೇ ಹೊಣೆಗಾರಿಕೆಯನ್ನು ತೆಗೆದುಕೊಳ್ಳಲು ಬಯಸುತ್ತಿಲ್ಲ ಅಥವಾ ಸಂಸತ್ತಿನಲ್ಲಿ ಅದರ ಬಗ್ಗೆ ಚರ್ಚೆ ನಡೆಸಲು ಬಯಸುವುದಿಲ್ಲ ಎಂದು ರಾಹುಲ್ ಗಾಂಧಿ ತಮ್ಮ ಎಕ್ಸ್ ಖಾತೆಯಲ್ಲಿ ಆರೋಪಿಸಿದ್ದಾರೆ.ಭಾರತದ ಯುವಕರ ಭವಿಷ್ಯವನ್ನು ನಾಶಪಡಿಸಿದ್ದಕ್ಕಾಗಿ ಪ್ರಧಾನಿ ಮತ್ತು ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು ರಾಹುಲ್ ಗಾಂಧಿ ಇದೇ ವೇಳೆ ಒತ್ತಾಯಿಸಿದ್ದಾರೆ.



**ಕಠಿಣ ಕ್ರಮದ ಭರವಸೆ**

ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯ ಹಿಂದೆ ಇರುವ ಎಷ್ಟು ದೊಡ್ಡ ಪ್ರಭಾವಿಗಳೇ ಆಗಿದ್ದರೂ ಅವರನ್ನು ಬಿಡುವುದಿಲ್ಲ. ಪರೀಕ್ಷಾ ವ್ಯವಸ್ಥೆಯನ್ನು ಸಂಪೂರ್ಣವಾಗಿ ಪಾರದರ್ಶಕಗೊಳಿಸಲು ಮತ್ತು ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಲು ಸರ್ಕಾರ ಈಗಾಗಲೇ ಸಿಬಿಐ ತನಿಖೆಗೆ ಆದೇಶಿಸಿದೆ ಎಂದು ಪ್ರಧಾನಿ ಪುನರುಚ್ಚರಿಸಿದ್ದಾರೆ.

**ವಿಪಕ್ಷಗಳ ಧರಣಿಗೆ ಕೌಂಟರ್**

ನೀಟ್ ಹಗರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹಾಗೂ ಗೃಹ ಸಚಿವ ಅಮಿತ್ ಶಾ ಅವರ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಬೀದಿಗಿಳಿದು ಹೋರಾಟ ಮಾಡುತ್ತಿರುವ ಬೆನ್ನಲ್ಲೇ, ಪ್ರಧಾನಿಯವರು ವಿರೋಧ ಪಕ್ಷಗಳ ಹೋರಾಟವನ್ನು ಪ್ರಚೋದನಾಕಾರಿ ರಾಜಕಾರಣ' ಎಂದು ಪರೋಕ್ಷವಾಗಿ ಬಣ್ಣಿಸಿದ್ದಾರೆ.

## ಜಕ್ಕೂರು ಫ್ಲೈಯಿಂಗ್ ಸ್ಕೂಲ್ ಮತ್ತೆ ಹಾರಲಿದೆ: ಅಶೋಕ್

• **ಉದಯವಾಹಿನಿ, ಬೆಂಗಳೂರು**




ನಮ್ಮ ಎಚ್ಚರ.. ನಮ್ಮ ಹೋರಾಟ, ನಮ್ಮ ಧ್ವನಿ. ಇಂದು ಸತ್ಯ ಗೆದ್ದಿದೆ! ಜಕ್ಕೂರು ಫ್ಲೈಯಿಂಗ್ ಸ್ಕೂಲ್ ಮತ್ತೆ ಹಾರಲಿದೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್ ಅಶೋಕ್ ಹೇಳಿದ್ದಾರೆ. ಡಿಜಿಸಿಎ ಜಕ್ಕೂರು ಫ್ಲೈಯಿಂಗ್ ಸ್ಕೂಲ್‌ಗೆ 2026ರಿಂದ 2031ರವರೆಗೆ ಐದು ವರ್ಷಗಳ ಪರವಾನಗಿಯನ್ನು ನವೀಕರಿಸಿದ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಪ್ರಕಟಿಸಿ ಸಂತಸ ವ್ಯಕ್ತಪಡಿಸಿದ್ದಾರೆ. ಮೈಸೂರು ರಾಜಮನೆತನ ನಾಡಿಗೆ ದಾನವಾಗಿ ನೀಡಿದ ಅಮೂಲ್ಯ ಭೂಮಿಯಲ್ಲಿ ನಿರ್ಮಾಣಗೊಂಡಿರುವ ದೇಶದ ಅತ್ಯಂತ ಹಳೆಯ ಹಾರಾಟ ತರಬೇತಿ ಸಂಸ್ಥೆಗಳಲ್ಲಿ ಒಂದಾದ ಜಕ್ಕೂರು ಸರ್ಕಾರಿ ಫ್ಲೈಯಿಂಗ್ ಟ್ರೈನಿಂಗ್ ಸ್ಕೂಲ್ ಅನ್ನು ರಿಯಲ್ ಎಸ್ಟೇಟ್ ಲಾಬಿಯ ಕಪಿಮುಷ್ಟಿಯಿಂದ ರಕ್ಷಿಸಲು ಬಿಜೆಪಿ ನಡೆಸಿದ ಹೋರಾಟಕ್ಕೆ ಜಯ ಸಿಕ್ಕಿದೆ. ಕಾಂಗ್ರೆಸ್ ಸರ್ಕಾರ 'ಸ್ಪೋರ್ಟ್ಸ್ ಕಾಂಪ್ಲೆಕ್ಸ್' ಎಂಬ ನೆಪದಲ್ಲಿ ಈ ಸಂಸ್ಥೆಯನ್ನು ಸ್ಥಳಾಂತರಿಸಿ, ನೂರಾರು ಎಕರೆ ಅಮೂಲ್ಯ ಸಾರ್ವಜನಿಕ ಭೂಮಿಯನ್ನು ರಿಯಲ್ ಎಸ್ಟೇಟ್ ಹಿತಾಸಕ್ತಿಗಳಿಗೆ ಒಪ್ಪಿಸಲು ಸಂಚು ರೂಪಿಸಿತ್ತು.

ವಿಮಾನ ಹಾರಾಟವೇ ನಿಂತರೆ ಎತ್ತರದ ಕಟ್ಟಡಗಳಿಗೆ ಇದ್ದ ನಿರ್ಬಂಧಗಳು ಸಡಿಲವಾಗಿ, ಸಾರ್ವಜನಿಕ ಆಸ್ತಿ ಖಾಸಗಿ ಲಾಭದ ಸಾಧನವಾಗುತ್ತಿತ್ತು. ಡಿಜಿಸಿಎ ಜಕ್ಕೂರು ಫ್ಲೈಯಿಂಗ್ ಸ್ಕೂಲ್‌ಗೆ 2026ರಿಂದ 2031ರವರೆಗೆ ಐದು ವರ್ಷಗಳ ಪರವಾನಗಿಯನ್ನು ನವೀಕರಿಸಿದೆ. ಸುಮಾರು ಮೂರು ವರ್ಷಗಳ ಬಳಿಕ ಮತ್ತೆ ಹಾರಾಟ ತರಬೇತಿ ಆರಂಭವಾಗಲಿದೆ. ಕಾಂಗ್ರೆಸ್ ಸರ್ಕಾರದ ಭೂಗಳ್ಳತನದ ಹುನ್ನಾರಕ್ಕೆ ಹೀನಾಯ ಸೋಲಾಗಿದೆ.

ಕಾಂಗ್ರೆಸ್ ಭೂಗಳ್ಳರಿಗೆ ಮುಖಭಂಗವಾಗಿದೆ.

ಇದು ಕೇವಲ ಪರವಾನಗಿ ನವೀಕರಣವಲ್ಲ, ಸಾರ್ವಜನಿಕ ಹಿತಾಸಕ್ತಿಯು



ರಿಯಲ್ ಎಸ್ಟೇಟ್ ದುರಾಸೆಯ ಮೇಲೆ ಸಾಧಿಸಿದ ಐತಿಹಾಸಿಕ ವಿಜಯ.ಕೆಎಸ್‌ಐಸಿ ಆಗಲಿ, ಜಕ್ಕೂರು ಫ್ಲೈಯಿಂಗ್ ಸ್ಕೂಲ್ ಆಗಲಿ ಕರ್ನಾಟಕದ ಸಾರ್ವಜನಿಕ ಆಸ್ತಿಯನ್ನು ಯಾರ ಖಾಸಗಿ ರಿಯಲ್ ಎಸ್ಟೇಟ್ ಬ್ಯಾಂಕ್ ಆಗಲೂ ನಾವು ಬಿಡುವುದಿಲ್ಲ.ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಕಾಂಗ್ರೆಸ್ ಸರ್ಕಾರಕ್ಕೆ ನಮ್ಮ ಸ್ಪಷ್ಟ ಎಚ್ಚರಿಕೆ. ಕರ್ನಾಟಕದ ಪ್ರತಿಯೊಂದು ಇಂಚು ಸಾರ್ವಜನಿಕ ಭೂಮಿಯನ್ನು ನಾವು ಕಾಪಾಡುತ್ತೇವೆ. ನಿಮ್ಮ ರಿಯಲ್ ಎಸ್ಟೇಟ್ ರಾಜಕೀಯದ ವಿರುದ್ಧ ಬಿಜೆಪಿ ಸದಾ ಜನರ ಕಾವಲುಗಾರನಾಗಿ ನಿಲ್ಲಲಿದೆ. ಇದು ಕೇವಲ ಜಕ್ಕೂರು ಫ್ಲೈಯಿಂಗ್ ಸ್ಕೂಲ್ ಗೆಲುವಲ್ಲ. ಇದು ಜನಶಕ್ತಿಯ ಗೆಲುವು. ಇದು ಸಾರ್ವಜನಿಕ ಆಸ್ತಿಯ ಗೆಲುವು. ಇದು ಕನ್ನಡಿಗರ ಗೆಲುವು, ಬೆಂಗಳೂರಿನ ಗೆಲುವು. ಜನರ ಧ್ವನಿ ಗೆದ್ದಿದೆ.

## ಶಾಲಾ ಮಕ್ಕಳಲ್ಲಿ ಹೆಚ್ಚಿದ ಆರೋಗ್ಯ ಸಮಸ್ಯೆ: ಜಂಕ್ ಫುಡ್‌ವಿರುದ್ಧ ಸಮರ ಸಾರಿದ ಆಹಾರ ಸುರಕ್ಷಿತ ಇಲಾಖೆ

• **ಉದಯವಾಹಿನಿ, ಬೆಂಗಳೂರು**

ಅತಿಯಾದ ಜಂಕ್ ಫುಡ್‌ಗಳ ಸೇವನೆಯಿಂದ ಇತ್ತೀಚೆಗೆ ಮಕ್ಕಳಲ್ಲಿ ಬೊಜ್ಜು, ಮಧುಮೇಹ ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರೋದು ಆತಂಕಕ್ಕೆ ಕಾರಣವಾಗಿದೆ. ಹೀಗಾಗಿ ಮತ್ತೆ ಅಲರ್ಟ್ ಆಗಿರುವ ಆಹಾರ ಸುರಕ್ಷಿತ ಇಲಾಖೆ ಇಂತಹ ಆಹಾರಗಳ ಮಾರಾಟದ ವಿರುದ್ಧ ಮತ್ತೆ ಸಮರ ಸಾರಿದೆ.

ಮಕ್ಕಳ ಆರೋಗ್ಯದ ದೃಷ್ಟಿಯಿಂದ ಮಹತ್ವದ ನಿರ್ಧಾರಕ್ಕೆ ಇಲಾಖೆ ಮುಂದಾಗಿದ್ದು, ತಜ್ಞ ನ್ಯೂಟ್ರಿಷನ್ ವೈದ್ಯರ ಸಲಹೆ ಮೇರೆಗೆ ಶಾಲಾ ವಿದ್ಯಾರ್ಥಿಗಳ ಆಹಾರದ ಬಗ್ಗೆ ಮಾರ್ಗಸೂಚಿ ಪ್ರಕಟಿಸಲು ಸಿದ್ಧತೆ ನಡೆಸಿದೆ.

ಶಾಲೆ, ಕಾಲೇಜು ಹಾಗೂ ವಸತಿ ನಿಯಲಗಳ ಕ್ಯಾಟೀನ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಪ್‌ಗಳಿಂದ ಜಂಕ್ ಫುಡ್‌ಗಳ ಸ್ಯಾಂಪಲ್ ಪಡೆದಿರುವ ಇಲಾಖೆ ಲ್ಯಾಬ್ ವರದಿ ಆಧರಿಸಿ ಈ ಬಗ್ಗೆ ಕಡಿವಾಣ ಹಾಕಲು ಮುಂದಾಗಿದೆ.

ಆಲೂಗೆಡ್ಡೆ ಚಿಪ್ಸ್, ಫ್ರೆಂಚ್ ಫ್ರೈಸ್, ಬರ್ಗರ್, ಪಿಜ್ಜಾ, ಹಾಟ್‌ಡಾಗ್, ಸೋಡಾ, ಕೋಲ್ಡ್‌ಡ್ರಿಂಕ್ಸ್, ಎನರ್ಜಿ ಡ್ರಿಂಕ್ಸ್, ಚಾಕೊಲೇಟ್, ಡೋನಟ್ಸ್, ಐಸ್‌ಕ್ರೀಮ್, ಕ್ಯಾಂಡಿ, ಪ್ಯಾಕ್ ಮಾಡಿದ ಬಿಸ್ಕತ್ತುಗಳು ಫ್ರೈಡ್ ಸ್ನ್ಯಾಕ್ಸ್, ಫ್ರೈಡ್ ಚಿಕನ್, ಟ್ಯಾಕೋಸ್, ರಯಾಪ್ಸ್, ಇನ್‌ಸ್ಟಂಟ್ ನೂಡಲ್ಸ್, ಮ್ಯಾಗಿ ಸೇರಿದ್ದಂತೆ ಜಂಕ್ ಫುಡ್‌ಗಳ ಪಟ್ಟಿಯನ್ನೇ ರೆಡಿ ಮಾಡಿದೆ.



ಮಕ್ಕಳಲ್ಲಿನ ಒಬೆಸಿಟಿ, ಫ್ಯಾಟಿ ಲಿವರ್‌ನಂತಹ ಆರೋಗ್ಯ ಸಮಸ್ಯೆಗಳ ಹೆಚ್ಚಳಕ್ಕೆ ಬ್ರೇಕ್ ಹಾಕುವನಿಟ್ಟಿನಲ್ಲಿ ಇಂತಹ ಕ್ರಮ ಅನಿವಾರ್ಯ ಎನ್ನಲಾಗಿದೆ. ಇತ್ತೀಚೆಗೆ ಶಾಲಾ ಮಕ್ಕಳಲ್ಲಿ ಬೊಜ್ಜಿನ ಸಮಸ್ಯೆ ಗಮನಾರ್ಹವಾಗಿ ಹೆಚ್ಚಾಗಿದ್ದು, 16 ವರ್ಷಕ್ಕಿಂತ ಕಿರಿಯ ಮಕ್ಕಳಲ್ಲಿಯೇ ಅತಿಯಾಗಿ ಕಂಡುಬರುತ್ತಿದೆ. ಬಾಲ್ಯದ ಈ ಬೊಜ್ಜು ಮಕ್ಕಳ ಟೈಪ್–2 ಡಯಾಬಿಟಿಸ್, ಅಧಿಕ ಕೊಲೆಸ್ಟ್ರಾಲ್, ಅಧಿಕ ರಕ್ತದೊತ್ತಡ, ಅಸ್ಥಿಸಂಧಿವಾತ, ಹೃದಯ ಕಾಯಿಲೆ, ಪಾರ್ಶ್ವವಾಯು, ಪಿತ್ತಕೋಶದ ಕಾಯಿಲೆ, ಉಸಿರಾಟದ ತೊಂದರೆ ಸೇರಿದಂತೆ ಕೆಲವು ಕ್ಯಾನ್ಸರ್‌ಗಳ ಅಪಾಯವನ್ನೂ ಉಂಟುಮಾಡಬಹುದು ಎಂದು ತಜ್ಞರು ಕೂಡ ಎಚ್ಚರಿಸಿದ್ದಾರೆ.

ಮಕ್ಕಳಿಗೆ ಕರಿದ, ಸಂಸ್ಕರಿತ ಮತ್ತು ಸಕ್ಕರೆಭರಿತ ಆಹಾರಗಳನ್ನೇ ನೀಡುವ ಬದಲು ಪೌಷ್ಟಿಕ ಆಹಾರ ನೀಡುವತ್ತ ಪೋಷಕರು ಹೆಚ್ಚು ಗಮನ ಹರಿಸಬೇಕೆಂಬ ಸಲಹೆಗಳೂ ವ್ಯಕ್ತವಾಗಿವೆ.

# ಐಸಿಸ್‌ಗೆ ಅಕ್ರಮ ಹಣ ವರ್ಗಾವಣೆ ತನಿಖೆ : ರಾಜ್ಯದಲ್ಲಿ ಇ.ಡಿ. ಶೋಧ

• **ಉದಯವಾಹಿನಿ, ದೆಹಲಿ**

ನಿಷೇಧಿತ ಅಂತಾರಾಷ್ಟ್ರೀಯ ಭಯೋತ್ಪಾದಕ ಗುಂಪು ಐಸಿಸ್‌ಗೆ ಯುವಕರನ್ನು ಮೂಲ ಭೂತವಾದಿಗಳನ್ನಾಗಿ ಮಾಡುವ ಪ್ರಕರಣದಲ್ಲಿ ಅಕ್ರಮ ಹಣ ವರ್ಗಾವಣೆ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯ ಇಂದು ಕರ್ನಾಟಕದ ಹಲವು ಸ್ಥಳಗಳಲ್ಲಿ ಶೋಧ ನಡೆಸಿದೆ. ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಬೆಂಗಳೂರು ಮತ್ತು ಸುತ್ತಮುತ್ತಲಿನ ಸುಮಾರು ಎಂಟು ಆಯಕಟ್ಟಿನ ಸ್ಥಳಗಳ ಮೇಲೆ ಇಡಿ ಅಧಿಕಾರಿಗಳ ತಂಡ ದಿಢೀರ್ ದಾಳಿ ನಡೆಸಿ ತೀವ್ರ ಶೋಧ ಕೈಗೊಂಡಿದೆ. ರಾಷ್ಟ್ರೀಯ ತನಿಖಾ ಸಂಸ್ಥೆ ದಾಖಲಿಸಿಕೊಂಡಿದ್ದ ಎಫ್‌ಐಆರ್ ಹಾಗೂ ಸಲ್ಲಿಕೆಯಾಗಿರುವ ದೋಷಾರೋಪ ಪಟ್ಟಿಯ ಆಧಾರದ ಮೇಲೆ ಇ.ಡಿ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ನಿಬಂಧನೆಗಳ ಪ್ರಕಾರ ಈ ಕ್ರಮ ಕೈಗೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇಕ್ರಾ ವೆಲ್ಫೇರ್ ಟ್ರಸ್ಟ್, ಗೈಡೆನ್ಸ್ ಫಾರ್ ಮ್ಯಾನ್‌ಕೈಂಡ್ ಮತ್ತು ಕೆಲವು ವ್ಯಕ್ತಿಗಳನ್ನು ಒಳಗೊಂಡ ಐಸಿಸ್ ನೇಮಕಾತಿಗೆ ಸಂಬಂಧಿಸಿದ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಎಫ್‌ಐಆರ್‌ನಿಂದ ತನಿಖೆ ನಡೆಯುತ್ತಿದೆ.

ನಿಷೇಧಿತ ಭಯೋತ್ಪಾದಕ ಸಂಘಟನೆ ಐಸಿಸ್/ಐಎಸ್‌ಐಎಲ್/ಡೇಶ್‌ನೊಂದಿಗೆ ಸಂಬಂಧ ಹೊಂದಿರುವ ಆರೋಪಿಗಳು ಬೆಂಗಳೂರಿನ ಪ್ರಭಾವಶಾಲಿ ಮುಸ್ಲಿಂ ಯುವಕರನ್ನು ಐಸಿಸ್‌ಗೆ ಸೇರಲು ಮಲಭೂತವಾದಿಗಳನ್ನಾಗಿ ಮಾಡಲು ಮತ್ತು ಪ್ರೇರೇಪಿಸಲು ಕ್ರಿಮಿನಲ್ ಪಿತೂರಿಯಲ್ಲಿ ತೊಡಗಿದ್ದಾರೆ ಎಂದು ಆರೋಪಿಸಿ ಎನ್‌ಐಎ ಐದು ಜನರ ಮೇಲೆ ಆರೋಪಪಟ್ಟಿ ಸಲ್ಲಿಸಿದೆ.

**ಹಿಂದಿನ ಪ್ರಕರಣದ ಹಿನ್ನೆಲೆ:** ಆರೋಪಿಗಳು ಇಕ್ರಾ ವೆಲ್ಫೇರ್ ಟ್ರಸ್ಟ್ ಮತ್ತು ಗೈಡೆನ್ಸ ಫಾರ್ ಮ್ಯಾನ್‌ಕೈಂಡ್ ಎಂಬ ಸಂಸ್ಥೆಗಳ ಮೂಲಕ ಇಕ್ರಾ ಕ್ಯಾಂಪ್ ಹೆಸರಿನ ಮುಸ್ಲಿಂ ವ್ಯಕ್ತಿತ್ವ ಅಭಿವೃದ್ಧಿ ಕಾರ್ಯಾಗಾರಗಳನ್ನು ಆಯೋಜಿಸುತ್ತಿದ್ದರು. ಈ ಕಾರ್ಯಾಗಾರಗಳ ಮೂಲಕ ಬೆಂಗಳೂರಿನ ಪ್ರಭಾವಶಾಲಿ ಯುವಕರನ್ನು ಗುರುತಿಸಿ, ನಂತರ ಕುರಾನ್ ಸರ್ಕಲ್ ಎಂಬ ಸಾಪ್ತಾಹಿಕ ಅಧ್ಯಯನ ವಲಯದ ಮೂಲಕ ಅವರಲ್ಲಿ ಮೂಲಭೂತವಾದಿ ಆಲೋಚನೆಗಳನ್ನು ತುಂಬಲಾಗುತ್ತಿತ್ತು. ದೇಶದಲ್ಲಿ ನಡೆದ ಸಿಎಎ ಮತ್ತು ಎನ್‌ಆರ್‌ಸಿ ವಿರೋಧಿ ಪ್ರತಿಭಟನೆಗಳ ಸಂದರ್ಭದಲ್ಲಿದ್ದ ಕೋಮು ಭಾವನೆಗಳನ್ನು ಬಂಡವಾಳ ಮಾಡಿಕೊಂಡ ಈ ಗುಂಪು, ಮುಸ್ಲಿಂ ಯುವಕರನ್ನು ಇತರ ಸಮುದಾಯಗಳ ವಿರುದ್ಧ ಪ್ರಚೋದಿಸಲು ಯತ್ನಿಸಿತ್ತು. ಜೊತೆಗೆ, ಸುರಕ್ಷಿತ ಸಾಮಾಜಿಕ ಜಾಲತಾಣಗಳ ಮೂಲಕ ಐಸಿಸ್ ಸಿದ್ಧಾಂತವನ್ನು ಪಸರಿಸುತ್ತಿತ್ತು. ಮೂಲಭೂತವಾದಕ್ಕೆ ಒಳಗಾದ ಯುವಕರನ್ನು ಟರ್ಕಿ ಮಾರ್ಗವಾಗಿ ಅಕ್ರಮವಾಗಿ ಸಿರಿಯಾಕ್ಕೆ ಕಳುಹಿಸಿ, ಭಾರತದ ಮಿತ್ರ ರಾಷ್ಟ್ರವಾದ ಸಿರಿಯಾ ಸರ್ಕಾರದ ವಿರುದ್ಧ ಯುದ್ಧ ಮಾಡಲು ಪ್ರೇರೇಪಿಸಲಾಗುತ್ತಿತ್ತು. ಈ ಅಕ್ರಮ ಹಣದ ಮೂಲ, ಡಿಜಿಟಲ್ ಸಾಕ್ಷ್ಯಾಧಾರಗಳು, ಬ್ಯಾಂಕ್ ಖಾತೆಗಳ ವಿವರ ಹಾಗೂ ಈ ಟ್ರಸ್ಟ್‌ಗಳಿಗೆ ವಿದೇಶಗಳಿಂದ ಹಣ ಹರಿದುಬಂದಿದೆಯೇ ಎಂಬುದನ್ನು ಪತ್ತೆಹಚ್ಚಲು ಇಡಿ ಅಧಿಕಾರಿಗಳು ಪ್ರಸ್ತುತ ಶೋಧ ಕಾರ್ಯ ನಡೆಸುತ್ತಿದ್ದಾರೆ.




## ಅಕ್ರಮ ಹಣಕಾಸು ಜಾಲದ ಮೇಲೆ ಇ.ಡಿ ಕಣ್ಣು

**ಐಸಿಸ್ ಸಿದ್ಧಾಂತ ಪಸರಿಸುವುದು ಮಾತ್ರವಲ್ಲದೆ, ಯುವಕರನ್ನು ವಿದೇಶಕ್ಕೆ ಕಳುಹಿಸಲು ಬೃಹತ್ ಮಟ್ಟದ ಹಣದ ವಹಿವಾಟು ನಡೆದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಆರೋಪಿಗಳು ವಿವಿಧ ವ್ಯಕ್ತಿಗಳಿಂದ, ಟ್ರಸ್ಟ್‌ಗಳಿಂದ ಹಾಗೂ ತಮ ಸ್ವಂತ ಉಳಿತಾಯದ ಹಣವನ್ನು ಸಂಗ್ರಹಿಸಿ ಐಸಿಸ್ ಜಾಲಕ್ಕೆ ಹರಿಬಿಡುತ್ತಿದ್ದರು. ಈ ಕೃತ್ಯಗಳನ್ನು ಎನ್‌ಐಎ ಆರೋಪಪಟ್ಟಿಯಲ್ಲಿ ಭಾರತ ಸರ್ಕಾರದ ಜೊತೆ ಮೈತ್ರಿ ಮಾಡಿಕೊಂಡಿರುವ ಏಷ್ಯಾದ ಶಕ್ತಿ ಸಿರಿಯಾ ವಿರುದ್ಧ ಯುದ್ಧ ಸಾರುವುದು ಎಂದು ಉಲ್ಲೇಖಿಸಲಾಗಿದೆ. ಈ ಗುಂಪು ಸಿಎಎ/ಎನ್‌ಆರ್‌ಸಿ ವಿರೋಧಿ ಪ್ರತಿಭಟನೆಗಳ ಸುತ್ತಲಿನ ಭಾವನೆಗಳನ್ನು ಬಳಸಿಕೊಂಡು ಮುಸ್ಲಿಮರನ್ನು ಮುಸ್ಲಿಮೇತರರ ವಿರುದ್ಧ ಪ್ರಚೋದಿಸಲು ಮತ್ತು ಸುರಕ್ಷಿತ ಸಾಮಾಜಿಕ ಮಾಧ್ಯಮ ವೇದಿಕೆಗಳ ಮೂಲಕ ಐಸಿಸ್ ಸಿದ್ಧಾಂತವನ್ನು ಹರಡಲು ಬಳಸಿಕೊಂಡಿದೆ. ಐಸಿಸ್‌ಗಾಗಿ ಹೋರಾಡಲು ಮುಸ್ಲಿಂ ಯುವಕರ ಅಕ್ರಮ ಪ್ರಯಾಣಕ್ಕೆ ಅನುಕೂಲವಾಗುವಂತೆ ಆರೋಪಿಗಳು, ವ್ಯಕ್ತಿಗಳು, ಟ್ರಸ್ಟ್ ಮತ್ತು ಅವರ ಉಳಿತಾಯದಿಂದ ಹಣವನ್ನು ಸಂಗ್ರಹಿಸಿದ್ದಾರೆ ಎಂದು ಇ.ಡಿ ಹೇಳಿದೆ.**

**ಈ ದಿನದ ದರ** ಪೆಟ್ರೋಲ್: 110.82₹/L | ಡೀಸೆಲ್ : 98.77₹/L | ಬಂಗಾರ: ₹ 14,422/Gram 24ct ₹13,220/Gram 22ct | ಬೆಳ್ಳಿ: ₹235.00/Gram

## ಪ್ರಜಾಪ್ರಭುತ್ವದ ತಾಯಿ' ತನ್ನ ಯುವ ಮಕ್ಕಳನ್ನು ನಡೆಸಿಕೊಳ್ಳುವ ರೀತಿ ಇದಲ್ಲ: ಖರ್ಗೆ

• ಉದಯವಾಹಿನಿ, ಬೆಂಗಳೂರು

ನೀಟ್ ಪರೀಕ್ಷೆ ಅಕ್ರಮವನ್ನು ಖಂಡಿಸಿ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ದೆಹಲಿಯ ಜಂತರ್ ಮಂತರ್ ನಿಂದ ಸಂಸತ್ ಚಲೋ ಪ್ರತಿಭಟನೆಯ ವೇಳೆ ನಡೆದ ಲಾಠಿ ಚಾರ್ಜ್ ಹಿನ್ನೆಲೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಮ್ಮ 84ನೇ ಹುಟ್ಟುಹಬ್ಬವನ್ನು ಆಚರಿಸದಿರಲು ನಿರ್ಧರಿಸಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಇಂದು ಆಚರಣೆಯ ದಿನವಲ್ಲ, ಆದರೆ ಹೊಣೆಗಾರಿಕೆಯನ್ನು ಬಯಸುವ ಮತ್ತು ಪ್ರಜಾಪ್ರಭುತ್ವವನ್ನು ಪುನಃಸ್ಥಾಪಿಸುವ ದಿನವಾಗಿದೆ ಎಂದು ಬರೆದುಕೊಂಡಿದ್ದಾರೆ. ದೆಹಲಿಯ ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳ ಮೇಲೆ ನಡೆದ


ಉದಯವಾಹಿನಿ ಚಿತ್ರ

ಲಾಠಿಚಾರ್ಜ್, ಅಶ್ರುವಾಯು ಪ್ರಯೋಗ ಮತ್ತು ಸರ್ಕಾರದ ನಿರ್ದಯತೆಯದ್ದಾಗಿದೆ. ಶಾಂತಿಯುತ ಪ್ರಜಾಪ್ರಭುತ್ವ ಪ್ರತಿಭಟನೆಗೆ ದೇಶ ಸಾಕ್ಷಿಯಾಗಿದೆ. ನ್ಯಾಯಕ್ಕಾಗಿ ಆಗ್ರಹಿಸುತ್ತಿದ್ದ ವಿದ್ಯಾರ್ಥಿಗಳ ಧ್ವನಿಗೆ ಉತ್ತರ ನೀಡುವ ಬದಲು ಬಲಪ್ರಯೋಗ ಮಾಡಲಾಗಿದೆ. ಪ್ರಜಾಪ್ರಭುತ್ವದ ತಾಯಿ' ತನ್ನ ಯುವ ಮಕ್ಕಳನ್ನು ನಡೆಸಿಕೊಳ್ಳುವ ರೀತಿ ಇದಲ್ಲ ಎಂದಿದ್ದಾರೆ.

ಹೀಗಾಗಿ ಈ ನೋವಿನ ಸಂದರ್ಭಗಳಲ್ಲಿ, ನಾನು ನನ್ನ ಹುಟ್ಟುಹಬ್ಬವನ್ನು ಆಚರಿಸದಿರಲು ತೀರ್ಮಾನಿಸಿದ್ದೇನೆ. ನನಗೆ ಶುಭಾಶಯಗಳನ್ನು ಕೋರಿದ ಎಲ್ಲಾ ಕಾಂಗ್ರೆಸ್ ನಾಯಕರು, ಕಾರ್ಯಕರ್ತರು, ಬೆಂಬಲಿಗರು, ಹಿತೈಷಿಗಳು ಮತ್ತು ಪ್ರತಿಯೊಬ್ಬ ನಾಗರಿಕರಿಗೂ ನಾನು ಆಳವಾದ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ. ನಿಮ್ಮ ಪ್ರೀತಿ ಮತ್ತು ಅಭಿಮಾನ ನನಗೆ ಅತ್ಯಂತ ಮೌಲ್ಯಯುತವಾದದ್ದು, ನನ್ನ ಹೃದಯದ ಆಳದಿಂದ ನಿಮ್ಮೆಲ್ಲರಿಗೂ ಧನ್ಯವಾದಗಳು ಎಂದಿದ್ದಾರೆ.


## ಗುರುಪೂರ್ಣಿಮೆಯ ವಿಶೇಷ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಗುರುಪೂರ್ಣಿಮೆಯ ಪ್ರಯುಕ್ತ ಇದೇ ದಿನಾಂಕ 29.7.2026 ರಂದು ಬುಧವಾರ ಸಂಜೆ 5.30 ಘಂಟೆಗೆ ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಹೋಬಳಿಯ ರಾಮೋಹಳ್ಳಿಯ ಶ್ರೀ ಸಿದ್ಧಾರೂಢ ಮಿಷನ್ ಆಶ್ರಮದಲ್ಲಿ ಸದ್ಗುರು ಶ್ರೀ ಸಿದ್ಧಾರೂಢ ಮಹಾಸ್ವಾಮಿಗಳಿಗೆ ಹಾಗೂ ಸದ್ಗುರು ಶ್ರೀ ಸಾಯಿಬಾಬಾ ಅವರಿಗೆ ವಿಶೇಷ ಪೂಜೆಯನ್ನು ಏರ್ಪಡಿಸಲಾಗಿದೆ.

ಇದೇ ಸಂದರ್ಭದಲ್ಲಿ ಸಾಧಕರಿಗೆ ಮಂತ್ರದೀಕ್ಷೆ ಹಾಗೂ ಸಂನ್ಯಾಸ ದೀಕ್ಷೆಯನ್ನು ನೀಡಲಾಗುವುದು. ಕಳವಾರದ ಓಂಕಾರ ಜ್ಯೋತಿ ಮಠದ ಕಾಳೀತನಯ ಶ್ರೀ ಉಮಾಮಹೇಶ್ವರ ಸ್ವಾಮೀಜಿ ಭಕ್ತಿ ಸಂಗೀತವನ್ನು ಉಣಬಡಿಸುವರು. ವಿದ್ವಾನ್ ಕಾರ್ತಿಕ ಅವರು ಪೂಜೆಯನ್ನು ನೆರವೇರಿಸುವರು.

ಶ್ರೀ ಸಿದ್ಧಾರೂಢ ಮಿಷನ್ ಅಧ್ಯಕ್ಷ ಡಾ. ಆರೂಢಭಾರತೀ ಸ್ವಾಮೀಜಿ ಹಾಗೂ ಸರ್ವ ಧರ್ಮ ಸಂಗಮ ಪೀಠದ ಶ್ರೀ ಸಂಗಮಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗುರುಕೃಪೆಗೆ ಪಾತ್ರರಾಗಲು ಕೋರಿದೆ.


ಉದಯವಾಹಿನಿ ಚಿತ್ರ

## ಗುರುತಿಸಲಾದ ಸ್ಥಳಗಳಲ್ಲೇ ಬೀದಿ ವ್ಯಾಪಾರಕ್ಕೆ ಅವಕಾಶ..!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಗಾಂಧಿಬಜಾರ್ ಮುಖ್ಯರಸ್ತೆಯಲ್ಲಿ ಬೀದಿ ವ್ಯಾಪಾರಿಗಳಿಗೆ ನಿಗದಿತ ಸ್ಥಳಗಳನ್ನು ಗುರುತಿಸಿ, ಅಲ್ಲಿಯೇ ವ್ಯಾಪಾರ ನಡೆಸಲು ಅವಕಾಶ ನೀಡಲಾಗುವುದು ಎಂದು ಬೆಂಗಳೂರು ಕೇಂದ್ರ ನಗರ ನಿಗಮದ ಆಯುಕ್ತ ಜಗದೀಶ್ ಜಿ ತಿಳಿಸಿದ್ದಾರೆ.

ಚಿಕ್ಕಪೇಟೆ ವಿಭಾಗದ ಗಾಂಧಿಬಜಾರ್ ಮುಖ್ಯರಸ್ತೆಯಲ್ಲಿನ ಬೀದಿ ವ್ಯಾಪಾರಿಗಳಿಗೆ ನಿಗದಿತ ವ್ಯಾಪಾರ ಸ್ಥಳಗಳ ಹಂಚಿಕೆ ಕುರಿತು ನಡೆದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಹೈಕೋರ್ಟ್ ನೀಡಿರುವ ನಿರ್ದೇಶನವನ್ನು ಅಕ್ಷರಶಃ ಪಾಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ ಅವರು, ಪಾದಚಾರಿ ಮಾರ್ಗದಲ್ಲಿ ಬಿಳಿ ಗೆರೆಯಿಂದ ಗುರುತಿಸಲಾದ ಸ್ಥಳಗಳಲ್ಲಷ್ಟೇ ಬೀದಿ ವ್ಯಾಪಾರ ನಡೆಸಲು ಅವಕಾಶ ನೀಡಬೇಕು ಎಂದು ಹೇಳಿದರು. ಇದರಿಂದ ಬೀದಿ ವ್ಯಾಪಾರಿಗಳ ಜೀವನೋಪಾಯಕ್ಕೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುವುದರ ಜೊತೆಗೆ, ಸಾರ್ವಜನಿಕರಿಗೆ ಪಾದಚಾರಿ ಮಾರ್ಗಗಳು ಸುರಕ್ಷಿತವಾಗಿ, ಅಡೆತಡೆಗಳಿಲ್ಲದೆ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈಗಾಗಲೇ ಬಿಸಿಸಿಸಿ ವತಿಯಿಂದ ಪಾದಚಾರಿ ಮಾರ್ಗದಲ್ಲಿ ಬಿಳಿ ಗೆರೆಯನ್ನು ಎಳೆದು ನಿಗದಿತ ವ್ಯಾಪಾರ ವಲಯಗಳನ್ನು ಗುರುತಿಸುವ ಕಾರ್ಯ ಆರಂಭಿಸಲಾಗಿದೆ. ಈ ಗುರುತುಗಳ ಉದ್ದೇಶ ಬೀದಿ ವ್ಯಾಪಾರಿಗಳನ್ನು ನಿಯಂತ್ರಿತ ಪ್ರದೇಶಗಳಲ್ಲಿ ವ್ಯಾಪಾರ ಮಾಡಲು ಅವಕಾಶ ನೀಡುವುದರ ಜೊತೆಗೆ, ಪಾದಚಾರಿಗಳಿಗೆ ಮುಕ್ತವಾಗಿ ಸಂಚರಿಸಲು ಸಾಕಷ್ಟು ಜಾಗ ಉಳಿಯುವಂತೆ ನೋಡಿಕೊಳ್ಳುವುದಾಗಿದೆ.

## ವಿಪ್ರ ಸ್ವಉದ್ಯಮ ನೇರ ಸಾಲ ಯೋಜನೆ ಕರಪತ್ರ ಬಿಡುಗಡೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವಿಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಯ 2026-27ನೇ ಸಾಲಿಗೆ ಅರ್ಜಿ ಆಹ್ವಾನಿಸಿರುವ ಕುರಿತ ಕರಪತ್ರವನ್ನು ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ ಅವರು ಇಂದು ವಿಧಾನಸೌಧದಲ್ಲಿ ಬಿಡುಗಡೆ ಮಾಡಿದರು.

ಈ ವೇಳೆ ಮಾತನಾಡಿ, ರಾಜ್ಯದಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ ಮತ್ತು ಇನ್ನಿತರ ಯೋಜನೆಗಳನ್ನು ರೂಪಿಸಿ, ಬ್ರಾಹ್ಮಣ ಸಮುದಾಯದ ಬಡವರ ಸರ್ವತೋಮುಖ ಅಭಿವೃದ್ಧಿಗಾಗಿ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಲಾಗಿದೆ. ಎಲ್ಲಾ ವರ್ಗದ ಬಡವರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಡಿಸಿಎಂ ಪರಮೇಶ್ವರ ಅವರು ಹೇಳಿದರು. ನಮ್ಮ ಸರ್ಕಾರವು 2025-26ನೇ ಸಾಲಿನಲ್ಲಿ ನೂತನವಾಗಿ 'ವಿಪ್ರ ಸ್ವ ಉದ್ಯಮ ನೇರ ಸಾಲ' ಯೋಜನೆಯನ್ನು ಮಂಡಳಿಯ ವತಿಯಿಂದ ಪ್ರಾರಂಭಿಸಿ, ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಹಸು ಸಾಕಾಣಿಕೆಯಂತಹ ಉದ್ಯೋಗ ಕೈಗೊಳ್ಳಲು ಆರ್ಥಿಕ ನೆರವು ನೀಡಲಾಗಿದೆ.

ಈ ಯೋಜನೆಯ ಅಡಿಯಲ್ಲಿ ಕನಿಷ್ಠ ರೂ. 1 ಲಕ್ಷ ಹಾಗೂ ಗರಿಷ್ಠ ರೂ.2 ಲಕ್ಷಗಳ ಸಾಲ-ಸಹಾಯಧನ ನೀಡಲಾಗಿರುತ್ತದೆ. ಇದರಲ್ಲಿ ಶೇ 20 ಸಬ್ಸಿಡಿಯನ್ನು ನೀಡಲಾಗಿರುತ್ತದೆ.

ಉಳಿಕೆ ಶೇ. 80 ಸಾಲದ ಮೊತ್ತಕ್ಕೆ ಶೇ 4ರಷ್ಟು ಬಡ್ಡಿಯಂತೆ ಒಟ್ಟು 34 ಕಂತುಗಳಲ್ಲಿ ಸಾಲ ಮರು ಪಾವತಿಸಬೇಕಾಗಿದೆ. ರಾಜ್ಯದಲ್ಲಿ ಬ್ರಾಹ್ಮಣ ಸಮುದಾಯದಲ್ಲಿ ಹಿಂದುಳಿದವರು ಈ ಸಾಲ ಯೋಜನೆಯ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಮುಂದೆ ಬರಬೇಕು ಎಂದು ಉಪಮುಖ್ಯಮಂತ್ರಿಗಳಾದ ಡಾ. ಜಿ. ಪರಮೇಶ್ವರ ಅವರು ಹೇಳಿದರು.

## ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ದೆಹಲಿಯಲ್ಲಿ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಖಂಡಿಸಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ನಡೆಸಿರುವುದನ್ನು ಖಂಡಿಸಿ, ವಿದ್ಯಾರ್ಥಿಗಳ ಧ್ವನಿಯನ್ನು ಹತ್ತಿಕ್ಕುವ ಮೂಲಕ ಪ್ರಜಾಪ್ರಭುತ್ವದ ಮೇಲೆ ದಾಳಿ ನಡೆಸಿರುವ ಕೇಂದ್ರ ಸರ್ಕಾರದ ವಿರುದ್ಧ ಹಾಗೂ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಪಕ್ಷದ ವತಿಯಿಂದ ಕಾಂಗ್ರೆಸ್ ಭವನದಲ್ಲಿ ಪ್ರತಿಭಟನೆ ನಡೆಸಲಾಯಿತು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್. ಮನೋಹರ್, ಕಾಂಗ್ರೆಸ್ ಪಕ್ಷದ ಮುಖಂಡರಾದ ಆನಂದ್, ಆದಿತ್ಯ, ಪುಟ್ಟರಾಜು , ಕುಶಲ್ ಹರುವೇಗೌಡ, ನವೀನ್, ಉಮೇಶ್, ಚಂದ್ರಶೇಖರ್ ,ಉಮೇಶ್,ರಂಜಿತ್,ಹೇಮರಾಜ್, ಪ್ರವೀಣ್, ಓಬಲೇಶ್ ಹಾಗೂ ಪಕ್ಷದ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ರಾಜ್ಯದ 150 ವರ್ಷದ ಹಳೆಯ 120 ಕೋಟಿ ಭೂ ದಾಖಲೆಗಳು ಅಗ್ನಿ ನಿರೋಧಕ ಕಪಾಟುಗಳಲ್ಲಿ ಸುಭದ್ರ

• ಉದಯವಾಹಿನಿ, ಬೆಂಗಳೂರು

100 ರಿಂದ 150 ವರ್ಷಗಳಷ್ಟು ಹಳೆಯದಾದ ದಾಖಲೆಗಳನ್ನು ಒಳಗೊಂಡಂತೆ 120 ಕೋಟಿಗೂ ಹೆಚ್ಚು ಸರ್ಕಾರಿ ದಾಖಲೆಗಳನ್ನು ಅಗ್ನಿ ನಿರೋಧಕ, ಹೆಚ್ಚಿನ ಭದ್ರತೆಯ ಕಾಂಪ್ಯಾಕ್ಟರ್‌ಗಳಲ್ಲಿ ಸುರಕ್ಷಿತಗೊಳಿಸಿದ ದೇಶದ ಮೊದಲ ರಾಜ್ಯ ಕರ್ನಾಟಕವಾಗಿದೆ. ಈ ಕಾಂಪ್ಯಾಕ್ಟರ್‌ಗಳು ಕೀ ಲಾಕಿಂಗ್ ವ್ಯವಸ್ಥೆಯನ್ನು ಹೊಂದಿದ್ದು, ಅಧಿಕೃತ ಸಿಬ್ಬಂದಿಗೆ ಮಾತ್ರ ಪ್ರವೇಶವಿರುತ್ತದೆ.

ಬಯೋಮೆಟ್ರಿಕ್ ವ್ಯವಸ್ಥೆ ಹೊಂದಿದ್ದು ನಿರ್ಬಂಧಿತ ಕೋಣೆಯಲ್ಲಿ ಇರಿಸಲಾಗಿದೆ. ಈ ಕ್ರಮವು ವರ್ಧಿತ ಸುರಕ್ಷತೆ ಮತ್ತು ಭದ್ರತಾ ಕ್ರಮಗಳ ಮೂಲಕ ಅಮೂಲ್ಯವಾದ ಆರ್ಕೈವಲ್ ದಾಖಲೆಗಳನ್ನು ಸಂರಕ್ಷಿಸುವ ಗುರಿಯನ್ನು ಹೊಂದಿದೆ. ಇನ್ನು ಮುಂದೆ ಅಗತ್ಯವಿಲ್ಲದ ದಾಖಲೆಗಳನ್ನು ನಾಶ ಮಾಡಲು ಸರ್ಕಾರಿ ನಿಯಮಗಳು ಅನುಮತಿ ನೀಡುತ್ತವೆ. ಆದರೆ ಪ್ರಮುಖ ಮತ್ತು ಐತಿಹಾಸಿಕವಾಗಿರುವ ಮಹತ್ವದ ದಾಖಲೆಗಳನ್ನು ಶಾಶ್ವತವಾಗಿ ಸಂರಕ್ಷಿಸಲಾಗಿದೆ.

# ಬರ ಪರಿಸ್ಥಿತಿ ಪರಿಶೀಲನೆಗೆ ಡಿಸಿಗಳಿಗೆ ಸೂಚನೆ

## ಕುಡಿಯುವ ನೀರಿಗೆ 5 ಕೋಟಿ

• ಉದಯವಾಹಿನಿ, ಬೆಂಗಳೂರು

ಶಾಶ್ವತ ನಿವಾಸಿ ಪ್ರಮಾಣಪತ್ರ ವಿತರಿಸುವ ರಾಜ್ಯ ಸರ್ಕಾರದ ನಿರ್ಧಾರವನ್ನು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸಮರ್ಥಿಸಿಕೊಂಡಿದ್ದು, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ನೈಜ ನಿವಾಸಿಗಳಿಗೆ ನೆರವಾಗುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಇದನ್ನು ರಾಜಕೀಯಗೊಳಿಸಬಾರದು ಎಂದು ಹೇಳಿದ್ದಾರೆ.

ಇಂದು ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಐಆರ್ ವೇಳೆ ಹಳೆಯ ಮತದಾರರ ಪಟ್ಟಿಯ ದಾಖಲೆಗಳನ್ನು ಸಲ್ಲಿಸಲು ಸಾಧ್ಯವಾಗದವರಿಗೆ ಪಿಆರ್‌ಸಿ ಸಹಕಾರಿಯಾಗಲಿದೆ. ಈ ಪ್ರಕ್ರಿಯೆ ಸಂಪೂರ್ಣವಾಗಿ ಕಾನೂನುಬದ್ಧವಾಗಿ ನಡೆಯುತ್ತಿದೆ ಎಂದು ಸ್ಪಷ್ಟಪಡಿಸಿದರು.

**1** ಕಾನೂನಿನ ಪ್ರಕಾರವೇ ನಡೆಯುತ್ತಿದೆ
**2** ಪರಿಗಣಿಸಿ ಸರ್ಕಾರದ ತೀರ್ಮಾನ
**3** ಪ್ರತಿ ತಾಲ್ಲೂಕಿಗೆ 1ಕೋಟಿ ಅನುದಾನ

ಕರ್ನಾಟಕದಲ್ಲಿ ಜನಿಸಿರುವ ಆಧಾರದ ಮೇಲೆ ಶಾಶ್ವತ ನಿವಾಸಿ ಪ್ರಮಾಣಪತ್ರ (ಪಿಆರ್‌ಸಿ) ನೀಡಲು ಸರ್ಕಾರ ತೀರ್ಮಾನಿಸಿದೆ. ಹೆಚ್ಚಿನ ಜನರಿಂದ 2002ರ ಮತದಾರರ ಪಟ್ಟಿಯ ವಿವರಗಳನ್ನು ಕೇಳಲಾಗಿದೆ. ಸುಮಾರು 50ರಿಂದ 60 ಶೇಕಡಾ ಜನರ ಬಳಿ ಆ ದಾಖಲೆಗಳು ಇರಬಹುದು. ಆದರೆ ಕೆಲವರ ಬಳಿ ಅವು ಇಲ್ಲದಿರಬಹುದು. ಅಂತಹವರಿಗೆ ಪಿಆರ್‌ಸಿ ಉಪಯೋಗವಾಗಲಿದೆ ಎಂದು ಹೇಳಿದರು.

ಈ ಹಿಂದೆಯೂ ತಹಶೀಲ್ದಾರರು ಜಾತಿ ಪ್ರಮಾಣಪತ್ರಗಳನ್ನು ನೀಡುತ್ತಿದ್ದರು ಎಂದು ಹೇಳಿದ ಪರಮೇಶ್ವರ್, ಈಗ ಸರ್ಕಾರ ಕೈಗೊಂಡಿರುವ ಕ್ರಮವನ್ನು ಟೀಕಿಸುವುದರಲ್ಲಿ ಅರ್ಥವಿಲ್ಲ ಎಂದು ಹೇಳಿದರು.

ಈ ಪ್ರಕ್ರಿಯೆಗೆ ಔಪಚಾರಿಕ ರೂಪ ನೀಡಬೇಕಾಗಿದೆ. ಅರ್ಜಿದಾರರು 10 ವರ್ಷಗಳಿಂದ ಕರ್ನಾಟಕದಲ್ಲಿ ವಾಸಿಸುತ್ತಿರುವುದಕ್ಕೆ ಪುರಾವೆ ನೀಡಿದರೆ ಅವರಿಗೆ ಪ್ರಮಾಣಪತ್ರ ನೀಡಲಾಗುತ್ತದೆ. ನಾವು ನಮ್ಮ ಹೆಣ್ಣುಮಕ್ಕಳನ್ನು ಬಾಂಗ್ಲಾದೇಶದವರಿಗೆ ಮದುವೆ ಮಾಡಿಕೊಡುತ್ತೇವೆಯೇ? ಇಲ್ಲ. ನಾವು ಕೇಂದ್ರ ಸರ್ಕಾರದ ವಿರುದ್ಧ ಏನನ್ನೂ ಮಾಡುತ್ತಿಲ್ಲ.

ಯಾವುದೇ ಕಾನೂನನ್ನೂ ಉಲ್ಲಂಘಿಸುತ್ತಿಲ್ಲ. ಕಾನೂನಿನ ಪ್ರಕಾರವೇ ಎಲ್ಲವೂ ನಡೆಯುತ್ತಿದೆ ಎಂದು ಹೇಳಿದರು. ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ನಡೆಯುತ್ತಿರುವ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾನುವಾರ ಮನೆ ಬಾಗಿಲಿಗೆ ಪಿಆರ್‌ಸಿ ತಲುಪಿಸುವ ಯೋಜನೆ ಘೋಷಿಸಿದ್ದರು.

ಜನರ ವಾಸಿಸುವ ಮತ್ತು ಮತ ಚಲಾಯಿಸುವ ಹಕ್ಕನ್ನು ರಕ್ಷಿಸಲು ಇಂತಹ ಕ್ರಮ ಕೈಗೊಂಡಿರುವ ಏಕೈಕ ರಾಜ್ಯ ಕರ್ನಾಟಕ ಎಂದು ಅವರು ಹೇಳಿದ್ದರು.

ಇದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿರುವ ಬಿಜೆಪಿ, ಈ ಕ್ರಮವು ಸಾಂವಿಧಾನಿಕ ಮಿತಿಯನ್ನು ಮೀರುವಂತದ್ದು ಎಂದು ಆರೋಪಿಸಿದ್ದು, ಇದರ ಗಂಭೀರ ಪರಿಣಾಮಗಳು ಉಂಟಾಗಬಹುದು ಎಂದು ಎಚ್ಚರಿಸಿದೆ.


ಉದಯವಾಹಿನಿ ಚಿತ್ರ

### ವರದಿ ಸಲ್ಲಿಸುವಂತೆ ಈಗಾಗಲೇ ಸೂಚನೆ

ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿಯನ್ನು ಜಿಲ್ಲಾಧಿಕಾರಿಗಳು ಪರಿಶೀಲಿಸಿ ವರದಿ ಸಲ್ಲಿಸುವಂತೆ ಈಗಾಗಲೇ ಸೂಚನೆ ನೀಡಲಾಗಿದೆ. ಅದರ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಎಲ್ಲಾ ಕ್ರಮಗಳನ್ನು ಬಿಜೆಪಿ ನಾಯಕರು ಅರ್ಥಮಾಡಿಕೊಂಡು ಜವಾಬ್ದಾರಿಯಿಂದ ಮಾತನಾಡಬೇಕು ಎಂದು ಅವರು ತಿರುಗೇಟು ನೀಡಿದರು.

> ಬರ ನಿರ್ವಹಣೆ ಕುರಿತು ಬಿಜೆಪಿ ಮಾಡುತ್ತಿರುವ ಟೀಕೆಯನ್ನು ತಳ್ಳಿಹಾಕಿದ ಪರಮೇಶ್ವರ್, ಪ್ರತಿ ಜಿಲ್ಲೆಗೆ ಕುಡಿಯುವ ನೀರಿನ ವ್ಯವಸ್ಥೆಗಾಗಿ 5 ಕೋಟಿ ಬಿಡುಗಡೆ ಮಾಡಲಾಗಿದೆ. ಜಿಲ್ಲಾಧಿಕಾರಿಗಳ ವೈಯಕ್ತಿಕ ಠೇವಣಿ ಖಾತೆಗಳಲ್ಲಿ 329 ಕೋಟಿ ಲಭ್ಯವಿದ್ದು, ಪ್ರತಿ ತಾಲ್ಲೂಕಿಗೆ 1 ಕೋಟಿ ಅನುದಾನ ಘೋಷಿಸಲಾಗಿದೆ ಎಂದು ಹೇಳಿದರು.-ಡಾ. ಜಿ. ಪರಮೇಶ್ವರ್

### ಕರ್ನಾಟಕದಲ್ಲಿ ಜನಿಸಿರುವ ಆಧಾರದ ಮೇಲೆ ಶಾಶ್ವತ ನಿವಾಸಿ ಪ್ರಮಾಣಪತ್ರ (ಪಿಆರ್‌ಸಿ) ನೀಡಲು ಸರ್ಕಾರ ತೀರ್ಮಾನಿಸಿದೆ

> ರಾಜ್ಯದ ಬರ ಪರಿಸ್ಥಿತಿ ಕುರಿತು ಮಾತನಾಡಿದ ಅವರು, ರೈತರು ಮತ್ತು ಸಾಮಾನ್ಯ ಜನರಿಗೆ ಅನುಕೂಲವಾಗುವಂತೆ ನಿರ್ಧಾರ ಕೈಗೊಳ್ಳಬೇಕು. ಉದ್ಯೋಗದ ಕೊರತೆಯಿಂದ ವಲಸೆ ಹೋಗಬೇಕಾಗಿರುವವರ ಹಿತವನ್ನೂ ಗಮನದಲ್ಲಿಟ್ಟುಕೊಳ್ಳಲಾಗುತ್ತದೆ. ಈ ಎಲ್ಲ ಅಂಶಗಳನ್ನು ಪರಿಗಣಿಸಿ ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದರು.
> – ಡಾ. ಜಿ. ಪರಮೇಶ್ವರ್

### ಫುಟ್‌ಪಾತ್ ತೆರವಿಗೆ ಜನರು ಸಹಕಾರ ಕೊಡಬೇಕು

ನಗರದಲ್ಲಿ ಮಾಡ್ತಿರೋ ಫುಟ್‌ಪಾತ್ ತೆರವಿಗೆ ಜನರು ಸಹಕಾರ ಕೊಡಬೇಕು ಅಂತ ಡಿಸಿಎಂ ಪರಮೇಶ್ವರ್ ಮನವಿ ಮಾಡಿದ್ದಾರೆ. ಶಿವಾಜಿನಗರದಲ್ಲಿ ತೆರವು ಮಾಡಲು ಹೋದ ಅಧಿಕಾರಿಗಳ ಮೇಲೆ ಹಲ್ಲೆ ಮಾಡಿದ ಪ್ರಕರಣಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಫುಟ್‌ಪಾತ್ ತೆರವಿಗೆ ಜನ ಸಹಕಾರ ಕೊಡಬೇಕು. ಫುಟ್‌ಪಾತ್ ಅಂದರೆ ಏನು? ಫುಟ್‌ಪಾತ್ ಅನ್ನು ಅಂಗಡಿ ಪಾತ್ ಮಾಡಿದ್ರೆ, ಹೇಗೆ? ಅಂತ ಪ್ರಶ್ನೆ ಮಾಡಿದ್ದಾರೆ. ಶಿವಾಜಿ ನಗರದಲ್ಲಿ ತೆರವು ಮಾಡಲು ಹೋದಾಗ ಅಧಿಕಾರಿಗಳ ಮೇಲೆ ಹಲ್ಲೆ ಮಾಡಿದ್ದಾರೆ. ಹಲ್ಲೆ ಮಾಡಿದ್ರೆ ಅವರ ಮೇಲೆ ಕ್ರಮ ಕೈಗೊಳ್ಳಲಾಗುತ್ತದೆ. ದೇಶದಲ್ಲಿ ಕಾನೂನು ಇಲ್ಲವಾ? ಯಾರೇ ಆದ್ರು ಹಲ್ಲೆ ಮಾಡೋಕೆ ಅಧಿಕಾರ ಇಲ್ಲ. ಪೊಲೀಸರು ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ತಾರೆ ಎಂದಿದ್ದಾರೆ.

### ಬಾಂಗ್ಲಾ ನಿವಾಸಿಗಳಿಗೆ ಪಿಆರ್‌ಸಿ ಕೊಡೋಕಾಗುತ್ತಾ?

ಅಕ್ರಮ ಬಾಂಗ್ಲಾ ಮತ್ತು ಪಾಕಿಸ್ತಾನ ಪ್ರಜೆಗಳಿಗೆ ಶಾಶ್ವತ ನಿವಾಸ ಪ್ರಮಾಣ ಪತ್ರ ಕೊಡಲು ಸರ್ಕಾರ ಮುಂದಾಗಿದೆ ಎಂಬ ಬಿಜೆಪಿ ಆರೋಪಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ನಾನೇ ಹಿಂದೆ ಸದನದಲ್ಲಿ ಬಾಂಗ್ಲಾದೇಶ ಸೇರಿ ಬೇರೆ ಬೇರೆ ವಿದೇಶದಿಂದ ಅಕ್ರಮವಾಗಿ ಇಲ್ಲಿಗೆ ಬಂದಿದ್ದಾರೆ ಉತ್ತರ ಕೊಟ್ಟಿದ್ದೆ. ಈ ಶಾಶ್ವತ ನಿವಾಸ ಪ್ರಮಾಣ ಪತ್ರ ಕೊಟ್ಟರೆ ನಮ್ಮವರು ಯಾರು ಅಂತ ಗೊತ್ತಾಗುತ್ತದೆ. ಬಾಂಗ್ಲಾದೇಶದವರಿಗೆ ಕೊಡಲು ಆಗುತ್ತದೆಯಾ? ಎಂದು ಕೇಳಿದ್ದಾರೆ. ಯಾರು 10 ವರ್ಷದಿಂದ ಇಲ್ಲಿ ಇಲ್ಲವೋ ಅವರನ್ನ ಹೊರಗೆ ಹಾಕ್ತೀವಿ. ನಾವು ಪೌರತ್ವ ಕೊಡ್ತಿಲ್ಲ. ಶಾಶ್ವತ ನಿವಾಸ ಪ್ರಮಾಣ ಪತ್ರ ಕೊಡ್ತಾ ಇದ್ದೇವೆ. ಪೌರತ್ವ ಮತ್ತು ಶಾಶ್ವತ ನಿವಾಸ ಪತ್ರ ಎಂದರೇನು ಅಂತ ಬಿಜೆಪಿ ಅವರು ಮೊದಲು ತಿಳಿದುಕೊಳ್ಳಲಿ ಅಂತ ಕಿಡಿಕಾರಿದ್ದಾರೆ. ಪೌರತ್ವ ಪ್ರಮಾಣ ಪತ್ರ ಕೊಡೋದು ಕೇಂದ್ರ ಸರ್ಕಾರ ನಾವಲ್ಲ.



### ಮನೆ ಮನೆಗೆ ಜಾತಿ ಪ್ರಮಾಣ ಪತ್ರ

ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪ್ರವರ್ಗ 2ಎ, 2ಬಿ ಹಾಗೂ 3ಎ ಮತ್ತು 3ಬಿ ಪ್ರವರ್ಗಗಳಲ್ಲಿ 1.36 ಕೋಟಿ ಜನರಿದ್ದಾರೆ. ಪ್ರವರ್ಗ 1ರಲ್ಲಿ ಜಾತಿ ಪ್ರಮಾಣ ಪತ್ರಗಳ ಸಂಖ್ಯೆ 0.86 ಕೋಟಿ ಇದೆ. ಅನುಸೂಚಿ ಜಾತಿ ಮತ್ತು ಅನುಸೂಚಿತ ಪಂಗಡಗಳ ಪ್ರಮಾಣ ಪತ್ರ 2.63 ಕೋಟಿ ಇದೆ. ಒಟ್ಟಾರೆ 4.85 ಕೋಟಿ ಜಾತಿ ಪ್ರಮಾಣ ಪತ್ರವನ್ನು ನೀಡಲು ಲೆಕ್ಕ ಹಾಕಲಾಗಿದ್ದು, ತಲುಪಿಸುವ ಕಾರ್ಯ ಪ್ರಾರಂಭಿಸುತ್ತಿದ್ದೇವೆ ಎಂದರು. ಅಂತೆಯೇ ವೆಬ್‌ಸೈಟ್ ಮೂಲಕ ಉಚಿತವಾಗಿ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೋಬಳಿ ಮಟ್ಟದಲ್ಲಿ ಸಹಾಯ ಕೇಂದ್ರಗಳಿಂದ ಪಡೆಯಬಹುದಾಗಿದೆ. ವಾಟ್ಸಪ್ ಮೂಲಕ ಮತ್ತು ನೇರವಾಗಿ ಪಡೆದುಕೊಳ್ಳಬಹುದು. ಈ ರೀತಿಯ ಅವಕಾಶ ಕಲ್ಪಿಸಿಕೊಟ್ಟಿದ್ದೇವೆ. ನಾಡಕಚೇರಿ, ಗ್ರಾಮ ಒನ್ ಸೇವಾ ಕೇಂದ್ರದಲ್ಲಿ ಅರ್ಜಿ ಸಲ್ಲಿಸಿದ್ದರೆ ಅಥವಾ ಬಾಪೂಜಿ ಕೇಂದ್ರದಲ್ಲಿ ಅರ್ಜಿ ಸಲ್ಲಿಸಿದವರು ವೆಬ್‌ಸೈಟ್ ಮೂಲಕ ಸರ್ಟಿಫಿಕೇಟ್ ಪಡೆದುಕೊಳ್ಳುವ ಅವಕಾಶಗಳನ್ನು ಕಲ್ಪಿಸಿಕೊಡಲಾಗಿದೆ ಎಂದು ಪರಮೇಶ್ವರ್ ಮಾಹಿತಿ ನೀಡಿದರು.

## ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ಅಗತ್ಯ ಅನುಮತಿ ಪಡೆಯುತ್ತೇವೆ: ಸಿಎಂ ಡಿ.ಕೆ. ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ಅಗತ್ಯವಿರುವ ಎಲ್ಲಾ ಅನುಮತಿಗಳನ್ನು ಪಡೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಹಿಂದಿನ ಬಿಜೆಪಿ ಸರ್ಕಾರವನ್ನು ಟೀಕಿಸಿದ ಅವರು, ಅದು ಡಬಲ್ ಇಂಜಿನ್ ಸರ್ಕಾರವಾಗಿತ್ತು. ಆದರೆ ಹೇಗೋ ಆ ಎಂಜಿನ್‌ಗಳು ಸ್ಟಾರ್ಟ್ ಆಗಲೇ ಇಲ್ಲ, ವಾಹನಗಳೂ ಚಲಿಸಲಿಲ್ಲ ಎಂದು ವ್ಯಂಗ್ಯವಾಡಿದರು. ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಹೆಚ್ಚಿಸಲು ಕಾಂಗ್ರೆಸ್ ಸರ್ಕಾರ ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಹೇಳಿದ ಅವರು, ಎಲ್ಲಾ ಅಡೆತಡೆಗಳನ್ನು ನಿವಾರಿಸಿ ಹಾಗೂ ಕೆಲವರ ವಿರೋಧದ ನಡುವೆಯೂ ಯಲಹಂಕ ಅನಿಲ ಆಧಾರಿತ ವಿದ್ಯುತ್ ಸ್ಥಾವರವನ್ನು ಆರಂಭಿಸಲಾಗಿದೆ. ಈಗ ಅದರ ಲಾಭ ರಾಜ್ಯದ ಜನರಿಗೆ ಸಿಗುತ್ತಿದೆ. ಶರಾವತಿ ಯೋಜನೆಯೂ ಇದೇ ರೀತಿಯಲ್ಲಿ ಜನರಿಗೆ ಪ್ರಯೋಜನಕಾರಿಯಾಗಲಿದೆ ಎಂದು ಹೇಳಿದರು. ಕರ್ನಾಟಕ ವಿದ್ಯುತ್ ನಿಗಮ ನಿಯಮಿತ 57ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿದ ಡಿ ಕೆ ಶಿವಕುಮಾರ್, ಒಮ್ಮೆ ನಿರ್ಧಾರ ಕೈಗೊಂಡು ಜನರಿಗೆ ಭರವಸೆ ನೀಡಿದ ಬಳಿಕ ಅದನ್ನು ಜಾರಿಗೆ ತರಲಾಗುವುದು. ಯೋಜನೆಗೆ ಅಗತ್ಯವಿರುವ ಎಲ್ಲಾ ಕಾನೂನು ಪ್ರಕ್ರಿಯೆಗಳು ಹಾಗೂ ಅನುಮತಿಗಳನ್ನು ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ರಾಜ್ಯದಲ್ಲಿ ಸೌರ ವಿದ್ಯುತ್ ಉತ್ಪಾದನೆ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಂಡಿದೆ ಎಂದ ಅವರು, ಪಾವಗಡದಲ್ಲಿ ಸೌರ ವಿದ್ಯುತ್ ಯೋಜನೆಗಾಗಿ ರೈತರು ಸ್ವಯಂಪ್ರೇರಿತವಾಗಿ ತಮ್ಮ ಭೂಮಿಯನ್ನು ನೀಡುತ್ತಿದ್ದಾರೆ. ಸರ್ಕಾರ 10,000 ಎಕರೆ ಭೂಮಿಯಲ್ಲಿ ಹೊಸ ಯೋಜನೆ ರೂಪಿಸುತ್ತಿದೆ. ಇದು ರೈತರಿಗೆ ಅನುಕೂಲಕರವಾಗಲಿದೆ. ಹಿಂದಿನ ಮಾದರಿಯಂತೆ ಭೂಸ್ವಾಧೀನ ಮಾಡುವುದಿಲ್ಲ. ದೀರ್ಘಾವಧಿಯ ಗುತ್ತಿಗೆ ಒಪ್ಪಂದದ ಮೂಲಕ ರೈತರಿಗೆ ಸೌರ ಉದ್ಯಾನ ಯೋಜನೆಯಡಿ ಮಾಸಿಕ ಆರ್ಥಿಕ ಲಾಭ ದೊರೆಯುತ್ತಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

> ಸರ್ಕಾರಿ ವಲಯದಲ್ಲಿ ಇಂಜಿನಿಯರ್‌ಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದು ತಿಳಿಸಿದ ಅವರು, ಬೆಂಗಳೂರಿನಲ್ಲಿ 26 ಲಕ್ಷಕ್ಕೂ ಹೆಚ್ಚು ಇಂಜಿನಿಯರ್‌ಗಳು ಕೆಲಸ ಮಾಡುತ್ತಿದ್ದಾರೆ. ಅವರಲ್ಲಿ ಸುಮಾರು 2 ಲಕ್ಷ ಮಂದಿ ಅಂತರರಾಷ್ಟ್ರೀಯ ಪಾಸ್‌ಪೋರ್ಟ್ ಹೊಂದಿದ್ದಾರೆ ಎಂದು ಹೇಳಿದರು.- ಡಿ.ಕೆ. ಶಿವಕುಮಾರ್

## ಗರ್ಭಿಣಿ ಮಹಿಳೆಗೆ 'ಸಾವಿನ ಕಂಟಕ' ಎಂದು ಹೆದರಿಸಿ ಚಿನ್ನಾಭರಣ ದೋಚಿದ ಖದೀಮ!

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಖದೀಮನೊಬ್ಬ ಬುಡುಬುಡುಕೆ ಸ್ವಾಮೀಜಿ ವೇಷದಲ್ಲಿ ಬಂದು, ಗರ್ಭಿಣಿ ಮಹಿಳೆಗೆ 'ನಿಮ್ಮ ಮನೆಯಲ್ಲಿ ದೋಷವಿದೆ, ಸಾವಿನ ಕಂಟಕ ಇದೆ' ಎಂದು ಹೆದರಿಸಿ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ ದೋಚಿ ಪರಾರಿಯಾಗಿರುವ ಆಘಾತಕಾರಿ ಘಟನೆ ನಡೆದಿದೆ. ಬೆಂಗಳೂರು ಉತ್ತರ ತಾಲ್ಲೂಕಿನ ಹೆಗ್ಗಡದೇವನಪುರದಲ್ಲಿ ಈ ಘಟನೆ ನಡೆದಿದ್ದು, ಮೋಹನ್ ಎಂಬುವರ ಮನೆಗೆ ಸ್ವಾಮೀಜಿ ವೇಷದಲ್ಲಿ ಬಂದ ವ್ಯಕ್ತಿ, ಅವರ ಪತ್ನಿ ಉಷಾ ಎಂಟು ತಿಂಗಳ ಗರ್ಭಿಣಿಯಾಗಿರುವುದನ್ನು ಗಮನಿಸಿ, ಮನೆಗೆ ದೋಷವಿದೆ ಎಂದು ನಂಬಿಸಿದ್ದಾನೆ. ನಂತರ ನನಗೆ ಯಾವುದೇ ಹಣ ಬೇಡ, ನಾನು ಉಚಿತವಾಗಿ ಪೂಜೆ ಮಾಡುತ್ತೇನೆ ಎಂದು ಹೇಳಿ ಮನೆಯೊಳಗೆ ಪ್ರವೇಶಿಸಿದ್ದಾನೆ. ಪೂಜೆಗಾಗಿ ಒಂದು ಕುಡಿಕೆಯಲ್ಲಿ ಮನೆಯಲ್ಲಿದ್ದ ಚಿನ್ನಾಭರಣ ಹಾಕಿದರೆ ಇನ್ನಷ್ಟು ಐಶ್ವರ್ಯ ಬರುತ್ತದೆ ಎಂದು ದಂಪತಿಯನ್ನು ನಂಬಿಸಿದ್ದಾನೆ. ಅದರಂತೆ ಉಷಾ ಅವರು ತಮ್ಮ ಕಿವಿಯೋಲೆ, ಉಂಗುರ ಸೇರಿದಂತೆ ಚಿನ್ನಾಭರಣವನ್ನು ಕುಡಿಕೆಯಲ್ಲಿ ಹಾಕಿದ್ದಾರೆ. ನಂತರ ನೀರು ತರುವ ನೆಪದಲ್ಲಿ ಕುಡಿಕೆಯನ್ನು ಬದಲಾಯಿಸಿದ ಖದೀಮ, ಮತ್ತೊಂದು ವಸ್ತು ನೀಡಿ ಅದನ್ನು ಕೆರೆಗೆ ಬಿಟ್ಟು ಬರಲು ಹೇಳಿದ್ದಾನೆ. ದಂಪತಿ ಮನೆಗೆ ಮರಳುವಷ್ಟರಲ್ಲಿ ಸುಮಾರು 1.20 ಲಕ್ಷ ರೂ. ಮೌಲ್ಯದ ಚಿನ್ನಾಭರಣದೊಂದಿಗೆ ಆರೋಪಿ ಪರಾರಿಯಾಗಿದ್ದಾನೆ.

## ಪೀಕ್ ಅವರ್‌ನಲ್ಲಿ ಕೈ ಕೊಟ್ಟ ನಮ್ಮ ಮೆಟ್ರೋ: ಗ್ರೀನ್ ಲೈನ್ ಮಾರ್ಗದಲ್ಲಿ ಸಂಚಾರ ಪುನಾರಂಭ

• ಉದಯವಾಹಿನಿ, ಬೆಂಗಳೂರು

ಮಂಗಳವಾರ ಬೆಳಗ್ಗೆ ಪೀಕ್ ಅವರ್ ನಲ್ಲೇ ಮತ್ತೆ ಮೆಟ್ರೋ ಸಂಚಾರ ಕೈ ಕೊಟ್ಟಿತು. ಹಸಿರು ಮಾರ್ಗದ ಮೆಟ್ರೋ ಸೇವೆಯಲ್ಲಿ ವ್ಯತ್ಯಯ ಉಂಟಾಯಿತು. ಇಂದು ಬೆಳಗ್ಗೆ 8 ಗಂಟೆಯಿಂದ ವಿದ್ಯುತ್ ವ್ಯತ್ಯಯದ ಪರಿಣಾಮ ಈ ಮಾರ್ಗದಲ್ಲಿ ಸಂಚಾರ ಕೆಲ ಕಾಲ ಸ್ಥಗಿತಗೊಂಡಿತು.

ವಿದ್ಯುತ್ ವ್ಯತ್ಯಯ ಉಂಟಾದ ಹಿನ್ನೆಲೆ ಗ್ರೀನ್‌ಲೈನ್ ಮೆಟ್ರೋ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದೆ ಎಂದು ಬಿಎಂಆರ್‌ಸಿಎಲ್ ಮಾಹಿತಿ ನೀಡಿದೆ. ಯಶವಂತಪುರದಿಂದ ನಾಗಸಂದ್ರ ನಡುವೆ ಮೆಟ್ರೋ ಸಂಚಾರ ತಾತ್ಕಾಲಿಕ ಸ್ಥಗಿತಗೊಂಡಿದೆ. ಸಿಲ್ಕ್ ಬೋರ್ಡ್‌ನಿಂದ ಯಶವಂತಪುರ ನಡುವೆ ಮಾತ್ರ ಶಾರ್ಟ್-ಲೂಪ್ ಸೇವೆ ಮುಂದುವರಿದೆ.ಯಶವಂತಪುರ ನಾಗಸಂದ್ರ ನಡುವೆ ಮೆಟ್ರೋ ಸಂಚಾರ ತಾತ್ಕಾಲಿಕ ಸ್ಥಗಿತಗೊಂಡಿದ್ದು, ಸೇವೆ ಪುನಃ ಆರಂಭಿಸಲು ತಾಂತ್ರಿಕ ತಂಡಗಳ ತುರ್ತು ಕಾರ್ಯಾಚರಣೆ ನಡೆದಿದ್ದು, ಪ್ರಯಾಣಿಕರ ಅನನುಕೂಲತೆಗೆ ಬಿಎಂಆರ್‌ಸಿಎಲ್ ವಿಷಾದ ವ್ಯಕ್ತಪಡಿಸಿದೆ.

# ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಕಟಿಬದ್ಧ ಸರ್ಕಾರ ಸಿದ್ಧ?

## ಸಣ್ಣ ವಯಸಲ್ಲೇ ಮಕ್ಕಳು ಕ್ಯಾನ್ಸರ್ ಹಾಗೂ ಮೂತ್ರ ಪಿಂಡದ ಸಮಸ್ಯೆಗೆ ಒಳಗಾಗುತ್ತಿದ್ದಾರೆ.

• ಉದಯವಾಹಿನಿ, ಬೆಂಗಳೂರು

ಶಾಲೆ ಮತ್ತು ಆಸ್ಪತ್ರೆ ಕ್ಯಾಂಟೀನ್‌ಗಳಲ್ಲಿ ಜಂಕ್ ಫುಡ್ ಮಾರಾಟವನ್ನು ನಿಷೇಧಿಸುವ ಕರ್ನಾಟಕ ಸರ್ಕಾರದ ಪ್ರಸ್ತಾಪವನ್ನು ಸಾರ್ವಜನಿಕ ಆರೋಗ್ಯ ತಜ್ಞರು ಸ್ವಾಗತಿಸಿದ್ದಾರೆ. ಬೊಜ್ಜು, ಮಧುಮೇಹ ಮತ್ತು ಇತರ ಸಾಂಕ್ರಾಮಿಕವಲ್ಲದ ಕಾಯಿಲೆಗಳ (ಹೆಚ್ಚಾಗುವಿಕೆಯನ್ನು ನಿಭಾಯಿಸಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

ಶಾಲೆಗಳ ಆವರಣ ಹಾಗೂ ಆಸ್ಪತ್ರೆಗಳ ಆವರಣದಲ್ಲಿ ಜಂಕ್ ಫುಡ್ ಮಾರಾಟ ಅತಿರೇಕವಾಗಿ ನಡೆಯುತ್ತಿದೆ. ಇದರಿಂದ ಮಕ್ಕಳು ಹಾಗೂ ಸಾರ್ವಜನಿಕರು ಬಹು ಬೇಗ ರೋಗಗ್ರಸ್ತರಾಗುತ್ತಿದ್ದಾರೆ. ಪಿಜ್ಜಾ, ಬರ್ಗರ್ ಹಾಗೂ ಕಾರ್ಬೋನೇಟೆಡ್ ಪಾನೀಯಗಳನ್ನ ಮಾರಾಟ ಮಾಡಲು ಅವಕಾಶ ಇಲ್ಲದಿದ್ದರೂ, ಬಹು ದೊಡ್ಡ ಪ್ರಮಾಣದಲ್ಲಿ ಇವು ಮಾರಾಟವಾಗುತ್ತಿವೆ. ಆದ್ದರಿಂದ ಸಣ್ಣ ವಯಸಲ್ಲೇ ಮಕ್ಕಳು ಕ್ಯಾನ್ಸರ್ ಹಾಗೂ ಮೂತ್ರ ಪಿಂಡದ ಸಮಸ್ಯೆಗೆ ಒಳಗಾಗುತ್ತಿದ್ದಾರೆ.

ಆದರೆ ಇದರ ಜೊತೆಗೆ ಆಹಾರ ಪದ್ಧತಿಯಲ್ಲಿ ಶಾಶ್ವತ ಬದಲಾವಣೆಗಳನ್ನು ತರಲು ಬಲವಾದ ನಿಯಮಗಳು, ಪೌಷ್ಟಿಕಾಂಶ ಕುರಿತ ಶಿಕ್ಷಣದ ಪರಿಣಾಮಕಾರಿ ನೀತಿ ಜಾರಿಯೊಂದಿಗೆ ಈ ಕ್ರಮವನ್ನು ಕೈಗೊಳ್ಳಬೇಕು ಎಂದು ಅವರು ಎಚ್ಚರಿಸಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು ಟಿ ಖಾದರ್ ಘೋಷಿಸಿದ ಈ ಪ್ರಸ್ತಾಪವು, ಶಾಲೆ ಮತ್ತು ಆಸ್ಪತ್ರೆ ಕ್ಯಾಂಟೀನ್‌ಗಳಲ್ಲಿ ಆರೋಗ್ಯಕರ ಆಹಾರವನ್ನು ಮಾತ್ರ ಮಾರಾಟ ಮಾಡುವುದನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಿಸುತ್ತದೆ ಮತ್ತು 10ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ಆಹಾರ ಒದಗಿಸುವ ಶಾಲೆಗಳ ಸುತ್ತಲೂ ಜಂಕ್ ಫುಡ್ ಮಾರಾಟವನ್ನು ನಿರ್ಬಂಧಿಸಬೇಕು ಎಂದು ಹೇಳಲಾಗಿದೆ. ಮಕ್ಕಳು ತಮ್ಮ ದಿನದ ಹೆಚ್ಚಿನ ಸಮಯವನ್ನು ಶಾಲೆಗಳಲ್ಲಿ ಕಳೆಯುತ್ತಾರೆ ಮತ್ತು ಆಗಾಗ್ಗೆ ಕ್ಯಾಂಪಸ್‌ನಲ್ಲಿ ಊಟಗಳನ್ನು ಸೇವಿಸುತ್ತಾರೆ, ಆದ್ದರಿಂದ


ಉದಯವಾಹಿನಿ ಚಿತ್ರ

> ನಮಗೆ ಪೌಷ್ಠಿಕಾಂಶದ ಶಿಕ್ಷಣ, ಮುಂಭಾಗದ ಪ್ಯಾಕ್ ಎಚ್ಚರಿಕೆ ಲೇಬಲ್‌ಗಳು, ಮಕ್ಕಳನ್ನು ಗುರಿಯಾಗಿಸಿಕೊಂಡು ಮಾಡುತ್ತಿರುವ ಆಹಾರ ಜಾಹೀರಾತಿನ ಮೇಲೆ ಬಲವಾದ ನಿಯಂತ್ರಣ ಮತ್ತು ವಿಶಾಲವಾದ ಸಾರ್ವಜನಿಕ ಜಾಗೃತಿ ಅಭಿಯಾನಗಳು ಸಹ ಅಗತ್ಯವಿದೆ ಎಂದು ಅವರು ಹೇಳಿದರು.-ಆರೋಗ್ಯ ತಜ್ಞರು

### ವ್ಯಕ್ತಿಗಳ ಮೇಲೆ ಜವಾಬ್ದಾರಿ

ನಾವು ಇವುಗಳನ್ನು ಹೆಚ್ಚಾಗಿ 'ಜೀವನಶೈಲಿ ರೋಗಗಳು' ಎಂದು ಕರೆಯುತ್ತೇವೆ, ಆದರೆ ಅದು ತಪ್ಪು ಹೆಸರು ಏಕೆಂದರೆ ಅದು ಸಂಪೂರ್ಣವಾಗಿ ವ್ಯಕ್ತಿಗಳ ಮೇಲೆ ಜವಾಬ್ದಾರಿಯನ್ನು ಹೊರಿಸುತ್ತದೆ. ಮಕ್ಕಳ ಆಹಾರ ಪದ್ಧತಿಯು ಆಕ್ರಮಣಕಾರಿ ಆಹಾರ ಮಾರುಕಟ್ಟೆ ಮತ್ತು ದೊಡ್ಡ ಆಹಾರ ಪರಿಸರದಿಂದ ಪ್ರಭಾವಿತವಾಗಿರುತ್ತದೆ ಎಂದು ಅವರು ಹೇಳಿದರು.

ಶಾಲೆಗಳು ಸಾರ್ವಜನಿಕ ಆರೋಗ್ಯ ಮಧ್ಯಸ್ಥಿಕೆಗಳಿಗೆ ಪ್ರಮುಖ ಸೆಟ್ಟಿಂಗ್‌ಗಳಲ್ಲಿ ಒಂದಾಗಿದೆ ಎಂದು ಅವರು ಹೇಳಿದರು. ಅಂತಹ ಸೆಟ್ಟಿಂಗ್‌ಗಳಲ್ಲಿ ಕೊಬ್ಬು, ಉಪ್ಪು ಮತ್ತು ಸಕ್ಕರೆ ಅಧಿಕವಾಗಿರುವ ಆಹಾರವನ್ನು ನಿರ್ಬಂಧಿಸುವುದು ಆರೋಗ್ಯಕರ ಆಹಾರ ಪದ್ಧತಿಯನ್ನು ಪ್ರೋತ್ಸಾಹಿಸಬಹುದು. ಆದಾಗ್ಯೂ, ಶಾಲೆಗಳು ಮತ್ತು ಆಸ್ಪತ್ರೆಗಳಲ್ಲಿ ಮಾತ್ರ ಜಂಕ್ ಫುಡ್ ಅನ್ನು ನಿಷೇಧಿಸುವುದು ಸೀಮಿತ ಪರಿಣಾಮ ಬೀರುತ್ತದೆ ಎಂದು ಭೋಜನಿ ಹೇಳಿದರು.

> ಇನ್ಸ್ಟಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ (ಐಪಿಹೆಚ್) ನ ವಾಣಿಜ್ಯ ನಿರ್ಣಾಯಕ ಆರೋಗ್ಯ ಕೇಂದ್ರದ ಮುಖ್ಯಸ್ಥ ಡಾ. ಉಪೇಂದ್ರ ಭೋಜನಿ ಮಾತನಾಡಿ, ಮಕ್ಕಳ ಆಹಾರ ಆಯ್ಕೆಗಳು ಹೆಚ್ಚಾಗಿ ವೈಯಕ್ತಿಕ ನಿರ್ಧಾರಗಳಿಂದಲ್ಲ, ಬದಲಾಗಿ ಅವರು ಬೆಳೆಯುವ ಪರಿಸರದಿಂದ ರೂಪುಗೊಳ್ಳುತ್ತವೆ ಎಂದು ಹೇಳಿದರು.-ಆರೋಗ್ಯ ತಜ್ಞರು

# ಬಂಡೀಪುರದ ಅರಣ್ಯದೊಳಗೆ ಅಕ್ರಮ ಪ್ರವೇಶ: ತಮಿಳುನಾಡಿನ ಬೈಕ್ ಸವಾರರ ವಿರುದ್ಧ ಕ್ರಮಕ್ಕೆ ಸೂಚನೆ

• **ಉದಯವಾಹಿನಿ, ಗುಂಡ್ಲುಪೇಟೆ**


ಉದಯವಾಹಿನಿ ಚಿತ್ರ

ಬಂಡೀಪುರ ಅಭಯಾರಣ್ಯದಲ್ಲಿ ಮಸ್ತಿಗಾಗಿ ನಾಲ್ವರು ಬೈಕ್ ಸವಾರರು ಅರಣ್ಯದೊಳಗೆ ಅತಿಕ್ರಮ ಪ್ರವೇಶ ಮಾಡಿರುವ ಘಟನೆ ಬೆಳಕಿಗೆ ಬಂದಿದೆ, ಸಫಾರಿ ಮಾರ್ಗದಲ್ಲಿ ತೆರಳಲು ಯತ್ನಿಸಿದ ನಾಲ್ವರಿಗೂ ಅದೇ ಮಾರ್ಗದಲ್ಲಿ ತೆರಳುತ್ತಿದ್ದವರು ಬುದ್ಧಿವಾದ ಹೇಳಿದರೂ ಸಹ ಲೆಕ್ಕಿಸದೆ ಅರಣ್ಯದೊಳಗೆ ಬೈಕ್ ಚಲಾಯಿಸಿ ವಾಪಾಸ್ ಬರುವ ವೇಳೆ ದೃಶ್ಯವನ್ನ ಸೆರೆಹಿಡಿದ ಸ್ಥಳೀಯರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ ಎಂದು ತಿಳಿದುಬಂದಿದೆ, ವಿಚಾರ ತಿಳಿದ ಅಧಿಕಾರಿಗಳು ಸ್ಥಳಕ್ಕಾಗಮಿಸುವಷ್ಟರಲ್ಲೇ ನಾಲ್ವರು ಆರೋಪಿಗಳು ಕೆಕ್ಕನಹಳ್ಳ ಗಡಿಭಾಗದಿಂದ ತಮಿಳುನಾಡು ಕಡೆಗೆ ಪರಾರಿಯಾಗಿದ್ದಾರೆ.

ದ್ವಿಚಕ್ರ ವಾಹನದ ನೋಂದಣಿ ಸಂಖ್ಯೆಯನ್ನ ಪತ್ತೆಹಚ್ಚಿರುವ ಅರಣ್ಯ ಇಲಾಖೆ ಅಧಿಕಾರಿಗಳು ನಾಲ್ವರ ಚಹರೆಯನ್ನ ತಮಿಳುನಾಡು ಪೊಲೀಸರಿಗೆ ರವಾನಿಸಿ ಪತ್ತೆ ಕಾರ್ಯಕ್ಕೆ ಮುಂದಾಗಿದ್ದಾರೆ.

ದ್ವಿಚಕ್ರ ವಾಹನದ ನೋಂದಣಿ ಸಂಖ್ಯೆಯನ್ನ ಪತ್ತೆಹಚ್ಚಿರುವ ಘಟನೆಯನ್ನ ಗಂಭೀರವಾಗಿ ಪರಿಗಣಿಸಿರುವ ಸಿಎಫ್ ನಂದೀಶ್ ಅವರು ಆರೋಪಿಗಳನ್ನ ಶೀಘ್ರದಲ್ಲೇ ಪತ್ತೆಹಚ್ಚಿ ವನ್ಯಜೀವಿ ಸಂರಕ್ಷಣೆ ಕಾಯ್ದೆಯಡಿ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

# ಜು.22 ನೀಟ್ ವಿರುದ್ಧ ಕಾಂಗ್ರೆಸ್ ನಿಂದ ಛಾತ್ರಂಕಿ ಗುಂಜ್ ಕಾರ್ಯಕ್ರಮ

• **ಉದಯವಾಹಿನಿ, ಕೋಲಾರ**

ನಗರದ ಮದರ್ ತೆರೇಸಾ ಕಾಲೇಜಿನಲ್ಲಿ ಜುಲೈ 22 ರಂದು ಬುಧವಾರ 12 ಗಂಟೆಗ ಕೋಲಾರ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯಿಂದ ಛಾತ್ರಂಕಿ ಗುಂಜ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಯುವ ಕಾಂಗ್ರೆಸ್ ಅಧ್ಯಕ್ಷ ಸೈಯದ್ ಆಫ್ರಿದ್ ಮಾಹಿತಿ ನೀಡಿದರು. ವಿದ್ಯಾರ್ಥಿಗಳ ಪರ ಇಡ ದೇಶದಲ್ಲಿ ಧ್ವನಿ ಎತ್ತಿ ಹೋರಾಟ ಮಾಡುತ್ತಿರುವ ದೇಶದ ವಿಪಕ್ಷ ನಾಯಕ ರಾಹುಲ್ ಗಾಂಧಿರವರು ಛಾತ್ರೊಂಕಿ ಗುಂಜ್ ಕಾರ್ಯಕ್ರಮ ಎಲ್ಲಾ ಜಿಲ್ಲಾಗಳಲ್ಲೂ ಮಾಡಲು ಆದೇಶ ಮಾಡಿದ್ದಾರ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಗೌಡ ರವರ ಮಾರ್ಗದರ್ಶನದಲ್ಲಿ ಕೋಲಾರದಲ್ಲಿ ಛಾತ್ರೊಂಕಿ ಗುಂಜ್ ಕಾರ್ಯಕ್ರಮ ದೊಡ್ಡ ಪ್ರಮಾಣದಲ್ಲಿ ಮಾಡುತ್ತಿದ್ದು ನೀಟ್ ಪತ್ರಿಕೆ ಸೋರಿಕೆ ಮಾಡಿದ ಕೇಂದ್ರ ಸರ್ಕಾರದ ವಿರುದ್ಧ ನಡೆಯುತ್ತಿರುವ ಈ ಕಾರ್ಯಕ್ರಮಕ್ಕ ಯುವಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮೀನಾರಾಯಣ, ಹಿರಿಯ ಕಾಂಗ್ರೆಸ್ ಮುಖಂಡ ಶ್ರೀಕೃಷ್ಣ, ಜೈದೀಪ್, ಮಂಜು, ಸಿ.ಪಿ ಹರೀಶ್, ಸುಧೀರ್ ಮುಂತಾದವರು ಉಪಸ್ಥಿತರಿದ್ದರು.

## ಮಿನಿ ನ್ಯೂಸ್

### ನಗರದಲ್ಲಿ ತುಂಬಿ ತುಳುಕುತ್ತಿರುವ ಕಸದ ರಾಶಿ

• **ಉದಯವಾಹಿನಿ, ಕೆಜಿಎಫ್**

ಮತದಾರರ ಪರಿಷ್ಕರಣೆಯಲ್ಲಿ ಎಲ್ಲಾ ಸರ್ಕಾರಿ ಅಧಿಕಾರಿಗಳು ಬ್ಯುಸಿಯಾಗಿರುವ ಹಿನ್ನಲೆ ನಗರದ ಹಲವು ಸ್ಥಳಗಳಲ್ಲಿ ಕಸದ ರಾಶಿ ತುಂಬಿ ತುಳುಕುತ್ತಿದೆ. ನಗರದಲ್ಲಿನ ಪ್ರಮುಖ ಸ್ಥಳಗಳಲ್ಲಿ ಕಸದ ರಾಶಿ ಕಂಡು ಬರುತ್ತಿದ್ದು ಸಾಂಕ್ರಾಮಿಕ ಖಾಯಿಲೆ ಹರಡುವ ಬೀತಿಯಲ್ಲಿ ನಾಗರೀಕರು ಇದ್ದಾರೆ. ಸುಮತಿ ನಗರದ ಮುಖ್ಯ ರಸ್ತೆ ಪಕ್ಕದಲ್ಲಿನ ಖಾಲಿ ಜಾಗದಲ್ಲಿ ಕಸದ ಕಂಡು ಬಂದಿದ್ದು ಇದು ಕಸದ ಡಂಪಿಂಗ್ ಯಾಡ್ 9ನಂತೆ ಬಾಸವಾಗುತ್ತಿದೆ ಚುನಾಯಿತ ಜನಪ್ರತಿನಿಧಿಗಳ ಆಡಳಿತ ಅವದಿ ಮುಗಿದು 6 ತಿಂಗಳೇ ಕಳೆದಿದೆ ನಗರಸಭೆ ಸದಸ್ಯರು ಇದ್ದಾಗ ಸ್ವಚ್ಚತಾ ಕೆಲಸದಲ್ಲಿ ನಿರತರಾಗುತ್ತಿದ್ದರಿಂದ ಅಲ್ಪಮಟ್ಟಿಗಾದರು ನಗರದಲ್ಲಿ ಸ್ವಚ್ಚತೆ ಎಂಬುದು ಇತ್ತು ಆದರೆ ನಗರಸಭೆ ಸದಸ್ಯರ ಅವದಿ ಮುಗಿದ ಹಿನ್ನಲೆ ಬಹುತೇಕ ಸದಸ್ಯರು ಸ್ವಚ್ಚತಾ ಕೆಲಸಕ್ಕೂ ನಮಗೂ ಸಂಬಂಧ ವಿಲ್ಲ ಎಂಬಂತೆ ಇದ್ದಾರೆ ಆದ್ದರಿಂದ ಹೇಳುವರು ಕೇಳುವರು ಯಾರು ಇಲ್ಲದಂತಹ ಪರಿಸ್ಥಿತಿ ಉದ್ಭವವಾಗಿದೆ. ಕಸದ ರಾಷಿಯಲ್ಲಿರುವ ಪ್ಲಾಸ್ಟಿಕ್ ಕವರ್‌ಗಳನ್ನು ದನ ಕರುಗಳು ತಿನ್ನುತಿರುವುದರಿಂದ ಧನ ಕರುಗಳ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ.

# ಕರ್ನಾಟಕದಲ್ಲಿ ಕೃಷಿ - ಆಹಾರ ಸಂಸ್ಕರಣಾ ಪರಿಸರ ವ್ಯವಸ್ಥೆ ಬಲವರ್ಧನೆ

## ಸಿಎಫ್‌ಟಿಆರ್‌ಐ ಮತ್ತು ನಬಾರ್ಡ್ ನಡುವೆ ಒಪ್ಪಂದ

**ಸಂಪೂರ್ಣ ಸಂಸ್ಕರಣಾ ಸರಪಳಿಯನ್ನು ಒಳಗೊಂಡಂತೆ ಪ್ರತಿಯೊಂದು ಘಟಕಕ್ಕೂ ಸ್ಟ್ಯಾಂಡರ್ಡ್ ಆಪರೇಟಿಂಗ್ ಪ್ರೊಸೀಜರ್ಸ್ ರೂಪಿಸಲಾಗುತ್ತದೆ. ಇದರಿಂದ ಕಾರ್ಯಕ್ಷಮತೆ, ಗುಣಮಟ್ಟದ ಮಾನದಂಡಗಳ ಅನುಸರಣೆ ಹಾಗೂ ಉತ್ಪಾದನೆಯಲ್ಲಿ ಏಕರೂಪತೆ ಖಚಿತಪಡಿಸಲಾಗುತ್ತದೆ.**

• **ಉದಯವಾಹಿನಿ, ಮೈಸೂರು**


ಉದಯವಾಹಿನಿ ಚಿತ್ರ

ಕರ್ನಾಟಕದಲ್ಲಿ ಕೃಷಿ-ಆಹಾರ ಸಂಸ್ಕರಣಾ ಪರಿಸರ ವ್ಯವಸ್ಥೆಯನ್ನು ಬಲಪಡಿಸುವ ಹಾಗೂ ಕೃಷಿ ಉತ್ಪನ್ನಗಳಿಗೆ ಮೌಲ್ಯವರ್ಧನೆ ನೀಡುವ ಉದ್ದೇಶದಿಂದ, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ –ನಬಾರ್ಡ್ ಮತ್ತು ಸಿಎಸ್‌ಐಆರ್ ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾ ಸಂಸ್ಥೆ (ಸಿಎಸ್‌ಐಆರ್–ಸಿಎಫ್‌ಟಿಆರ್‌ಐ), ಮೈಸೂರು ಇವುಗಳ ನಡುವೆ ತಂತ್ರಜ್ಞಾನ ವರ್ಗಾವಣೆ, ಪ್ರಕ್ರಿಯೆಗಳ ಪ್ರಮಾಣೀಕರಣ, ಉತ್ಪನ್ನ ಅಭಿವೃದ್ಧಿ, ಗುಣಮಟ್ಟ ಭರವಸೆ ಹಾಗೂ ರೈತ ಉತ್ಪಾದಕರ ಸಂಘಗಳು ಮತ್ತು ಇತರ ಪಾಲುದಾರರ ಸಾಮರ್ಥ್ಯ ವೃದ್ಧಿಗಾಗಿ ಒಪ್ಪಂದ ಪತ್ರಕ್ಕೆ ಸಹಿ ಹಾಕಲಾಗಿದೆ. ಈ ಸಹಭಾಗಿತ್ವವು ನಬಾರ್ಡ್‌ನಿಂದ ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಾದ ಬೀದರ್, ಯಾದಗಿರಿ, ಕಲಬುರಗಿ, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಸ್ಥಾಪಿಸಲಾಗಿರುವ ರೈತ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರಗಳಿಗೆ ತಾಂತ್ರಿಕ ಬೆಂಬಲ ಒದಗಿಸುವ ಉದ್ದೇಶ ಹೊಂದಿದೆ. ಈ ಉಪಕ್ರಮವು ಕೃಷಿ ಉತ್ಪನ್ನಗಳಿಗೆ ಮೌಲ್ಯವರ್ಧನೆ, ಉತ್ಪನ್ನಗಳ ಗುಣಮಟ್ಟ ಸುಧಾರಣೆ, ಆಹಾರ ಸುರಕ್ಷತಾ ಕ್ರಮಗಳ ಬಲವರ್ಧನೆ ಹಾಗೂ ರೈತರು ಮತ್ತು ಗ್ರಾಮೀಣ ಉದ್ಯಮಿಗಳಿಗೆ ಸುಸ್ಥಿರ ಜೀವನೋಪಾಯದ ಅವಕಾಶಗಳನ್ನು ಸೃಷ್ಟಿಸಲು ನೆರವಾಗಲಿದೆಒಪ್ಪಂದದಡಿ, ಸಿಎಸ್ ಐಆರ್ – ಸಿಎಫ್‌ಟಿಆರ್‌ಐ ಗುರುತಿಸಲಾದ ಕೃಷಿ ಉತ್ಪನ್ನಗಳು ಹಾಗೂ ಸಂಸ್ಕರಣಾ ಘಟಕಗಳಿಗೆ ತಂತ್ರಜ್ಞಾನ ವರ್ಗಾವಣೆ ಮಾಡಲಿದೆ. ಉತ್ಪನ್ನಗಳ ಗುಣಮಟ್ಟ, ಏಕರೂಪತೆ, ಶೆಲ್ಫ್ ಲೈಫ್ ಹಾಗೂ ಮಾರುಕಟ್ಟೆ ಸ್ವೀಕಾರಾರ್ಹತೆ ಹೆಚ್ಚಿಸಲು ಸಂಸ್ಕರಣಾ ಪ್ರಕ್ರಿಯೆಗಳನ್ನು ಪ್ರಮಾಣೀಕರಿಸಿ, ಉತ್ಪನ್ನಗಳನ್ನು ಪರಿಷ್ಕರಿಸಲಾಗುವುದು. ಜೊತೆಗೆ, ಸಾಮರ್ಥ್ಯ ವೃದ್ಧಿಯ ಭಾಗವಾಗಿ, ಸಿಎಸ್‌ಐಆರ್ – ಸಿಎಫ್‌ಟಿಆರ್‌ಐ, ಅಗಳ ಸಿಬ್ಬಂದಿ, ರೈತ ಉತ್ಪಾದಕರ ಸಂಘಗಳು, ಸ್ವಸಹಾಯ ಸಂಘಗಳು, ಉದ್ಯಮಿಗಳು ಹಾಗೂ ಇತರೆ ಪಾಲುದಾರರಿಗೆ ವೈಜ್ಞಾನಿಕ ಆಹಾರ ಸಂಸ್ಕರಣಾ ತಂತ್ರಜ್ಞಾನ, ಆಹಾರ ಸುರಕ್ಷತೆ ಮತ್ತು ನೈರ್ಮಲ್ಯ, ಗುಣಮಟ್ಟ ನಿಯಂತ್ರಣ, ಪ್ಯಾಕೇಜಿಂಗ್, ಮೌಲ್ಯವರ್ಧನೆ ಹಾಗೂ ಉತ್ತಮ ಉತ್ಪಾದನಾ ಪದ್ಧತಿಗಳ ಕುರಿತು ರಚಿತ ತರಬೇತಿ ಕಾರ್ಯಕ್ರಮಗಳನ್ನು ರೂಪಿಸಿ ನಡೆಸಲಿದೆ.ಇದರೊಂದಿಗೆ, ಸಾಮಾನ್ಯ ಸೌಲಭ್ಯ ಕೇಂದ್ರಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಅಗತ್ಯ ಯಂತ್ರೋಪಕರಣಗಳ ಆಯ್ಕೆ ಹಾಗೂ ತಾಂತ್ರಿಕ ನಿರ್ದಿಷ್ಟತೆಗಳ ಕುರಿತು ಮಾರ್ಗದರ್ಶನ ನೀಡಲಾಗುವುದು. ಯೋಜನೆಯ ಅವಧಿಯಲ್ಲಿ ಸ್ಥಳೀಯ ಮಟ್ಟದಲ್ಲಿ ತಾಂತ್ರಿಕ ಸಲಹೆ, ಮೇಲ್ವಿಚಾರಣೆ, ಸಮಸ್ಯೆ ಪರಿಹಾರ ಹಾಗೂ ನಿರಂತರ ತಾಂತ್ರಿಕ ಸಹಕಾರವನ್ನು ಒದಗಿಸಿ, ತಂತ್ರಜ್ಞಾನಗಳ ಪರಿಣಾಮಕಾರಿ ಅನುಷ್ಠಾನ ಮತ್ತು ನಿರಂತರ ಕಾರ್ಯಾಚರಣೆಯ ಶ್ರೇಷ್ಠತೆಯನ್ನು ಖಚಿತಪಡಿಸಲಾಗುತ್ತದೆ.

### ಉತ್ತೇಜಿಸುವ ಉಭಯ ಸಂಸ್ಥೆಗಳ ಬದ್ಧತೆ

**ವಿಜ್ಞಾನಾಧಾರಿತ ಹಸ್ತಕ್ಷೇಪಗಳು, ತಂತ್ರಜ್ಞಾನ ವರ್ಗಾವಣೆ ಹಾಗೂ ಕೌಶಲ್ಯಾಭಿವೃದ್ಧಿಯ ಮೂಲಕ ಗ್ರಾಮೀಣ ಸಮೃದ್ಧಿಯನ್ನು ಉತ್ತೇಜಿಸುವ ಉಭಯ ಸಂಸ್ಥೆಗಳ ಬದ್ಧತೆಯನ್ನು ಈ ಸಹಭಾಗಿತ್ವ ಪ್ರತಿಬಿಂಬಿಸುತ್ತದೆ. ಸಮುದಾಯ ಆಧಾರಿತ ಮೂಲಸೌಕರ್ಯಗಳೊಂದಿಗೆ ಅತ್ಯಾಧುನಿಕ ಆಹಾರ ಸಂಸ್ಕರಣಾ ತಂತ್ರಜ್ಞಾನಗಳನ್ನು ಸಂಯೋಜಿಸುವ ಮೂಲಕ, ಮೌಲ್ಯವರ್ಧನೆ, ಉತ್ತಮ ಗುಣಮಟ್ಟದ ಆಹಾರ ಉತ್ಪಾದನೆ ಹಾಗೂ ಮಾರುಕಟ್ಟೆ ಆಧಾರಿತ ಗ್ರಾಮೀಣ ಉದ್ಯಮಗಳಿಗೆ ಬಲಿಷ್ಠ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಈ ಯೋಜನೆ ಸಹಕಾರಿಯಾಗಲಿದೆ.**

### ಎಸ್.ಐ.ಆರ್ ಪ್ರಕ್ರಿಯೆ ಪ್ರಗತಿ ಪರಿಶೀಲಿಸಿದ ವಿ. ಅನ್ಬುಕುಮಾರ್


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮೈಸೂರು**

ರಾಜ್ಯದ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ನಡೆಸಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಎಸ್.ಐ.ಆರ್ ಕಾರ್ಯಗಳ ಪ್ರಗತಿಯನ್ನು ಪರಿಶೀಲಿಸಿದರು. ಸುದ್ದಿಸೇವೆಗಳು ಸಭೆಯಲ್ಲಿ ಮಾತನಾಡಿದ ಅವರು, ಬಿಎಲ್‌ಓಗಳು ಎಸ್.ಐ.ಆರ್ ಪ್ರಕ್ರಿಯೆಯನ್ನು ಸಂಪೂರ್ಣ ಪಾರದರ್ಶಕತೆಯಿಂದ ನಿರ್ವಹಿಸಬೇಕು ಎಂದು ಸೂಚಿಸಿದರು. ಮತದಾರರ ನೋಂದಣಾಧಿಕಾರಿಗಳು ತಮ್ಮ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಭೇಟಿ ನೀಡಿ ಪರಿಷ್ಕರಣೆ ಕಾರ್ಯವನ್ನು ಸ್ಥಳದಲ್ಲಿ ಪರಿಶೀಲಿಸಬೇಕು. ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಈ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿ ಹೆಚ್ಚಿನ ನಿಗಾ ವಹಿಸಬೇಕು ಎಂದು ತಿಳಿಸಿದರು.

ದೋಷರಹಿತ ಹಾಗೂ ಗುಣಮಟ್ಟದ ಮತದಾರರ ಪಟ್ಟಿ ಸಿದ್ಧಪಡಿಸುವ ನಿಟ್ಟಿನಲ್ಲಿ ಎಲ್ಲಾ ವಿವರಗಳನ್ನು ಅತ್ಯಂತ ಎಚ್ಚರಿಕೆಯಿಂದ ಪರಿಶೀಲಿಸಬೇಕು. ಯಾವ ಮತಗಟ್ಟೆಗಳಲ್ಲಿ ಪ್ರಗತಿ ಕಡಿಮೆಯಿದೆಯೋ ಅಂತಹ ಪ್ರದೇಶಗಳಿಗೆ ಹೆಚ್ಚಿನ ಗಮನ ನೀಡಿ, ಸೂಕ್ತ ಮಾರ್ಗದರ್ಶನ ನೀಡುವ ಮೂಲಕ ಪ್ರಗತಿಯನ್ನು ವೇಗಗೊಳಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮತದಾರರ ನೋಂದಣಾಧಿಕಾರಿಗಳು ನೋಂದಾಯಿತ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ನಡೆಸಬೇಕು.

# ಪಿಂಚಣಿದಾರರ ಹಿತಕ್ಕಾಗಿ ಎಸ್‌ಬಿಐ ಶ್ರಮಿಸಲಿದೆ

• **ಉದಯವಾಹಿನಿ, ಬಂಗಾರಪೇಟೆ**


ಉದಯವಾಹಿನಿ ಚಿತ್ರ

ಕೆಲಸದಿಂದ ನಿವೃತ್ತರಾದ ಪಂಚಣಿದಾರರ ಹಿತಕ್ಕಾಗಿ ಎಸ್.ಬಿ.ಐ ಶ್ರಮಿಸಲಿದೆ ಎಂದು ಶಾಖೆಯ ವ್ಯವಸ್ಥಾಪಕ ಮೋಹನ್ ಎ.ಆರ್ ಹೇಳಿದರು. ಪಟ್ಟಣದ ಎಸ್.ಬಿ.ಐ ಶಾಖೆಯಲ್ಲಿ ಪಿಂಚಣಿದಾರರಿಗಾಗಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಭಾಗವಹಿಸಿದ ಅವರು ಮಾತನಾಡಿ,ನೀವುಗಳು ಕೆಲಸದಲ್ಲಿ ಇದ್ದಾಗ ಮಾತ್ರ ಕೆಲವು ಸಂಸ್ಥೆಗಳು ನಿಮ್ಮಗಳ ಆದಾಯವನ್ನು ಲೆಕ್ಕ ಮಾಡಿ ಸಾಲ ನೀಡುತ್ತದೆ. ಆದರೆ ಎಸ್.ಬಿ.ಐ ನೀವು ನಿವೃತ್ತರಾಗಿ ಪಿಂಚಣಿದಾರರಾಗಿದ್ದರೂ ಸಹ ಸಾಲ ಸೌಲಭ್ಯ ಕಲ್ಪಿಸುತ್ತದೆ ಎಂದರು

ಪಿಂಚಣಿದಾರರಿಗೆ ಒದಗಿಸುವ ಸಾಲದ ವೈಶಿಷ್ಟ್ಯಗಳು ಕೇವಲ ಆರ್ಥಿಕ ತುರ್ತು ಪರಿಸ್ಥಿತಿಗಳನ್ನು ಎದುರಿಸಲು ಮಾತ್ರವಲ್ಲದೆ,ಭವಿಷ್ಯದ ಯೋಜಿತ ಹೂಡಿಕೆಗಳು ಆರೋಗ್ಯ ವೆಚ್ಚ,ಮನೆ ದುರುಸ್ತಿ,ಕುಟುಂಬದ ಅಗತ್ಯಗಳು ಹಾಗೂ ಇತರ ಅಭಿವೃದ್ಧಿ ಉದ್ದೇಶಗಳಿಗೂ ಸಾಲ ಸೌಲಭ್ಯ ಲಭ್ಯವಿದೆ ಎಂದು ತಿಳಿಸಿದರು.

ಇನ್ನು ಹಲವಾರು ಠೇವಣಿ ಯೋಜನೆಗಳು ಕಾದಿದೆ,ಹಿರಿಯ ನಾಗರಿಕರ ಉಳಿತಾಯ ಯೋಜನೆ, ವಾರ್ಷಿಕ ಜೀವನ ಪ್ರಮಾಣಪತ್ರ ಸಲ್ಲಿಸುವ ಅಗತ್ಯತೆ,ಎಸ್.ಬಿಐ ವಾಟ್ಸ್ ಆಫ್ ಬ್ಯಾಂಕಿಂಗ್ ಸೇವೆ,ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ ಹಾಗೂ ಮಕ್ಕಳ ಭವಿಷ್ಯದ ಆರ್ಥಿಕ ಭದ್ರತೆಗಾಗಿ ರೂಪಿಸಲಾದ ಎನ್‌ಪಿಎಸ್ ವಾತ್ಸಲ್ಯ ಯೋಜನೆಗಳ ಬಗ್ಗೆ ಗಾಹಕರಿಗೆ ಮಾಹಿತಿಯನ್ನ ನೀಡಲಾಯ್ತು.ಹಾಗೆ ಹಿರಿಯ ನಾಗರಿಕರ ಉಳಿತಾಯ ಯೋಜನೆಯಲ್ಲಿ ಸರ್ಕಾರದ ನಿಯಮಾವಳಿಗಳಿಗೆ ಅನುಗುಣವಾಗಿ ಲಭ್ಯವಿರುವ 8.2 ಶೇಕಡಾ ಬಡ್ಡಿದರದ ಕುರಿತು ಗ್ರಾಹಕರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಲಾಯ್ತು. ಎಸ್‌ಬಿಐ ಎಂದಿಗೂ ತನ್ನ ಗ್ರಾಹಕರಿಗೆ ಒಟಿಪಿ, ಪಿನ್, ಪಾಸ್ ವರ್ಡ್ ಮತ್ತು ಕಾರ್ಡ್ ಹಿಂಬದಿಯ ಸಿವಿವಿ ಸಂಖ್ಯೆಯನ್ನು ಕೇಳುವುದಿಲ್ಲ,ನೀವುಗಳು ಬ್ಯಾಂಕ್ ಹೆಸರು ಹೇಳಿಕೊಂಡು ಯಾರಾದರೂ ನಿಮ್ಮ ಖಾತೆಯ ವಿವರ ಕೇಳಿದರೆ ನೀಡ ಬೇಡಿ, ಒಟಿಪಿ ಕೇಳಿದರೆ ಹೇಳಬೇಡಿ,ಅನುಮಾನ ಬಂದರೆ ತಕ್ಷಣ ನಿಮ್ಮ ಹತ್ತಿರದ ಶಾಖೆಗೆ ಹೋಗಿ ಅಲ್ಲಿನ ಸಿಬ್ಬಂದಿಯನ್ನ ವಿಚಾರಿಸಿ ಇಲ್ಲ ಎಂದು ಹೇಳಿದರು.

> **ಒಂದು ವೇಳೆ ವಂಚನೆಗೆ ಒಳಪಟ್ಟರೆ ತಕ್ಷಣ ರಾಷ್ಟ್ರೀಯ ಸೈಬರ್ ಅಪರಾಧ ಸಹಾಯವಾಣಿ 1930ಕ್ಕೆ ಕರೆ ಮಾಡಿ ದೂರು ದಾಖಲಿಸ ಬಹುದಾಗಿದೆ ಎಂದು ಮುಂಜಾಗೃತ ಕ್ರಮಗಳನ್ನು ವಿವರಿಸಿದರು.**
> **- ಮೋಹನ್ ಎ.ಆರ್**

# ಪೀಪಲ್ಸ್ ಪಾರ್ಕ್ ಗ್ರಂಥಾಲಯದಲ್ಲಿ ಅಣಕು ಪರೀಕ್ಷೆ

• **ಉದಯವಾಹಿನಿ, ಮೈಸೂರು**


ಉದಯವಾಹಿನಿ ಚಿತ್ರ

ಸಿವಿಲ್ ಪೊಲೀಸ್ ಕಾನ್ಸ್ಟೇಬಲ್ ನೇಮಕಾತಿಗಾಗಿ ಆಗಸ್ಟ್ 2 ರಂದು ನಡೆಯಲಿರುವ ಲಿಖಿತ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವ ಉದ್ಯೋಗಾಕಾಂಕ್ಷಿಗಳ ನೆರವಿಗಾಗಿ ಪೀಪಲ್ಸ್ ಪಾರ್ಕ್ ನಗರ ಕೇಂದ್ರ ಗ್ರಂಥಾಲಯದ ವತಿಯಿಂದ ನಡೆಸಲಾಗುತ್ತಿರುವ 5ನೇ ಅಣಕು ಪರೀಕ್ಷೆ ನಡೆಯಿತು. ಇಂದಿನ ಪರೀಕ್ಷೆಯ ವಿಷಯ ಅರ್ಥಶಾಸ್ತ್ರ ಆಗಿತ್ತು. 100ಕ್ಕೂ ಹೆಚ್ಚು ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು.

ಅಣಕು ಪರೀಕ್ಷೆಗೆ ಚಾಲನೆ ನೀಡಿದ ಮುಖ್ಯ ಅತಿಥಿ ಅಬಕಾರಿ ಇಲಾಖೆಯ ಬೆಂಗಳೂರು ಉಪ ಆಯುಕ್ತೆ ಸ್ಮಿತಾ ರಾವ್ ಮಾತನಾಡಿ, ಸಾಕಷ್ಟು ಸಂಖ್ಯೆಯಲ್ಲಿ ಮಹಿಳೆಯರು ಪೊಲೀಸ್ ಇಲಾಖೆಗೆ ಸೇರಲು ಆಸಕ್ತಿ ತೋರುತ್ತಿರುವುದು ಪ್ರಶಂಸನೀಯ ಎಂದರು.ಇಂದಿನ ಪರಿಸ್ಥಿತಿ ಸಾಕಷ್ಟು ಬದಲಾಗಿದ್ದು, ಅಪರಾಧ ಪತ್ತೆಯಲ್ಲಿ ಹೊಸ ಸವಾಲುಗಳು ಹೆಚ್ಚಾಗಿವೆ. ಅಪರಾಧಿ ಯಾರೆಂದು, ಅಪರಾಧ ಎಲ್ಲಿಂದ ನಡೆಯುತ್ತಿದೆ ಎಂದು ಪತ್ತೆಹಚ್ಚುವುದು ಕಷ್ಟಕರವಾಗಿದೆ. ಪೊಲೀಸ್ ಸಿಬ್ಬಂದಿ, ವಿಶೇಷವಾಗಿ ಮಹಿಳೆಯರು ವೃತ್ತಿ ಮತ್ತು ವೈಯಕ್ತಿಕ ಜೀವನದ ನಡುವೆ ಸಮತೋಲನ ಕಾಪಾಡಿಕೊಂಡು, ಮಾನಸಿಕ ಸ್ಥೈರ್ಯ ಹಾಗೂ ದೈಹಿಕ ಸದೃಢತೆಯನ್ನು ಕಾಪಾಡಿಕೊಳ್ಳುವುದು ದೊಡ್ಡ ಸವಾಲಾಗಿದೆ ಎಂದು ಅವರು ಹೇಳಿದರು.ಅಭ್ಯರ್ಥಿಯೊಬ್ಬರ ಪ್ರಶ್ನೆಗೆ ಉತ್ತರಿಸಿದ ಅವರು, ಮಾದಕ ವಸ್ತುಗಳ ಸೇವನೆ ಯುವಕರಲ್ಲಿ ವ್ಯಾಪಿಸುತ್ತಿದ್ದು, ಇದನ್ನು ನಿಗ್ರಹಿಸುವುದು ಪೊಲೀಸ್ ಇಲಾಖೆಯಂತೆಯೇ ಅಬಕಾರಿ ಇಲಾಖೆಗೂ ಸವಾಲಾಗಿದೆ ಎಂದು ತಿಳಿಸಿದರು.

ದಿನಪತ್ರಿಕೆಗಳನ್ನು ಓದುವುದು, ವಿಶೇಷವಾಗಿ ಸಂಪಾದಕೀಯ ಅಂಕಣಗಳು ಜ್ಞಾನವೃದ್ಧಿಗೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಹಾಯವಾಗುತ್ತದೆ ಎಂದು ಅಭ್ಯರ್ಥಿಗಳಿಗೆ ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ನಗರ ಕೇಂದ್ರ ಗ್ರಂಥಾಲಯದ ಉಪ ನಿರ್ದೇಶಕ ಬಿ. ಮಂಜುನಾಥ್ ಮಾತನಾಡಿ, ಪೀಪಲ್ಸ್ ಪಾರ್ಕ್ ಗ್ರಂಥಾಲಯದಲ್ಲಿ ನಡೆಸುತ್ತಿರುವ ಅಣಕು ಪರೀಕ್ಷೆಯನ್ನು ಇತರೆ ಶಾಖಾ ಗ್ರಂಥಾಲಯಗಳಿಗೂ ವಿಸ್ತರಿಸುವಂತೆ ಮನವಿಗಳು ಬರುತ್ತಿವೆ ಎಂದರು.

### ಸಚಿವ ಸ್ಥಾನದಿಂದ ಧರ್ಮೇಂದ್ರ ಪ್ರಧಾನ್ ವಜಾಕ್ಕೆ ಮನವಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮಾಲೂರು**

ಕೇಂದ್ರ ಸರ್ಕಾರದ ಶಿಕ್ಷಣ ಮಂತ್ರಿ ಧಮಂದ್ರ ಪ್ರಧಾನ್ ತಮ್ಮ ಮಂತ್ರಿ ಸ್ಥಾನದಿಂದ ವಜಾಗೊಳಿಸುವಂತೆ ಒತ್ತಾಯಿಸಿ ದಲಿತಪರ ಸಂಘಟನೆಗಳಾದ ಸಂಘಟನೆಗಳದ ದಲಿತ ಸಿಂಹ ಸೇನೆ, ಮಹೇಂದ್ರ ಬುದ್ಧವಿಹಾರ್ ಚಾರಿಟಬಲ್ ಟ್ರಸ್ಟ್ ವತಿಯಿಂದ ತಹಶಿಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.
ನಗರದ ತಾಲ್ಲೂಕು ಆಡಳಿತ ಕಚೇರಿ ಮುಂಭಾಗದಲ್ಲಿ ತಿಪ್ಪಸಂದ್ರ ಶ್ರೀನಿವಾಸ್ ಹಾಗೂ ಲಕ್ಕೂರು ವೆಂಕಟೇಶ್ ನೇತೃತ್ವದಲ್ಲಿ ಜಮಾಯಿಸಿದ ಸಂಘಟಕರು ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ರಾಷ್ಟ್ರಪತಿಗಳಿಗೆ ಮನವಿ ಪತ್ರವನ್ನು ರವಾನಿಸಿದರು.

ದಲಿತಸಿಂಹಸೇನೆ ರಾಜ್ಯಾಧ್ಯಕ್ಷ ತಿಪ್ಪಸಂದ್ರ ಶ್ರೀನಿವಾಸ್ ಮಾತನಾಡಿ, ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ 20 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದರ ಹೊಣೆಗಾರಿಕೆಯನ್ನು ಒತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರವರು ತಮ್ಮ ಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಬೇಕೆಂದು ಸುಮಾರು 20 ದಿನಗಳಿಂದ ಸಿ.ಜೆ.ಪಿ ಪಕ್ಷದ ವತಿಯಿಂದ ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ.

# ಶಾರ್ಟ್ ಸರ್ಕ್ಯೂಟ್‌ಗೆ ಲಕ್ಷಾಂತರ ನಷ್ಟ: ಮೊಬೈಲ್, ಎಲೆಕ್ಟ್ರಾನಿಕ್ಸ್, ಟೀ ಶಾಪ್ ಭಸ್ಮ!


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಚಿಂತಾಮಣಿ**

ತಾಲ್ಲೂಕಿನ ಕೆಂಚಾರ್ಲಹಳ್ಳಿ ಗ್ರಾಮದಲ್ಲಿ ತಡರಾತ್ರಿ ಭೀಕರ ಅಗ್ನಿ ಅವಘಡ ಸಂಭವಿಸಿದೆ. ಶಾರ್ಟ್ ಸರ್ಕ್ಯೂಟ್ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಗ್ರಾಮದ ಶಿರೀಶ್, ಶಶಿಕುಮಾರ್ ಮತ್ತು ಸುರೇಶ್ ಎಂಬುವವರಿಗೆ ಸೇರಿದ ಮೊಬೈಲ್ ಅಂಗಡಿ,ಟೀ ಅಂಗಡಿ ಹಾಗೂ ಎಲೆಕ್ಟ್ರಾನಿಕ್ ಅಂಗಡಿಗಳು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿವೆ. ಬೆಂಕಿಯ ಕೆನ್ನಾಲಿಗೆಗೆ ಅಂಗಡಿಯಲ್ಲಿದ್ದ ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ಕರಕ ಲಾಗಿದ್ದು, ಮಾಲೀಕರಿಗೆ ಭಾರಿ ನಷ್ಟ ಸಂಭವಿಸಿದೆ ಎನ್ನಲಾಗಿದೆ.

ಘಟನಾ ಸ್ಥಳದಲ್ಲಿ ಸಾರ್ವಜನಿಕರ ಆತಂಕ ಮೂಡಿಸಿತ್ತು. ವಿಷಯ ತಿಳಿಯುತ್ತಿದ್ದಂತೆ ಕೆಂಚಾರ್ಲಹಳ್ಳಿ ಗ್ರಾಮಕ್ಕೆ ಧಾವಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ, ತಕ್ಷಣವೇ ಕಾರ್ಯಾಚರಣೆ ಕೈಗೊಂಡು ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಸಿಬ್ಬಂದಿಯ ಸಮಯಪ್ರಜ್ಞೆಯಿಂದ ಪಕ್ಕದ ಕಟ್ಟಡಗಳಿಗೆ ಹಾಗೂ ಅಂಗಡಿಗಳಿಗೆ ಬೆಂಕಿ ವ್ಯಾಪಿಸು ವುದು ತಪ್ಪಿದಂತಾಗಿದೆ.

# ದಸಂಸ ನೂತನ ತಾಲ್ಲೂಕು ಸಂಚಾಲಕರಾಗಿ ಕಡಬ ಶಂಕರ್ ಪುನರಾಯ್ಕೆ

• **ಉದಯವಾಹಿನಿ, ಗುಬ್ಬಿ**

ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಗುಬ್ಬಿ ತಾಲ್ಲೂಕು ಘಟಕದ ನೂತನ ಸಂಚಾಲಕ ರಾಗಿ ಕಡಬ ಶಂಕರ್ ಅವರನ್ನು ತಾಲ್ಲೂಕು ಘಟಕದ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರ ಸಭೆಯಲ್ಲಿ ಪುನರಾಯ್ಕೆ ಮಾಡಲಾಯಿತು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ದಸಂಸ ಜಿಲ್ಲಾ ಸಂಘಟನಾ ಸಂಚಾಲಕ ಕೇಬಲ್ ರಘು ಅವರ ನೇತೃತ್ವದ ಸಭೆಯಲ್ಲಿ ಸರ್ವ ಸದಸ್ಯರ ಸಮ್ಮತಿಯ ಮೇರೆಗೆ ಕಡಬ ಶಂಕರ್ ಅವರ ಕಳೆದ ಎರಡು ವರ್ಷದ ಕಾರ್ಯ ವೈಖರಿ ಮೆಚ್ಚಿ ಮತ್ತೊಮ್ಮೆ ಸಂಚಾಲಕರನ್ನಾಗಿ ಪುನರ್ ಆಯ್ಕೆ ಮಾಡಲಾಯಿತು. ಜಿಲ್ಲಾ ಸಂಘಟನಾ ಸಂಚಾಲಕ ಕೇಬಲ್ ರಘು ಮಾತನಾಡಿ ಜಿಲ್ಲಾದ್ಯಂತ ಪ್ರತಿ ತಾಲ್ಲೂಕು ಘಟಕ ಗಳ ಪುನರ್ ರಚನೆ ಮಾಡಲಾಗುತ್ತಿದೆ. ಈ ನಿಟ್ಟಿನಲ್ಲಿ ಇಂದು ಗುಬ್ಬಿ ಪ್ರವಾಸಿ ಮಂದಿರದಲ್ಲಿ ದಸಂಸ ತಾಲ್ಲೂಕು ಸಂಚಾಲಕರನ್ನಾಗಿ ಕಡಬ ಶಂಕರ್ ಅವರನ್ನು ಆಯ್ಕೆ ಮಾಡಲಾಗಿದೆ. ಸರ್ವಾನು ಮತದ ನಿರ್ಣಯದಂತೆ ಶಂಕರ್ ಅವರ ಆಯ್ಕೆ ಸಂಘಟನೆಯ ಶಕ್ತಿ ಹೆಚ್ಚಿಸಲಿದೆ ಎಂಬ ವಿಶ್ವಾಸವಿದೆ ಎಂದರು. ದಲಿತ ಸಂಘರ್ಷ ಸಮಿತಿಯ ನೂತನ ತಾಲ್ಲೂಕು ಸಂಚಾಲಕ ಕಡಬ ಶಂಕರ್ ಮಾತನಾಡಿ ನಾನು ದಲಿತರ, ಶೋಷಿತರ ಪರ ಧ್ವನಿಯಾಗಿ ಹೋರಾಟ ಮಾಡುತ್ತಾ ಬಂದಿದ್ದೇನೆ. ನನ್ನ ಕಾರ್ಯ ವೈಖರಿಯನ್ನು ಮೆಚ್ಚಿ ಮತ್ತೊಮ್ಮೆ ನನ್ನನ್ನು ಸಮಿತಿಯ ತಾಲ್ಲೂಕು ಸಂಚಾಲಕರಾಗಿ ಪುನರಾಯ್ಕೆ ಮಾಡಿದ್ದಾರೆ.

# ಗುಂಡ್ಲುಪೇಟೆಯಲ್ಲಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆ ಕಟ್ಟಡ ಲೋಕಾರ್ಪಣೆ: ಶಾಸಕ ಗಣೇಶ್‌ಪ್ರಸಾದ್ ಉದ್ಘಾಟನೆ

• **ಉದಯವಾಹಿನಿ, ಗುಂಡ್ಲುಪೇಟೆ**


ಉದಯವಾಹಿನಿ ಚಿತ್ರ

ಪಟ್ಟಣದ ಶೈಕ್ಷಣಿಕ ಮೂಲಸೌಕರ್ಯಕ್ಕೆ ಮತ್ತೊಂದು ಹೊಸ ಮೆರುಗು ಸಿಕ್ಕಿದೆ. ಪಟ್ಟಣದ ಪ್ರಮುಖ ಮಾರ್ಗವಾದ ಊಟಿ–ಮೈಸೂರು ರಸ್ತೆಯಲ್ಲಿರುವ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕಟ್ಟಡವನ್ನು ಜನಪ್ರಿಯ ಶಾಸಕರಾದ ಹೆಚ್.ಎಂ. ಗಣೇಶ್ ಪ್ರಸಾದ್ ಅವರು ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿ ಲೋಕಾರ್ಪಣೆಗೊಳಿಸಿದರು. ಅಂದಾಜು 12.30 ಲಕ್ಷ ವೆಚ್ಚದಲ್ಲಿ ಶಾಲೆಯ ಮೂಲಸೌಕರ್ಯಗಳನ್ನು ಮೇಲ್ದರ್ಜೆಗೇರಿಸಲಾಗಿದೆ. ಶಾಲಾ ಮಕ್ಕಳಿಗೆ ಅನುಕೂಲಕರವಾದ ಸುಸಜ್ಜಿತ ತರಗತಿ ಕೊಠಡಿಗಳು ಹಾಗೂ ಸುರಕ್ಷಿತ ಕಲಿಕಾ ವಾತಾವರಣವನ್ನು ನಿರ್ಮಿಸಲಾಗಿದೆ. ಶಾಲಾ ಆವರಣದಲ್ಲಿ ಕಟ್ಟಡ ಉದ್ಘಾಟಿಸಿ ಮಾತನಾಡಿದ ಶಾಸಕ ಗಣೇಶ್‌ಪ್ರಸಾದ್ ಅವರು ನಮ್ಮ ಗುಂಡ್ಲುಪೇಟೆ ತಾಲ್ಲೂಕಿನ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶದ ಬಡ ಮುಗ್ಧ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಬೇಕೆಂಬುದು ನಮ್ಮ ಸರ್ಕಾರದ ಹಾಗೂ ನನ್ನ ಮುಖ್ಯ ಆಶಯವಾಗಿದೆ. ಊಟಿ-ಮೈಸೂರು ರಸ್ತೆಯ ಈ ಶಾಲೆಯು ಹಲವು ದಶಕಗಳಿಂದ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದೆ. 12.30 ಲಕ್ಷ ವೆಚ್ಚದಲ್ಲಿ ಈ ಶಾಲೆಯನ್ನು ಉನ್ನತೀಕರಿಸಿ ಸಾರ್ವಜನಿಕ ಸೇವೆಗೆ ಸಮರ್ಪಿಸಿರುವುದು ಮನಸ್ಸಿಗೆ ತೃಪ್ತಿ ತಂದಿದೆ. ಮುಂದಿನ ದಿನಗಳಲ್ಲಿ ತಾಲ್ಲೂಕಿನ ಪ್ರತಿಯೊಂದು ಸರ್ಕಾರಿ ಶಾಲೆಯನ್ನು ಮಾದರಿಯಾಗಿ ರೂಪಿಸಲು ಶ್ರಮಿಸುತ್ತೇನೆ ಎಂದು ತಿಳಿಸಿದರು.

### ನೂತನ ಅಂಗನವಾಡಿ ಕೇಂದ್ರ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿದ ಶಾಸಕ ಗಣೇಶ್ ಪ್ರಸಾದ್

**ಪಟ್ಟಣದ ಜೆಟಿಟಿಸಿ ಕಾಲೇಜ್ ಹಿಂಭಾಗದಲ್ಲಿ ಆದಿಜಾಂಭವ ಸಮುದಾಯದ ಬೀದಿಯಲ್ಲಿ ಹಲವು ದಿನಗಳ ಬೇಡಿಕೆ ನೂತನ ಅಂಗನವಾಡಿ ಕೇಂದ್ರ ನಿರ್ಮಾಣಕ್ಕೆ ಮನವಿ ಇದ್ದು ಇಂದು ಶಾಸಕ ಗಣೇಶ್ ಪ್ರಸಾದ್ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ 20 ಲಕ್ಷ ವೆಚ್ಚದಲ್ಲಿ, ಆಧುನಿಕವಾಗಿ ಸ್ಲಾಬ್ ಮುಖಾಂತರ ನೂತನ ಅಂಗನವಾಡಿ ನಿರ್ಮಾಣವಾಗಲಿದೆ ಹಾಗೂ ಗುಣಮಟ್ಟದ ಕೆಲಸದ ಜೊತೆಗೆ ಸಮಯಕ್ಕೆ ಸರಿಯಾಗಿ ಕಟ್ಟಡ ನಿರ್ಮಾಣ ಮಾಡಿ ಮುಗಿಸಬೇಕು ಎಂದು ತಿಳಿಸಿದರು.**

### ಕನ್ನಡ ಸೇನಾನಿ ರಾಜು ಜನ್ಮದಿನಾಚರಣೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮಾಲೂರು**

ಕನ್ನಡ ಸೇನಾನಿ ಹಾಗೂ ಕನ್ನಡ ಹೋರಾಟಗಾರ ಎಸ್.ಎಂ.ರಾಜು ಅವರ ಜನ್ಮದಿನವನ್ನು ನಗರದ ಕನ್ನಡ ಸಾಹಿತ್ಯ ಪರಿಷತ್ ಕಚೇರಿ ಸಭಾಂಗಣದಲ್ಲಿ ಅಭಿಮಾನಿಗಳು ಹಾಗೂ ಹಿತೈಷಿಗಳು ಸಂಭ್ರಮದಿಂದ ಆಚರಿಸಿದರು. ನಮ್ಮ ಕರ್ನಾಟಕ ಸೇನೆ ಹಾಗೂ ಹಿತೈಷಿಗಳ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಎಸ್.ಎಂ. ರಾಜು ಅವರಿಗೆ ಭಾರೀ ಹೂವಿನ ಹಾರ ಹಾಕಿ, ಕೇಕ್ ಕತ್ತರಿಸಿ, ಸಿಹಿ ತಿನ್ನಿಸುವ ಮೂಲಕ ಜನ್ಮದಿನದ ಶುಭಾಶಯಗಳನ್ನು ತಿಳಿಸಲಾಯಿತು.

ಈ ವೇಳೆ ಮಾತನಾಡಿದ ಮುಖಂಡರು, ಎಸ್.ಎಂ. ರಾಜು ಅವರು ಹಲವು ವರ್ಷಗಳಿಂದ ಕನ್ನಡ ನೆಲ, ಜಲ ಹಾಗೂ ಭಾಷೆಯ ರಕ್ಷಣೆಗೆ ನಿರಂತರ ಹೋರಾಟ ನಡೆಸುತ್ತಿದ್ದು, ಕನ್ನಡಕ್ಕೆ ಯಾವುದೇ ರೀತಿಯ ಧಕ್ಕೆ ಉಂಟಾದಾಗ ಮುಂಚೂಣಿಯಲ್ಲಿನಿಂತು ಹೋರಾಟ ಮಾಡುವ ಕೆಚ್ಚೆದೆಯ ಕನ್ನಡಿಗರಾಗಿದ್ದಾರೆ ಎಂದು ಮೆಚ್ಚುಗ್ಗೆ ವ್ಯಕ್ತಪಡಿಸಿದರು. ದೇವರು ಅವರಿಗೆ ಉತ್ತಮ ಆರೋಗ್ಯ, ಐಶ್ವರ್ಯ, ಸುಖ, ಶಾಂತಿ ನೀಡಿ, ಇನ್ನಷ್ಟು ಕಾಲ ಕನ್ನಡಾಂಭೆಯ ಸೇವೆ ಮಾಡುವ ಶಕ್ತಿ ನೀಡಲಿ ಎಂದು ಹಾರೈಸಿದರು.

# ಬಿಜಿಎಸ್ ಶಾಲಾ ಮಕ್ಕಳಿಗೆ ಜ್ಞಾನಾಂಕುರ ಅಕ್ಷರಾಭ್ಯಾಸ

## ಶಿಕ್ಷಕರು ಹಾಗೂ ಪೋಷಕರು ಪೂಜೆ ಸಲ್ಲಿಸಿ,ಅಕ್ಷರದ ಜ್ಞಾನ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ

• **ಉದಯವಾಹಿನಿ, ಬಾಗೇಪಲ್ಲಿ**


ಉದಯವಾಹಿನಿ ಚಿತ್ರ

ಪಟ್ಟಣದ ಬಿಜಿಎಸ್ ಶಾಲೆಯ ಆವರಣದಲ್ಲಿ ಪೂರ್ವ ಪ್ರಾಥಮಿಕ ಶಾಲಾ ಮಕ್ಕಳಿಗೆ ಜ್ಞಾನಾಂಕುರ ಅಕ್ಷರಾಭ್ಯಾಸ ಕಾರ್ಯಕ್ರಮ ನಡೆಯಿತು. ಶಾರದಾಂಬೆ ಭಾವಚಿತ್ರಕ್ಕೆ ಆದಿಚುಂಚನಗಿರಿ ಮಹಾಪೀಠದ ಚಿಕ್ಕಬಳ್ಳಾಪುರ ಶಾಖೆಯ ಶ್ರೀಮಂಗಳ ನಾಥ ಸ್ವಾಮೀಜಿ, ಶಾಲೆಯ ಆಡಳಿತ ಮಂಡಳಿ ಸದಸ್ಯರು, ಶಿಕ್ಷಕರು ಹಾಗೂ ಪೋಷಕರು ಪೂಜೆ ಸಲ್ಲಿಸಿ,ಅಕ್ಷರದ ಜ್ಞಾನ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಆದಿಚುಂಚನಗಿರಿ ಮಹಾಪೀಠದ ಚಿಕ್ಕಬಳ್ಳಾಪುರ ಶಾಖೆಯ ಶ್ರೀಮಂಗಳನಾಥ ಸ್ವಾಮೀಜಿ ಆಶೀರ್ವಚನ ನೀಡಿ ಮಾತನಾಡಿ , ಬಹಳಷ್ಟು ಜನ ಮಕ್ಕಳ ಅಕ್ಷರಾಭ್ಯಾಸಕ್ಕಾಗಿ ಶೃಂಗೇರಿ, ಉಡುಪಿ, ಧರ್ಮಸ್ಥಳ ಹೀಗೆ ಮುಂತಾದ ಪುಣ್ಯಕ್ಷೇತ್ರಗಳಿಗೆ ಹೋಗಿ ದೇವರ ಸನ್ನಿಧಿಯಲ್ಲಿ ಅಕ್ಷರ ತಿದ್ದಿಸುವ ವಾಡಿಕೆ ಇಟ್ಟುಕೊಂಡಿದ್ದಾರೆ. ಆದರೆ,ಬಿ.ಜಿ.ಎಸ್ ಸಂಸ್ಥೆ ಸ್ಥಳಿಯವಾಗಿಯೇ ಹಳೆಯ ಗುರುಕುಲ ಪದ್ಧತಿ ನೆನಪಿಸುವಂತೆ,ಶಾಲೆಯ ಆವರಣದಲ್ಲಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸುವ ಪರಿಪಾಠ ಬೆಳೆಸಿಕೊಂಡಿದ್ದೇವೆ ಎಂದರು.

ವಿದ್ಯಾರ್ಥಿಗಳು ಕೇವಲ ಪಠ್ಯ ಶಿಕ್ಷಣಕ್ಕೆ ಸೀಮಿತವಾಗದೆ ಉತ್ತಮ ಸಂಸ್ಕಾರ, ನೈತಿಕ ಮೌಲ್ಯಗಳು ಹಾಗೂ ರಾಷ್ಟ್ರಭಕ್ತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಬಿಜಿಎಸ್ ಶಿಕ್ಷಣ ಸಂಸ್ಥೆಗಳ ಮುಖ್ಯ ಆಡಳಿತಾಧಿಕಾರಿ ಎನ್. ಶಿವರಾಮರೆಡ್ಡಿ ಮಾತನಾಡಿ, ಭಾರತೀಯ ಸಂಸ್ಕೃತಿಯ ಮಹತ್ವದ ಸಂಸ್ಕಾರಗಳಲ್ಲಿ ಒಂದಾದ ಅಕ್ಷರಾಭ್ಯಾಸ ಮಗುವಿನ ಜೀವನದಲ್ಲಿ ಜ್ಞಾನಾರ್ಜನೆ ಪಯಣಕ್ಕೆ ಶುಭಾರಂಭದ ಸಂಕೇತವಾಗಿದೆ. ಮಗು ತನ್ನ ಜೀವನದ ಮೊಟ್ಟಮೊದಲ ಅಕ್ಷರ ಬರೆಯುವ ಪವಿತ್ರ ಕ್ಷಣ ಮಹತ್ವದ್ದಾಗಿದೆ. ಶಿಕ್ಷಣದ ಜೊತೆಗೆ ಭಾರತೀಯ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವಲ್ಲಿ ಇಂತಹ ಆಚರಣೆಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.ಮಕ್ಕಳ ಪೋಷಕರು ಶಾಲೆಯ ಆವರಣದಲ್ಲಿ ಎಲೆ ಅಡಿಕೆ, ಅಕ್ಕಿ, ಬೆಲ್ಲ, ಬಾಳೆಹಣ್ಣು ತಂದು ಪೂಜೆ ಸಲ್ಲಿಸಿದ ನಂತರ, ತಮ್ಮ ಮಕ್ಕಳಿಗೆ ಅಕ್ಷತೆಯ ಮೇಲೆ ಓಂಕಾರವನ್ನು ಬರೆಯಿಸುವ ಮೂಲಕ ಅಕ್ಷರಾಭ್ಯಾಸ ಮಾಡಿಸಿದರು. ಮಕ್ಕಳ ಪೋಷಕರು ಸಾಂಪ್ರದಾಯಿಕ ಉಡುಗೆ ತೊಟ್ಟು ಬಂದಿದ್ದರು. ಶೈಕ್ಷಣಿಕ ಬದುಕಿಗೆ ಮೊದಲ ಹೆಜ್ಜೆ ಇಡುತ್ತಿರುವ ಮುದ್ದು ಪುಟಾಣಿಗಳನ್ನು ತಂದೆ-ತಾಯಿಯ ಮಡಿಲಿನಲ್ಲಿ ಕೂರಿಸಿ, ಅಕ್ಷರ ಬರೆಸುವ ಮೂಲಕ ತಾಯಿ ಶಾರದಾ ಮಾತೆಯ ಆಶೀರ್ವಾದ ಬೇಡಿ ಮಕ್ಕಳನ್ನು ಹರಸಲಾಯಿತು.

ಬಿ.ಜಿ.ಎಸ್ ಶಾಲೆಯ ಪ್ರಾಂಶುಪಾಲರಾದ ಮುನಿರಾಜು ಮಾತನಾಡಿ, ಭಾರತೀಯ ಸಂಸ್ಕೃತಿ ಹಾಗೂ ಪರಂಪರೆ ಅನನ್ಯ ಹಾಗೂ ಅಜರಾಮರ. ಶಿಕ್ಷಣ ಕಲಿಯಲು ಹೊಸದಾಗಿ ಬಂದಿರುವ ಪುಟಾಣಿ ಮಕ್ಕಳಿಗೆ ಅಕ್ಷರಭ್ಯಾಸ ಹಮ್ಮಿಕೊಂಡಿದ್ದು, ನಮ್ಮ ಮಕ್ಕಳಿಗೆ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಗಳನ್ನು ಕಲಿಸಿ ದೇಶದ ಸುಸಂಸ್ಕೃತ ಪ್ರಜೆಗಳನ್ನಾಗಿ ನಿರ್ಮಿಸುತ್ತೇವೆ.

### ಮಕ್ಕಳ ಕೈಗೆ ಪುಸ್ತಕ ನೀಡಿ

**ಮನೆಯಲ್ಲಿ ಮಕ್ಕಳಿಗೆ ಸಂಸ್ಕಾರ ಕಲಿಸಬೇಕಾದ ಪೋಷಕರು ಅವರ ಕೈಗೆ ಮೊಬೈಲ್ ಕೊಡುವ ಮೂಲಕ ದಾರಿ ತಪ್ಪಲು ಕಾರಣರಾಗುತ್ತಿದ್ದಾರೆ. ಲಕ್ಷ ಶುಲ್ಕ ಕೊಟ್ಟು ಖಾಸಗಿ ಶಾಲೆಯಲ್ಲಿ ಶಿಕ್ಷಣ ಕೊಡಿಸಿದರೆ ಸಾಲದು. ಮಕ್ಕಳ ಭವಿಷ್ಯವನ್ನು ಉತ್ತಮವಾಗಿ ರೂಪಿಸುವ ಜವಾಬ್ದಾರಿ ಹೊತ್ತಿರುವ ಪೋಷಕರು, ಮಕ್ಕಳ ಕೈಗೆ ಪುಸ್ತಕ ನೀಡಿ ಅವರ ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಬೇಕು' ಎಂದು ಕಿವಿಮಾತು ಹೇಳಿದರು.**

# ಸಾವಿನ ರಸ್ತೆಗೆ, ಕಣ್ಣು ತೆರೆಯದ ಶಾಸಕರು ಮತ್ತು ಅಧಿಕಾರಿಗಳು..

## ಗ್ರಾಮಕ್ಕೆ ತಲುಪುವ ರಸ್ತೆ,ಕಿರುಸೇತುವೆಯನ್ನು ಶೀಘ್ರದಲ್ಲಿ ದುರಸ್ತಿಗೊಳಿಸಿ ಗ್ರಾಮಸ್ಥರ ಆಕ್ರೋಶ

• **ಉದಯವಾಹಿನಿ, ಕೊಲ್ಹಾರ:**

ತಾಲ್ಲೂಕಿನ ಹಳ್ಳದ ಗೆಣ್ಣೂರು ಗ್ರಾಮದಿಂದ ಗರಸಂಗಿ,ಕೊಲ್ಹಾರ,ವಿಜಯಪುರ ಮತ್ತು 52 ರಾಷ್ಟ್ರೀಯ ಹೆದ್ದಾರಿಗೆ ಮಾರ್ಗವಾಗಿರುವ ಸುಮಾರು 2. ಕಿಲೋ ಮೀಟರ್ ಡಾಂಬರೀಕರಣ ರಸ್ತೆ ಮತ್ತು ಗ್ರಾಮದ ಸಂಗಮೇಶ್ವರ ದೇವಸ್ಥಾನದ ಹತ್ತಿರ ಇರುವ ಹಳೆಯ ಕಿರುಸೇತುವೆ ಆಗಿರುವುದರಿಂದ ಮಳೆಯಾದರೆ ಸಾಕು ನೀರು ನಿಂತು ತಗ್ಗುಂಡಿಗಳು ಬಿದ್ದು ಮಣ್ಣು ಕುಸಿದು ಗುಂಡಿಗಳು ಬಿದ್ದುವೆ. ವಾಹನ ಸಂಚಾರರು ಮತ್ತು ಶಾಲಾ ಮಕ್ಕಳು, ವೃದ್ಧರು ತಮ್ಮ ಜೀವ ಕೈ-ಯಲ್ಲಿ ಹಿಡಿದುಕೊಂಡು ಸಾವಿನ ರಸ್ತೆ ಮೇಲೆ ಸಂಚರಿಸಬೇಕಾಗಿದೆ ಶಾಸಕರು ಮತ್ತು ಅಧಿಕಾರಿಗಳು ಕಣ್ಣು ತೆರೆಯುತ್ತಿಲ್ಲ ಎಂದು ಗ್ರಾಮಸ್ಥರು ತೀವ್ರ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

ಹಲವು ವರ್ಷಗಳಿಂದ ಗ್ರಾಮದ ಮುಖ್ಯ ರಸ್ತೆಗೆ ಸೇರುವ ಡಾಂಬರೀಕರಣ ರಸ್ತೆಯು ಸಂಪೂರ್ಣವಾಗಿ ಭಾರಿ ಗಾತ್ರದ ವಾಹನಗಳು ಸಂಚರಿಸಿರಿಂದ ತೆಗ್ಗು ಗುಂಡಿಗಳು ಬಿದ್ದು,ತೆಗ್ಗುಗಳಲ್ಲಿ ನೀರು ತುಂಬಿಕೊಂಡಿವೆ. ಅಕ್ಕ ಪಕ್ಕದಲ್ಲಿ ಮುಳ್ಳು,ಗಿಡ ಗಂಟೆಗಳು ತಾಕೀರುವುದರಿಂದ ಸಂಪೂರ್ಣವಾಗಿ ರಸ್ತೆಯು ಚಿಕ್ಕದ್ದಾಗಿ ಹಾಕಿರುವ ಡಾಂಬರ್ ಕಿತ್ತು ಹೋಗಿ ಹದ್ದಗೆಟ್ಟುದೆ. ಸಂಚಾರಕ್ಕೆ ತೀವ್ರ ತೊಂದರೆ ಯಾಗಿದ್ದು, ಮಳೆಗಾಲದಲ್ಲಿ ಜಾರಿ ರಸ್ತೆಯ ತೆಗ್ಗುಗಳಲ್ಲಿ ಬಿದ್ದು ದ್ವಿ-ಚಕ್ರದ ವಾಹನ ಸವಾರರು ಕೈ-ಕಾಲು ಮುರಿದುಕೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ,ಮತ್ತು ಈ ರಸ್ತೆಯು ಸಾವಿಗೆ ಕಾರಣವಾಗಿದೆ. ಇಷ್ಟಾದರೂ ಕೂಡ ಹಲವು ಬಾರಿ ಪತ್ರಿಕೆ ಸುದ್ದಿ ಬಿತ್ತರಿಸಲಾಗಿದೆ. ಆದರೂ ಕೂಡ ಶಾಸಕರು ಮತ್ತು ಅಧಿಕಾರಿಗಳು ಅವಧಿ ಮುಗಿದ ಗ್ರಾಮ ಪಂಚಾಯತಿ ಸದಸ್ಯರು ತಲೆಕೆಡಿಸಿಕೊಳ್ಳುತ್ತಿಲ್ಲ, ಏಕೆ ಗ್ರಾಮಸ್ಥರು ಪ್ರಶ್ನೆಯಾಗಿದ್ದೆ...?

ಶೀಘ್ರದಲ್ಲಿ ಶಾಸಕ ಶಿವಾನಂದ ಪಾಟೀಲ್ ಅವರು ಅಧಿಕಾರಿಗಳು ಗಮನಹರಿಸಿ ರಸ್ತೆ ದುರಸ್ತಿ ಗೂಳಿಸಿ ಶಾಲಾ ಮಕ್ಕಳಿಗೆ ಮತ್ತು ಜನ ಸಾಮಾನ್ಯರಿಗೆ, ವೃದ್ಧರಿಗೆ ಅನುಕೂಲಗೂಳಿಸಿ ಅಳನ್ನು ತೋಡಿಕೊಂಡಿದ್ದಾರೆ.

ಇಲ್ಲದೆ ಹೋದಲ್ಲಿ ಹೆದ್ದಾರಿ ಮುಖ್ಯರಸ್ತೆ ತಡೆದು ಉಗ್ರವಾದ ಹೋರಾಟ ಮತ್ತು ಮುಂಬರುವ ಗ್ರಾಮ ಪಂಚಾಯಿತಿ ಚುನಾವಣೆ ಬಹಿಷ್ಕಾರಕ್ಕೆ ನಿರ್ಧರಿಸುತ್ತೇವೆ.

**ಡಾಂಬರ್ ಕಿತ್ತು ಹೋಗಿ ಹದ್ದಗೆಟ್ಟುದೆ.**


ಉದಯವಾಹಿನಿ ಚಿತ್ರ

> ಈಗಾಗಲೇ ಗ್ರಾಮದಿಂದ ಮುಖ್ಯರಸ್ತೆಗೆ ತಲುಪುವ ಸೇತುವೆ ಮತ್ತು ರಸ್ತೆಯು ಅಗಲೀಕರಣ ದುರಸ್ತಿಗೊಳಿಸಲು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಇಲಾಖೆಯಲ್ಲಿ ಟೆಂಡರ್ ಪ್ರಕ್ರಿಯೆಯಲ್ಲಿದೆ. ಟೆಂಡರ್ ಪ್ರಕ್ರಿಯೆಗೊಂಡ ನಂತರ ಮತ್ತು ಮಳೆಗಾಲ ಸಕ್ರಿಯ ನಂತರ ಕಾಮಗಾರಿಯನ್ನು ಪ್ರಾರಂಭಿಸಲಾಗುತ್ತದೆ.
> ಬ ಬಾಗೇವಾಡಿ,ಸಹಾಯಕ ಕಿರಯ ಇಂಜಿನಿಯರ್
> -ಮುರ್ತುಜಿ ವಾಲಿಕರ.


> ಅಪಘಾತಕ್ಕೆ ಆಹ್ವಾನಿಸುವ ಮುಂಚೆ ರಸ್ತೆ ದುರಸ್ತಿಗೊಳಿಸಿ ಶಾಲಾ ಮಕ್ಕಳಿಗೆ ಮತ್ತು ಸಾರ್ವಜನಿಕರಿಗೆ ಅನುಕೂಲಗೊಳಿಸಬೇಕು, ಶೀಘ್ರದಲ್ಲಿ ಟೆಂಡರ್ ಕರೆದು ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಿ ಎಂದರು.
> ಭೀಮಶಂಕರ್ ತೆಗ್ಗಿ -ಸಾಮಾಜಿಕ ಹೋರಾಟಗಾರ

# ವಿವಿಧ ಬೇಡಿಕೆಗಳು ಈಡೇರಿಸುವಂತೆ ಸಾರ್ವಜನಿಕರು,ರೈತರು ಪ್ರತಿಭಟನೆ

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನ ಗಡಿಭಾಗದ ಕುಂಚಾವರಂ ವ್ಯಾಪ್ತಿಯಲ್ಲಿ ಕೃಷಿ ಇಲಾಖೆ ವತಿಯಿಂದ ಸಬ್ಸಿಡಿ ದರದಲ್ಲಿ ರಸಗೊಬ್ಬರ ಹಾಗೂ ಖಾಸಗಿ ರಸಗೊಬ್ಬರ ಅಂಗಡಿ ಮಾರಾಟಗಾರರು ಕಳ್ಳಸಂತೆಯಲ್ಲಿ ಸರ್ಕಾರ ನಿಗಧಿಪಡಿಸಿದ ಬೆಲೆಗಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು ತಡೆಗಟ್ಟುವಂತೆ ಆಗ್ರಹಿಸಿ ಕುಂಚಾವರಂ ಗ್ರಾಮದ ರೈತರು,ಸಾರ್ವಜನಿಕರು ಅಂಬೇಡ್ಕರ್ ವೃತ್ತದಿಂದ ಗ್ರಾಮ ಪಂಚಾಯಿತಿವರೆಗೆ ಪ್ರತಿಭಟನೆ ನಡೆಸಿ ಕೃಷಿ ಇಲಾಖೆ ಸಹಾಯಕ ಅಧಿಕಾರಿ ಇಮ್ರಾನ್ ಅಲಿ ಅವರಿಗೆ ಮನವಿಪತ್ರ ಸಲ್ಲಿಸಿದರು. ಕುಂಚಾವರಂ ವ್ಯಾಪ್ತಿಯಲ್ಲಿ ಕೃಷಿ ಇಲಾಖೆ ವತಿಯಿಂದ ಬಂದಿರುವ ರಸ ಗೊಬ್ಬರವನ್ನು ರೈತರಿಗೆ ದುಪಟ್ಟ ಹಣದಲ್ಲಿ ಮಾರಾಟಗಾರರು ಮಾರಾಟ ಮಾಡುತ್ತಿದ್ದಾರೆ,ರಸೀಧಿ ಕೂಡ ನೀಡುತ್ತಿಲ್ಲ ರೈತರು ಹೇಳುತ್ತಿದ್ದರೆ ಸಮರ್ಪಕವಾಗಿ ಉತ್ತರ ನೀಡದೆ ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿದ್ದಾರೆ ಹಾಗಾಗಿ ಮೊದಲೇ ಮಳೆಯಿಲ್ಲ ರೈತರು ಸಂಕಷ್ಟದಲ್ಲಿದಾರೆ ಮೇಲಾಗಿ ದುಬಾರಿ ಬೆಲೆ ನೀಡಿ ರೈತರು ರಸಗೊಬ್ಬರ ಖರೀದಿಸಿ ಕಂಗಾಲಾಗಿದ್ದಾರೆ ಹಾಗಾಗಿ ಇದನ್ನು ತಡೆಗಟ್ಟುವಂತೆ ರೈತ ಮುಖಂಡರಾದ ಬಿ.ಗೋಪಾಲ,ಚಂನ್ಸಿ ಬೈಕಾಡ್ಡಿ,ರಮೇಶ ಮಾನಸಿ ಒತ್ತಾಯಿಸಿದರು.

ಪಾಂಡು,ವೆಂಕಟೇಶ ತಲಾರಿ,ಡಂಡೇಮ್ ನರಸಿಂಹಮ್ಲು,ಸಂಜೀವ್ ಕುಂಬಾರಿ,ಸುಭಾಷ್ ತಾಟಿ,ಗೋಪಾಲ್ ಲಕ್ಷ್ಮಿಸಾಗರ್,ವೆಂಕಟೇಶಂ,ಸುಧಾಕರ್, ಜೈಪಾಲ್,ಅನೇಕರಿದರು.


ಉದಯವಾಹಿನಿ ಚಿತ್ರ

# ಚಂದನಕೇರಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನದ ಚುನಾವಣೆ ಮುಂದೂಡಿಕೆ

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನ ಚಂದನಕೇರಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ನಡೆಯಬೇಕಾದ ಚುನಾವಣೆಯಲ್ಲಿ ಕನಿಷ್ಠ ನಿರ್ದೇಶಕರ ಹಾಜರಾತಿ ಇಲ್ಲದೆ ಇರುವ ಕಾರಣ ಚುನಾವಣೆಯನ್ನು ಮುಂದೂಡಲಾಗಿದೆ ಎಂದು ಸಂಘದ ಕಾರ್ಯದರ್ಶಿ ಹನುಮಂತರಾವ ಪಾಣಿ ತಿಳಿಸಿದ್ದಾರೆ.

ಚಂದನಕೇರಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆಯ ಸಂದರ್ಭದಲ್ಲಿ ಗುರುಲಿಂಗಪ್ಪ ಪಡಶೆಟ್ಟಿ ಮತ್ತು ಶರಣಕುಮಾರ ನಾಮಪತ್ರ ಸಲ್ಲಿಸಿದರು. ಒಬ್ಬ ನಿರ್ದೇಶರು ರಾಜೀನಾಮೆ ನೀಡಿದ ನಂತರ ಸಂಘದಲ್ಲಿ 11 ನಿರ್ದೇಶಕರಲ್ಲಿ ಕೇವಲ ಆರು ಜನರ ಮಾತ್ರ ಹಾಜರಾಗಿದ್ದರು,ಚುನಾವಣೆಯ ಪ್ರಕ್ರಿಯೆಯಲ್ಲಿ ಕನಿಷ್ಠ ನಿರ್ದೇಶಕರ ಹಾಜರಾತಿ ಇಲ್ಲದ ಕಾರಣ ಸಭೆಯನ್ನು ಮುಂದೂಡಲಾಗಿದೆ ಎಂದು ಅವರು ತಿಳಿಸಿದರು. ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲು ನಾಮಪತ್ರ ಸಲ್ಲಿಸಿದ ಶರಣುಕುಮಾರ ಚುನಾವಣೆಯ ಪ್ರಕ್ರಿಯೆ ಪ್ರಾರಂಭ ಆಗುವ ಸಂದರ್ಭದಲ್ಲಿ ಅವರು ಗೈರಾಗಿದ್ದರು,ಕೇವಲ ಆರು ಜನ ಮಾತ್ರ ಸಭೆಯಲ್ಲಿ ಹಾಜರಿದ್ದರು,ಕನಿರ್ದೇಶಕರ ನಿಷ್ಠ ಹಾಜರಾತಿ ಭರ್ತಿಯಾಗಲು ಏಳು ನಿರ್ದೇಶಕರ ಅವಶ್ಯಕತೆ ಬೇಕಾಗಿತ್ತು,ಕೇವಲ ಆರು ಜನ ನಿರ್ದೇಶಕರು ಸಂಘದ ಚುನಾವಣೆಯನ್ನು ಭಾಗವಹಿಸಿದ್ದರಿಂದ ಮುಂದೂಡಲಾಯಿತು. ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲು ನಾಮಪತ್ರ ಪಡೆದಿದ್ದ ಶರಣು ಕುಮಾರ ಅವರು ಹಾಜರಿ ಪುಸ್ತಕದಲ್ಲಿ ನಾಮಪತ್ರ ಪಡೆದ ಬಗ್ಗೆ ರುಜು ಮಾಡಿಕೊಳ್ಳದ ಕಾರಣ ಚುನಾವಣೆಯಲ್ಲಿ ಭಾಗವಹಿಸದೇ ಇರುವುದರಿಂದ ಗುರುಲಿಂಗಪ್ಪ ಪಡಶೆಟ್ಟಿ ಸಂಘದ ಕಾರ್ಯದರ್ಶಿ ಮೇಲೆ ಆಕ್ರೋಶವನ್ನು ವ್ಯಕ್ತಪಡಿಸಿ ಸಂಘದ ಚುನಾವಣೆಯ ಉದ್ದೇಶಪೂರ್ವಕವಾಗಿ ಎರಡು ಸಲ ಕಾರ್ಯದರ್ಶಿಯೇ ಮುಂದೂಡಿಸಿದ್ದಾರೆ ಎಂದರು.

ಸಂಘದ ಕಾರ್ಯದರ್ಶಿ ಹನುಮಂತ ಪಾಣಿ ನಿಗದಿತ ಸಮಯದಲ್ಲಿ ಚುನಾವಣೆ ಪ್ರಕ್ರಿಯೆಯನ್ನು ಎರಡು ಗಂಟೆ ಒಳಗೆ ಮಾಡಬೇಕಾಗಿತ್ತು,ಆದರೆ ಇನ್ನೂ ಸಮಯ ಇದ್ದರೂ ಸಹ ತರಾತುರಿಯಲ್ಲಿ ಕೋರಂ ಭರ್ತಿ ಆಗಿಲ್ಲವೆಂದು ನೋಟಿಸ್ ಬರೆದಿದ್ದಾರೆ ಎಂದು ಚುನಾವಣೆಗೆ ಹಾಜರಾಗಿದ್ದ ಅನಿತಾ,ಸುವಾರ್ತಾ,ಮಲ್ಲಿನಾಥ್,ಕಾಶಪ್ಪ ಮತ್ತು ಗುರುಲಿಂಗಪ್ಪ ಪಡಶೆಟ್ಟಿ ತಿಳಿಸಿದ್ದಾರೆ,ಇದೇ ಅಧ್ಯಕ್ಷ ಸ್ಥಾನಕ್ಕೆ ಜೂನ್ ತಿಂಗಳಲ್ಲಿ ನಡೆದ ಚುನಾವಣೆಯಲ್ಲಿ ಹಾಜರಾತಿ ಬರ್ತಿಯಾಗದ ಕಾರಣ ನಿರ್ದೇಶಕರ ಮದ್ಯೆ ಗದ್ದಲ ಉಂಟಾಗಿತ್ತು. ಚುನಾವಣೆಯಲ್ಲಿ ಯಾವುದೇ ಗಲಾಟೆ,ಗದ್ದಲ ಆಗದಂತೆ ಶಾಂತಿಯುತವಾಗಿ ಅಧ್ಯಕ್ಷರ ಚುನಾವಣೆ ನಡೆಯುವಂತೆ ರಟಕಲ್ ಪೊಲೀಸರು ಸೂಕ್ತ ಪೊಲೀಸ್ ಬಿಗಿ ಭದ್ರತೆಯನ್ನು ಮಾಡಿದರು. ರಟಕಲ್ ಠಾಣೆಯ ಪಿಎಸ್ಐ ಶೀಲಾದೇವಿ,ಸುಲೇಪೇಟ ಕ್ರೈಂ ಪಿಎಸ್ಐ ಶಿವಶಂಕರ ಸುಬೇದಾರ್ ಮುಂಜಾಗ್ರತಾ ಕ್ರಮಕೈಗೊಂಡು ಸೂಕ್ತ ಪೋಲಿಸ್ ಬಂದೋಬಸ್ತ್ ಏರ್ಪಡಿಸಿದರು.


ಉದಯವಾಹಿನಿ ಚಿತ್ರ

# ಮತದಾರರ ಪಟ್ಟಿಗೆ ಅರ್ಹರ ಸೇರ್ಪಡೆಗೆ ಎಲ್ಲರೂ ಸಹಕರಿಸಿ

• **ಉದಯವಾಹಿನಿ, ಧಾರವಾಡ,:**

ಕೇಂದ್ರ ಚುನಾವಣಾ ಆಯೋಗದ ಮುಖ್ಯ ಚುನಾವಣಾಧಿಕಾರಿಯಾದ ವಿ.ಅನ್ಬುಕುಮಾರ್ ಅವರು ಕೆ.ಸಿ.ಡಿ ಕಾಲೇಜ್ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಸುಮಾರು 500 ವಿದ್ಯಾರ್ಥಿಗಳಿಂದ ಮಾನವ ಸರಪಳಿ (ಸ್ವಿಪ್ ಚಟುವಟಿಕೆ) ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು. 18 ವರ್ಷ ವಯಸ್ಸು ಪೂರ್ಣಗೊಳಿಸಿದ ಯುವ ಮತದಾರರು ಈ ಅಭಿಯಾನದ ಪ್ರಯೋಜನ ಪಡೆದು, ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕು. ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವಂತೆ ಎಲ್ಲರೂ ಸಹಕರಿಸಬೇಕೆಂದು ಅವರು ಹೇಳಿದರು. ರಾಜ್ಯಾದ್ಯಂತ ನಡೆಯುತ್ತಿರುವ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಕಾರ್ಯಕ್ರಮ ಯಶಸ್ವಿಯಾಗಿ ಸಾಗುತ್ತಿದ್ದು, ರಾಜ್ಯದಲ್ಲಿ ಸುಮಾರು ಐದೂವರೆ ಕೋಟಿ ಮತದಾರರ ಪೈಕಿ ಮೂರುವರೆ ಕೋಟಿ ಮತದಾರರ ಪರಿಶೀಲನಾ ಕಾರ್ಯ ಪೂರ್ಣಗೊಂಡಿದೆ ಎಂದು ತಿಳಿಸಿದರು.

ಈ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸುತ್ತಿರುವ ರಾಜ್ಯದ 59 ಸಾವಿರ ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎಲ್ಒ) ಅಭಿನಂದನೆ ಹಾಗೂ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಜೊತೆಗೆ, ಕಾರ್ಯಕ್ರಮಕ್ಕೆ ಮಾರ್ಗದರ್ಶನ ನೀಡುತ್ತಿರುವ ಜಿಲ್ಲಾಧಿಕಾರಿಗಳು, ಚುನಾವಣಾ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ (ಸಿಇಒ) ಸೇವೆಯನ್ನು ಅಭಿನಂದಿಸಲು ಇಷ್ಟಪಡುತ್ತೇನೆ ಎಂದು ಮುಖ್ಯ ಚುನಾವಣಾ ಅಧಿಕಾರಿ ವಿ.ಅನ್ಬುಕುಮಾರ್ ಅವರು ಹೇಳಿದರು.

ಧಾರವಾಡ ಜಿಲ್ಲಾಡಳಿತವು ಸುಮಾರು 500 ವಿದ್ಯಾರ್ಥಿಗಳಿಂದ ಇಂದು ಮಾನವ ಸರಪಳಿ ನಿರ್ಮಿಸುವ ಮೂಲಕ ಮತದಾರರ ಪಟ್ಟಿಗ್ಗಳ ವಿಶೇಷ ಸಮಗ್ರ ಪರಿಷ್ಕರಣೆ-2026 ಕುರಿತು ಮತ ದಾರರಲ್ಲಿ ಜಾಗೃತಿ ಮೂಡಿಸಿದೆ.


ಉದಯವಾಹಿನಿ ಚಿತ್ರ

# ಹುಣಶ್ಯಾಳ ಸರಕಾರಿ ಉರ್ದು ಶಾಲೆಗೆ ನೂತನ SDMC ಸಮಿತಿ ರಚನೆ

• **ಉದಯವಾಹಿನಿ, ಕಲಕೇರಿ:**

ಇಲ್ಲಿನ ಸರಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ (ಹುಣಶ್ಯಾಳ) ಯಲ್ಲಿ ನೂತನ ಶಾಲೆ ಉಸ್ತುವಾರಿ ಹಾಗೂ ಅಭಿವೃದ್ಧಿ ಸಮಿತಿ SDMC ಯನ್ನು ಇತ್ತೀಚೆಗೆ ಯಶಸ್ವಿಯಾಗಿ ರಚಿಸಲಾಯಿತು.

**ಎಲ್ಲರೂ ಅಧ್ಯಕ್ಷರಂತೆ ಕಾರ್ಯಾಚರಿಸೋಣ:** ನೂತನ ಅಧ್ಯಕ್ಷರ ಕರೆ ಆಯ್ಕೆಯ ನಂತರ ಮಾತನಾಡಿದ ನೂತನ ಅಧ್ಯಕ್ಷ ಲಾಲಾಸಾಬ್ ಉಸ್ತಾದ್ ಅವರು, ಸರಕಾರಿ ಶಾಲೆಗಳ ಉಳಿವಿಗಾಗಿ ಮತ್ತು ಅಭಿವೃದ್ಧಿಗಾಗಿ ನಾವೆಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕಿದೆ. ಸಮಿತಿಯಲ್ಲಿರುವ ಪ್ರತಿಯೊಬ್ಬ ಸದಸ್ಯರೂ ಅಧ್ಯಕ್ಷರಷ್ಟೇ ಜವಾಬ್ದಾರಿಯುತರು. ಯಾವುದೇ ಭೇದ-ಭಾವವಿಲ್ಲದೆ ಶಾಲೆಯ ಸಮಗ್ರ ಶ್ರೇಯೋಭಿವೃದ್ಧಿಗೆ ಹಾಗೂ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಎಲ್ಲರೂ ಸೇರಿ ಕೆಲಸ ಮಾಡೋಣ ಎಂದು ಆಶಯ ವ್ಯಕ್ತಪಡಿಸಿದರು.

**ಕಾರ್ಯಕ್ರಮದಲ್ಲಿ ಪ್ರಮುಖರ ಉಪಸ್ಥಿತಿ:**

ಈ ಸಂದರ್ಭದಲ್ಲಿ ಶಾಲೆಯ ಮುಖ್ಯಗುರುಗಳಾದ ಆದಮ್ ಕೆ. ಸಾಲೋಡಗಿ, ಅಂಜುಮನ್ ಛೇರ್ಮನ್ ಅಮದಸಾಬ್ ಮೊಮೀನ್, ಗ್ರಾಮ ಪಂಚಾಯತಿ ಸದಸ್ಯರಾದ ಹುಸೇನಭಾಷಾ ಕೆ. ನಾಗಾವಿ, ಪ್ರಮುಖರಾದ ಶಫೀಕ್ ಎಚ್. ಸಿಪಾಯಿ , ಟಿಪ್ಪುಸುಲ್ತಾನ್ ಎಚ್. ಸಿಪಾಯಿ, ಬಾಬುಸಾಬ್ ಅ. ಉಸ್ತಾದ್, ಅಷ್ಪಾಕ್ ತಾಳಿಕೋಟಿ, ಶಕೀಲ್ ಪೋಲಾಸಿ, ವಾಜೀದ್ ಉಸ್ತಾದ ಸೇರಿದಂತೆ ಇತರ ಗಣ್ಯರು, ಗ್ರಾಮಸ್ಥರು ಹಾಗೂ ಶಾಲೆಯ ವಿದ್ಯಾರ್ಥಿಗಳು ಶಾಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ**

> ಸಮಿತಿಯ ನೂತನ ಅಧ್ಯಕ್ಷರಾಗಿ ಲಾಲಸಾಬ ಎಮ್. ಉಸ್ತಾದ್ ಹಾಗೂ ಉಪಾಧ್ಯಕ್ಷರಾಗಿ ಶಬಾನಾ ಸಲೀಮ್ ಊರನಮನಿ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಈ ನೂತನ ಸಮಿತಿಯು ಒಟ್ಟು 18 ಜನ ಸದಸ್ಯರನ್ನು ಒಳಗೊಂಡಿದೆ.

# ಕಾರಂಜಾ ಬಲದಂಡೆ ಕಾಲುವೆ ನವೀಕರಣಕ್ಕೆ 180 ಕೋಟಿ ರೂ. ಸಂಪುಟ ಸಮ್ಮತಿ

• **ಉದಯವಾಹಿನಿ, ಭಾಲ್ಕಿ:**

ಕಾರಂಜಾ ಬಲದಂಡೆ ಕಾಲುವೆ 100ರಿಂದ 131ನೇ ಕಿ.ಮೀ. ವರೆಗಿನ ಮುಖ್ಯ ಕಾಲುವೆ ಮತ್ತು ವಿತರಣಾ ಕಾಲುವೆ, ಉಪ ವಿತರಣಾ ಕಾಲುವೆ ಆಧುನೀಕರಣ ಕಾಮಗಾರಿಗೆ ಸಚಿವ ಸಂಪುಟ ಆಡಿತಾತ್ಮಕ ಅನುಮೋದನೆ ನೀಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕಿ.ಮೀ 0ರಿಂದ 100ರವರೆಗಿನ ಕಾಲುವೇ ಆಧುನೀಕರಣ ಕಾಮಗಾರಿಯಲ್ಲಿ ಬಿಟ್ಟುಹೋಗಿರುವ ವಿತರಣಾ ಕಾಲುವೆ, ಉಪ ಕಾಲುವಗಳನ್ನೂ ಆಧುನೀಕರಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಈ ಕಾಮಗಾರಿಗಳ ಒಟ್ಟು ವೆಚ್ಚ 2023-24ರ ದರಪಟ್ಟಿಯನ್ವಯ 180 ಕೋಟಿ ರೂ. ಅನುಮೋದಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಹಿಂದುಳಿದ ಕಲ್ಯಾಣ ಕರ್ನಾಟಕದ ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಬ್ಯಾಲಹಳ್ಳಿ ಗ್ರಾಮದ ಸಮೀಪ ಕಾರಂಜಾ ನದಿಗೆ ಅಡ್ಡಲಾಗಿ ಕಟ್ಟಿರುವ ಅಣೆಕಟ್ಟೆಯ ಸಂಗ್ರಹಣಾ ಸಾಮರ್ಥ್ಯ 7.69 ಟಿಎಂಸಿ ಆಗಿದೆ. ಯೋಜನೆಯಡಿ ಹಂಚಿಕೆಯಾಗಿರುವ 9.27 ಟಿಎಂಸಿ ನೀರು ಬಳಸಿ, ಬೀದರ್ ಜಿಲ್ಲೆಯ 29227 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಈ ಕಾಲುವೆ ಆಧುನೀಕರಣ ನರವಾಗಲಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಕಾರಂಜಾ ಯೋಜನೆಯಡಿ 0.687 ಟಿ.ಎಂ.ಸಿ ನೀರನ್ನು ಕುಡಿಯುವ ನೀರಿನ ಯೋಜನೆಗೆ ಬಳಸಲು ಅವಕಾಶ ಕಲ್ಪಿಸಲಾಗಿದೆ. ಬಲದಂಡೆ ಕಾಲುವೆಡಯಿ 131 ಕಿ.ಮೀ ಕಾಲುವೆಯಿಂದ 19217 ಹೆಕ್ಟೇರ್ ಎಡದಂಡೆ ಕಾಲುವೆಗಳ 31 ಕಿ.ಮೀನಿಂದ 2521 ಹೆಕ್ಟೇರ್, ಏತ ನೀರಾವರಿ ಕಾಲುವೆ 24 ಕಿ.ಮೀಗಳಿಂದ 3873 ಹೆಕ್ಟೇರ್, ಅತಿವಾಳ ಏತ ನೀರಾವರಿ ಕಾಲುವೆಯಡಿ 3616 ಹೆಕ್ಟೇರ್ ನೀರಾವರಿ ಸೌಲಭ್ಯಕ್ಕೆ ಯೋಜನೆ ರೂಪಿಸಲಾಗಿದೆ ಎಂದೂ ಈಶ್ವರ ಖಂಡ್ರೆ ವಿವರಿಸಿದ್ದಾರೆ.

> ಬಹುದಿನಗಳಿಂದ ನೆನಗುದಿಗೆ ಬಿದ್ದಿದ್ದ ಈ ಕಾಲುವೆ ಆಧುನೀಕರಣ ಕಾಮಗಾರಿ ಆರಂಭಿಸುವಂತೆ ತಾವು ನಿರಂತರವಾಗಿ ಪ್ರಯತ್ನ ಮಾಡದ್ದು, ಯೋಜನೆಗೆ ಅನುಮೋದನೆ ನೀಡಿದ ಸಚಿವ ಸಂಪುಟದ ಎಲ್ಲಾ ಸಹೋದ್ಯೋಗಿಗಳಿಗೆ, ವಿಶೇಷವಾಗಿ ಮುಖ್ಯಮಂತ್ರಿಗಳು ಮತ್ತು ಜಲ ಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವರು ಧನ್ಯವಾದ ಅರ್ಪಿಸುವುದಾಗಿ ತಿಳಿಸಿದ್ದಾರೆ.

# ಡೊಂಗರಗಿಯಲ್ಲಿ ಅಖಂಡ ಶಿವನಾಮ ಸಪ್ತಾಹ ಸಂಪನ್ನ

• **ಉದಯವಾಹಿನಿ, ಬೀದರ:**

ಭಾಲ್ಕಿ ತಾಲ್ಲೂಕಿನ ಡೊಂಗರಗಿ ಗ್ರಾಮದಲ್ಲಿ ಈ ತಿಂಗಳ 13 ರಿಂದ ಆರಂಭವಾಗಿದ್ದ ''ವರುಣನ ಕೃಪೆಗಾಗಿ ಅಖಂಡ ಶಿವನಾಮ ಸಪ್ತಾಹ'' ಭಾನುವಾರ ಸಂಪನ್ನಗೊಂಡಿತ್ತು. ಬೆಳಿಗ್ಗೆಯಿಂದಲೆ ಹನುಮಾನ ದೇವರ ಪೂಜೆ, ಅಭಿಷೇಕ, ನೈವೇದ್ಯ ಅಲ್ಲದೆ ಕಂಗಟಿ ಗ್ರಾಮದ ವಚನಶ್ರೀ ಮಹಿಳಾ ಕೋಲಾಟ ಸಂಘದವರಿಂದ ಆಕರ್ಷಕ ಕೋಲಾಟ ಪ್ರದರ್ಶನ ಜರುಗಿತು. ದಿನವಿಡೀ ಭಜನಾ ಕಾರ್ಯಕ್ರಮ, ರಾತ್ರಿ ಇಡೀ ಜಾಗರಣೆ ಇತ್ಯಾದಿ ಸಾಂಸ್ಕೃತಿಕ ಕಾರ್ಯಕ್ರಮಗಳು ಸಪ್ತಾಹದ ಮೆರಗು ಹೆಚ್ಚಿಸಿದವು.

ಅಲಿಯಂಬರ್ ಗ್ರಾಮದ ಪೂಜ್ಯ ವೀರಭದ್ರಪ್ಪ ಮುತ್ಯಾ ಅವರ ತತ್ವಗಳನ್ನು ಪಾಲಿಸಿಕೊಂಡು ಬರುತ್ತಿರುವ ಪೂಜ್ಯ ಬಾಬುಮಹಾರಾಜ ದಂಪತಿಗಳ ಪಾದಪೂಜೆ, ಪುಷ್ಪಾರ್ಚನೆ ಹಾಗೂ ಆರತಿ ಬೆಳಗಿ ಸತ್ಕಾರ ಮಾಡಲಾಯಿತು. ಇದೇ ವೇಳೆ ಬಾಬು ಮಹಾರಾಜರಿಂದ ಧೂನಿ ಪೂಜೆ ನೆರವೇರಿತು. ನಂತರ ಹಿರಿಯ ಪತ್ರಕರ್ತರು ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿಗಳಾದ ಶಶಿಕಾಂತ ಶೆಂಬೆಳ್ಳಿ ಈ ಸಂದರ್ಭದಲ್ಲಿ ಮಾತನಾಡಿ, ಡೊಂಗರಗಿಯಲ್ಲಿ ನಡೆಯುತ್ತಿರುವ ಈ ಧಾರ್ಮಿಕ ಕಾರ್ಯಕ್ರಮಗಳಿಂದ ಬೀದರನಲ್ಲಿ ಮಳೆಯಾಗುತ್ತಿದೆ. ಅಂದರೆ ಗ್ರಾಮೀಣ ರೈತರು ಪೂಜಿಸುತ್ತಿರುವುದರಿಂದಲೇ ನಗರ ಹಾಗೂ ಪಟ್ಟಣಗಳಲ್ಲಿ ಕುಡಿಯಲು ನೀರು ದೊರೆಯುತ್ತಿದೆ. ರೈತರು ಬೆಳೆ ಬೆಳೆಯುವುದರಿಂದಲೇ ಅನ್ನಸಿಗುತ್ತದೆ.

# 87 ಪ್ರಕರಣಗಳನ್ನ ಭೇದಿಸಿದ ದಾವಣಗೆರೆ ಪೊಲೀಸರು

## 'ಪ್ರಾಪರ್ಟಿ ರಿಟರ್ನ್ ಪರೇಡ್'ನಲ್ಲಿ ಚಿನ್ನ, ಬೆಳ್ಳಿ ಸೇರಿ 3.91 ಕೋಟಿಯ ಸ್ವತ್ತು ವಾರಸುದಾರರಿಗೆ ಹಸ್ತಾಂತರ

• **ಉದಯವಾಹಿನಿ, ದಾವಣಗೆರೆ:**

ದಾವಣಗೆರೆ ಜಿಲ್ಲಾ ಪೊಲೀಸರು ವಿವಿಧ ಠಾಣೆಗಳಲ್ಲಿ ದಾಖಲಾಗಿದ್ದ ಒಟ್ಟು 87 ಪ್ರಕರಣಗಳನ್ನು ಬೇಧಿಸಿದ್ದು, ಒಂದೂವರೆ ಕೆ.ಜಿ ಚಿನ್ನಾಭರಣ, ಹದಿನೆಂಟು ಕೆ.ಜಿ ಬೆಳ್ಳಿ, ಕಾರು, ಮೊಬೈಲ್‌ಗಳನ್ನು ವಶಕ್ಕೆ ಪಡೆದು ಅದರ ವಾರಸುದಾರರಿಗೆ ಹಸ್ತಾಂತರಿಸಿದ್ದಾರೆ. ಪ್ರಾಪರ್ಟಿ ರಿಟರ್ನ್ ಪರೇಡ್'ನಲ್ಲಿ ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ವಶಕ್ಕೆ ಪಡೆದ ಬಂಗಾರದ ಆಭರಣಗಳು ಸೇರಿದಂತೆ ವಿವಿಧ ವಸ್ತುಗಳನ್ನು ವಾರಸುದಾರರಿಗೆ ಹಸ್ತಾಂತರಿಸಲಾಗಿದೆ.

> 1 :ಒಂದೂವರೆ ಕೆ.ಜಿ ಚಿನ್ನಾಭರಣ,
> 2 :3.91 ಕೋಟಿಯ ವಸ್ತುಗಳು ಹಸ್ತಾಂತರ
> 3 :ಹದಿನೆಂಟು ಕೆ.ಜಿ ಬೆಳ್ಳಿ

**3.91 ಕೋಟಿಯ ವಸ್ತುಗಳು ಹಸ್ತಾಂತರ:** ಡಿ.20, 2025ರಿಂದ ಜುಲೈ 20, 2026ರ ತನಕ ಜಿಲ್ಲೆಯ ವಿವಿಧ ಠಾಣೆಗಳಲ್ಲಿ ವರದಿಯಾಗಿದ್ದ 87 ಪ್ರಕರಣಗಳನ್ನು ಬೇಧಿಸಿರುವ ಪೊಲೀಸರು, 3.91 ಕೋಟಿ ರೂ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದ್ದು, ಆರೋಪಿಗಳನ್ನು ಬಂಧಿಸಿದ್ದಾರೆ.

ಚಿನ್ನ, ಬೆಳ್ಳಿ ಸೇರಿ 3.91 ಕೋಟಿಯ ಸ್ವತ್ತುಗಳನ್ನು ವಾರಸುದಾರರಿಗೆ ಹಸ್ತಾಂತರಿಸಿದ ಪೊಲೀಸರು 2 ಸಾವಿರ ಹೆಲ್ಮೆಟ್, 85 ಸೈಲೆನ್ಸರ್, **ಹಾರ್ನ್ಸ್, ಸ್ಪೀಕರ್ ಡಕ್ ನಾಶ:** ಸಂಚಾರ ನಿಯಮಗಳನ್ನು ಉಲ್ಲಂಘಿಸಿ ವಾಹನಗಳಿಗೆ ಅಳವಡಿಸಿದ್ದ ಕಳಪೆ ಗುಣಮಟ್ಟದ ಸುಮಾರು 2,000ಕ್ಕೂ ಹೆಚ್ಚು ಆಫ್ ಹೆಲ್ಮೆಟ್‌ಗಳು, ದ್ವಿಚಕ್ರ ವಾಹನಗಳಲ್ಲಿ ಆಳವಡಿಸಿಕೊಂಡಿದ್ದ ಕರ್ಕಶ ಧ್ವನಿ ಮಾಡುವ 85ಕ್ಕೂ ಹೆಚ್ಚು ಡಿಫೆಕ್ಟಿವ್ ಸೈಲೆನ್ಸರ್‌ಗಳು, ಇತರೆ ವಾಹನಗಳಲ್ಲಿ ಆಳವಡಿಸಿಕೊಂಡಿದ್ದ 25 ಹಾರ್ನ್‌ಗಳನ್ನು ಮತ್ತು 10 ಸ್ಪೀಕರ್ ಡಕ್‌ಗಳನ್ನು ಬುಲ್ಡೋಜರ್ ಮೂಲಕ ಎಸ್ಪಿ ಶೇಖರ್ ಹೆಚ್.ಟಿ. ಅವರ ಸಮ್ಮುಖದಲ್ಲಿ ಪೊಲೀಸರು ನಾಶಪಡಿಸಿದರು. ಕಳಪೆ ಗುಣಮಟ್ಟದ ಹೆಲ್ಮೆಟ್‌ಗಳು, ಕರ್ಕಶ ಶಬ್ದ ಮಾಡುತ್ತಿದ್ದ ಸೈಲೆನ್ಸರ್‌ಗಳನ್ನು ಪೊಲೀಸರು ರೋಡ್ ರೋಲರ್ ಹತ್ತಿಸಿ ನಾಶಪಡಿಸಿದರು.

ಎಸ್ಪಿ ಶೇಖರ್ ಹೆಚ್.ಟಿ. ಅವರು ಮಾತನಾಡಿ, ಜಿಲ್ಲಾ ಪೊಲೀಸ್ ವತಿಯಿಂದ ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ವಶಕ್ಕೆ ಪಡೆದಿದ್ದ ವಸ್ತುಗಳು ಹಿಂದಿರುಗಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದೆವು. ಈ ಪ್ರಾಪರ್ಟಿ ಪರೇಡ್‌ನಲ್ಲಿ ಜಪ್ತಿ ಪಡಿಸಿಕೊಂಡಿದ್ದ ಒಟ್ಟು 87 ಪ್ರಕರಣಗಳಿಗೆ ಸಂಬಂಧಿಸಿದಂತೆ 22.94 ಲಕ್ಷ ಮೌಲ್ಯದ ವಿವಿಧ ಮಾದರಿಯ 31 ವಾಹನಗಳು, 90.67 ಲಕ್ಷ ನಗದು ಹಣ, 2.17 ಕೋಟಿ ಮೌಲ್ಯದ 1668.314 ಗ್ರಾಂ ಬಂಗಾರದ ಆಭರಣಗಳು ಹಾಗು 18.569 ಕೆ.ಜಿ. ಬೆಳ್ಳಿ, ಮೊಬೈಲ್, 56.55 ಲಕ್ಷ ರೂ. ಮೌಲ್ಯದ ವಿವಿಧ ಮಾದರಿಯ 377 ಮೊಬೈಲ್ ಫೋನ್‌ಗಳು, 4,87 ಲಕ್ಷ ಮೌಲ್ಯದ ಕೃಷಿ ಉಪಕರಣಗಳು, ಅಡಿಕೆ, ಬೋರವೆಲ್ ವೈರ್, ಮೋಟರ್ ಮತ್ತು ಇತರೆ ವಸ್ತುಗಳು ಸೇರಿ ಒಟ್ಟು 3,91,69,136 ಮೌಲ್ಯದ ಸ್ವತ್ತು ಕಳವು ಪ್ರಕರಣಗಳಲ್ಲಿನ ವಸ್ತುಗಳನ್ನು ವಶಕ್ಕೆ ಪಡೆದು ವಾರಸುದಾರಿಗೆ ಹಸ್ತಾಂತರ ಮಾಡಿದ್ದೇವೆ.



ಉದಯವಾಹಿನಿ ಚಿತ್ರ

> ಸ್ವತ್ತು ಪಡೆದ ಮಾತನಾಡಿ, ಯಾವುದೇ ಸುಳಿವಿಲ್ಲದೆ ಕಳ್ಳರು ಕಳ್ಳತನ ಮಾಡಿದ್ದರು. ನಮ್ಮ ಪ್ರಕರಣವನ್ನು ಒಂದು ವಾರದಲ್ಲೇ ಬೇಧಿಸಿದ್ದಾರೆ. ನ್ಯಾಮತಿ ಪೊಲೀಸರಿಗೆ ಧನ್ಯವಾದಗಳು. ಕಳ್ಳನನ್ನು ಹಿಡಿದು, ಚಿನ್ನವನ್ನು ಹಸ್ತಾಂತರ ಮಾಡಿರುವುದು ತುಂಬಾನೇ ಖುಷಿ ಆಗ್ತಿದೆ. ಕಿವಿಯೋಲೆ, ಎರಡು ಸರ, ಎರಡು ಬಳೆಗಳು ಕಳ್ಳತನ ಆಗಿದ್ದವು. ಎಲ್ಲಾ ರಿಕವರಿ ಮಾಡಿ ನಮಗೆ ಹಸ್ತಾಂತರ ಮಾಡಿದ್ದಾರೆ ಎಂದರು.
> ವಿಶಾಲಾಕ್ಷಿ

> ಕಳುವಾದ ಬೆಲೆಬಾಳುವ ವಸ್ತುಗಳನ್ನು ವಾಪಸ್ ಪಡೆದ ಮಾತನಾಡಿ, ದೊಗ್ಗಳಿ ಗ್ರಾಮದ ಆಂಜನೇಯ ದೇವಾಲಯದ ಆಭರಣಗಳನ್ನು ಕಳ್ಳರು ಕಳ್ಳತನ ಮಾಡಿದ್ದರು. ಕಿರೀಟ, ಮುಖ, ಹಸ್ತ, ಕಾಶಿ, ಛತ್ರಿಯನ್ನು ದೋಚಿದ್ದರು. ಮೂವರು ಕಳ್ಳರು ಮುಂಚೆಯೇ ನೋಡಿಕೊಂಡು ಹೋಗಿ ಕಳ್ಳತನ ಮಾಡಿದ್ದರು. ಪೊಲೀಸ್ ಇಲಾಖೆಯವರು ಅದನ್ನು ಹುಡುಕಿ ವಶಕ್ಕೆ ಪಡೆದು ದೇವರ ಆಭರಣಗಳನ್ನು ಹಸ್ತಾಂತರಿಸಿದ್ದಾರೆ. ಕಳ್ಳತನವಾಗಿದ್ದ ಎಂಟೇ ದಿನಕ್ಕೆ ಈ ಪ್ರಕರಣ ಪತ್ತೆ ಮಾಡಿರುವುದು ಖುಷಿಯಾಗಿದೆ. ಇಷ್ಟು ಬೇಗ ಪ್ರಕರಣ ಪತ್ತೆ ಮಾಡಿದಕ್ಕಾಗಿ ಪೊಲೀಸ್ ಇಲಾಖೆಗೆ ಧನ್ಯವಾದಗಳು ಎಂದು ತಿಳಿಸಿದರು.
> ಕೃಷ್ಣಮೂರ್ತಿ

**ಬುಲ್ಡೋಜರ್ ಸಹಾಯದಿಂದ ನಾಶ**

> ಐಎಸ್ಐ ಮಾರ್ಕ್ ಇಲ್ಲದ ಆಫ್ ಹೆಲ್ಮೆಟ್‌ಗಳು, ಸೈಲೆನ್ಸರ್‌ಗಳು, ಕರ್ಕಶ ಶಬ್ದದ ಹಾರ್ನ್ ಹಾಗು ಡಕ್‌ಗಳನ್ನು ಬುಲ್ಡೋಜರ್ ಸಹಾಯದಿಂದ ನಾಶ ಪಡಿಸಲಾಗಿದೆ. ಎಲ್ಲಾ ಸಿಬ್ಬಂದಿಗೆ ಅಭಿನಂದನೆಗಳು, ಎಲ್ಲರೂ ಉತ್ತಮವಾಗಿ ಕೆಲಸ ಮಾಡಿದ್ದಾರೆ ಎಂದು ಶ್ಲಾಘಿಸಿದರು.

## ಮಿನಿ ನ್ಯೂಸ್

### ಹಾರಾಡಿಯಲ್ಲಿ ಲಘು ವಾಹನಗಳಿಗೆ ಅವಕಾಶ

• **ಉದಯವಾಹಿನಿ, ಪುತ್ತೂರು:**

ಪುತ್ತೂರು-ಉಪ್ಪಿನಂಗಡಿ ಚತುಷ್ಪಥ ರಸ್ತೆಯ ಹಾರಾಡಿ ರೈಲ್ವೇ ಮೇಲ್ಸೇತುವೆ ಅಡಿಯಲ್ಲಿ ಕಾಂಕ್ರೀಟಿಕರಣದ ಹಿನ್ನಲೆಯಲ್ಲಿ ವಾಹನಗಳ ಓಡಾಟಕ್ಕೆ ನಿರ್ಬಂಧ ವಿಧಿಸಲಾಗಿತ್ತು. ಇದೀಗ ಈ ಕಾಮಗಾರಿ ಬಹುತೇಕ ಪೂರ್ಣಗೊಂಡಿದ್ದು, ಲಘು ವಾಹನಗಳ ಓಡಾಟಕ್ಕೆ ಅವಕಾಶ ಕಲ್ಪಿಸಲಾಗಿದೆ. ಕಾಮಗಾರಿಯನ್ನು ಜು.18ರಂದು ವೀಕ್ಷಣೆ ನಡೆಸಿದ್ದ ಶಾಸಕ ಅಶೋಕ್ ರೈ ಅವರು ಜುಲೈ 20ರಿಂದ ಲಘುವಾಹನಗಳಿಗೆ ರಸ್ತೆಯನ್ನು ಮುಕ್ತಗೊಳಿಸುವಂತೆ ಗುತ್ತಿಗೆದಾರರಿಗೆ ತಿಳಿಸಿದ್ದರು. ಈ ಬಗ್ಗೆ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೂ ಸೂಚನೆ ನೀಡಿದ್ದರು.

ಪ್ರಸ್ತುತ ರೈಲ್ವೇ ಮೇಲ್ಸೇತುವೆಯಡಿಯಲ್ಲಿ ಕಾಮಗಾರಿ ನಡೆದಿದ್ದರೂ ಮೋರಿ ಅಳವಡಿಕೆ ಬಾಕಿಯಾಗಿದೆ. ಇಲ್ಲಿ ವಾಹನಗಳ ಓಡಾಟಕ್ಕೆ ಸಮಸ್ಯೆ ಎದುರಾಗುತ್ತಿದೆ. ಒಂದು ಕಡೆಯಲ್ಲಿ ಹೊಂಡಕ್ಕಿಳಿದು ವಾಹನಗಳ ಮೇಲೆ ಇರುವಂತೆ ಅವ್ಯವಸ್ಥೆ ಮಾಡಲಾಗಿದೆ. ಇಲ್ಲಿ ದ್ವಿಚಕ್ರ ವಾಹನಗಳ ಓಡಾಟಕ್ಕೆ ಸಮಸ್ಯೆ ಉಂಟಾಗಿದೆ. ಈ ನಡುವೆ ಕಾರು ಜೀಪ್ ಮತ್ತಿತರ ವಾಹನಗಳನ್ನೂ ಈ ರಸ್ತೆಯಲ್ಲಿ ಓಡಾಟಕ್ಕೆ ಅವಕಾಶ ನೀಡಿದ ಹಿನ್ನಲೆಯಲ್ಲಿ ಈ ಮೋರಿ ಹಾಕುವ ಜಾಗದಲ್ಲಿ ಹಾಕಿರುವ ಮಣ್ಣು ಕೆಸರ ರಾಶಿಯಾಗಿದೆ. ಇದರಿಂದ ದ್ವಿಚಕ್ರ ವಾಹನಗಳು ಸ್ಕಿಡ್ ಆಗುವ ಸಾಧ್ಯತೆ ಹೆಚ್ಚಾಗಿದೆ. ಕೇವಲ ದ್ವಿಚಕ್ರ ವಾಹನಗಳಿಗೆ ಮಾತ್ರ ಅವಕಾಶ ನೀಡುತ್ತಿದ್ದರೆ ಈ ಸಮಸ್ಯೆ ಉಂಟಾಗುತ್ತಿರಲಿಲ್ಲ. ಇದೀಗ ಲಘುವಾಹನಗಳು ಇಲ್ಲೇ ಸಂಚರಿಸುವ ಕಾರಣ ಇಕ್ಕಟ್ಟಿನ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಮೋರಿ ಅಳವಡಿಕೆ ಮಾಡಲು ರಸ್ತೆಯ ಒಂದು ಭಾಗದಲ್ಲಿ ತೆಗೆದಿರುವ ಹೊಂಡ ಮತ್ತೊಂದು ಅಪಾಯದ ತಾಣವಾಗಿದೆ. ಮೋರಿ ವ್ಯವಸ್ಥೆ ಪೂರ್ಣಗೊಂಡ ಬಳಿಕ ಸರಾಗ ಸಂಚಾರ ಸಾಧ್ಯವಿದೆ.

### ಹಾವು ಕಡಿತ ಔಷಧಿ: ಸಾಮಾಜಿಕ ಜಾಲತಾಣದಲ್ಲಿ ತಪ್ಪು ಸಂದೇಶ

• **ಉದಯವಾಹಿನಿ, ಮಂಗಳೂರು-**

ಹಾವು ಕಡಿತಕ್ಕೆ ಈ ಔಷಧಿ ಲಭ್ಯವಿದೆ ಎಂಬ ಶೀರ್ಷಿಕೆಯಡಿಯಲ್ಲಿ Snake Venom Antiserum I.P ಎಂಬ ಲಸಿಕೆಯ ಫೋಟೋದೊಂದಿಗೆ, ''ನಿಮ್ಮಲ್ಲಿ ಯಾರಿಗಾದರೂ ಹಾವು ಕಚ್ಚಿದರೆ 108 ಕ್ಕೆ ಕರೆ ಮಾಡಿ ಅವರು ನಿಮ್ಮ ಮನೆಗೆ ಬಂದು ಈ ಇಂಜೆಕ್ಷನ್ ನೀಡುತ್ತಾರೆ.



ಉದಯವಾಹಿನಿ ಚಿತ್ರ

ನೀವು ಅಪಾಯದಿಂದ ಪಾರಾಗುತ್ತೀರಿ. ಈ ಮಾಹಿತಿಗಳನ್ನು ಎಲ್ಲಾ ಗುಂಪುಗಳಿಗೆ ಹಂಚಿಕೊಳ್ಳಿ' ಎಂಬ ವರದಿ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರವಾಗುತ್ತಿದೆ. ಈ ವರದಿ ತಪ್ಪು ಮಾಹಿತಿಯನ್ನು ಸಾಮಾಜಿಕ ಜಾಲತಾಣಗಳ ಮೂಲಕ ಜನಸಾಮಾನ್ಯರಿಗೆ ನೀಡುತ್ತಿದೆ, ಆದ್ದರಿಂದ ಸಾರ್ವಜನಿಕರು ಈ ಮಾಹಿತಿಯ ಬಗ್ಗೆ ಎಚ್ಚರ ವಹಿಸಬೇಕು.

ವಿಷಕಾರಿ ಹಾವು ಕಡಿತದ ಚುಚ್ಚುಮದ್ದು ಲಸಿಕೆಯನ್ನು ಕಡ್ಡಾಯವಾಗಿ ಆಸ್ಪತ್ರೆಯಲ್ಲಿ ನುರಿತ ವೈದ್ಯರ ಮೂಲಕ ನೀಡಲಾಗುತ್ತಿದೆ. ಈ ಲಸಿಕೆಯಿಂದ ಅಡ್ಡ ಪರಿಣಾಮ ಉಂಟಾಗುವುದರಿಂದ ಅತ್ಯಂತ ಎಚ್ಚರಿಕೆಯಿಂದ ನೇರ ನಿಗಾವಣೆಯ ಮೂಲಕ ನೀಡಲಾಗುತ್ತಿದೆ. ಈ ಲಸಿಕೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಮಾತ್ರ ಉಚಿತವಾಗಿ ನೀಡಲಾಗುತ್ತಿದೆ. 108 ವಾಹನ ಕೇವಲ ರೋಗಿಗಳನ್ನು ಆಸ್ಪತ್ರೆಗಳಿಗೆ ಕೊಂಡೊಯ್ಯಲು ಇರುವ ಸರ್ಕಾರಿ ಸೇವಾ ವಾಹನ. ಆದ್ದರಿಂದ ಸಾರ್ವಜನಿಕರು ಈ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರವಾಗಿರುವ ತಪ್ಪು ಸಂದೇಶಗಳ ಬಗ್ಗೆ ಗಮನ ನೀಡಬಾರದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಹಿಳಾ ಸ್ವಾವಲಂಬನೆಗೆ ದಿಕ್ಕು ತೋರಿದ ಗೃಹಲಕ್ಷ್ಮಿ

• **ಉದಯವಾಹಿನಿ, ಔರಾದ್:**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮೀ ಯೋಜನೆ ಮೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ತಾಲ್ಲೂಕು ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಸಂತಪೂರ ಗ್ರಾಮ ಪಂಚಾಯಿತಿ ಆವರಣದಲ್ಲಿ ಸಸಿ ನೆಡುವ ಮೂಲಕ ಗೃಹಲಕ್ಷ್ಮಿ ದಿನ ಆಚರಿಸಲಾಯಿತು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ತಾಲ್ಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಚನ್ನಪ್ಪ ಉಪ್ಪೆ, ಸರ್ಕಾರದ ಗ್ಯಾರಂಟಿ ಯೋಜನೆಗಳು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಆಸರೆಯಾಗಿದ್ದು, ಗೃಹಲಕ್ಷ್ಮೀ ಯೋಜನೆಯು ಮಹಿಳೆಯರ ಸ್ವಾವಲಂಬನೆಗೆ ಹೊಸ ದಿಕ್ಕು ತೋರಿಸಿದೆ. ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳು ಸಂಪೂರ್ಣವಾಗಿ ಪಡೆದುಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ ಅವರು ಮಾತನಾಡಿ, ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರ ಬದುಕಿನಲ್ಲಿ ಮಹತ್ವದ ಬದಲಾವಣೆ ತಂದಿವೆ. ಗೃಹಲಕ್ಷ್ಮೀ ಯೋಜನೆಯಿಂದ ಲಕ್ಷಾಂತರ ಮಹಿಳೆಯರು ಆರ್ಥಿಕವಾಗಿ ಸಬಲರಾಗಿದ್ದು, ಕುಟುಂಬದ ನಿರ್ವಹಣೆಯಲ್ಲಿ ಆತ್ಮವಿಶ್ವಾಸದಿಂದ ಮುಂದೆ ಸಾಗುತ್ತಿದ್ದಾರೆ ಎಂದು ಹೇಳಿದರು.

### ಧರ್ಮೇಂದ್ರ, ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ

• **ಉದಯವಾಹಿನಿ, ಹೊಸಪೇಟೆ.**

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ, ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ, ವಿಜಯನಗರ ಕಾಲೇಜು ಬಳಿ ಪ್ರತಿಭಟನೆಗೆ ಮುಂದಾಗಿದ್ದ, ವಿಜಯನಗರ ಜಿಲ್ಲಾ ಸಂವಿಧಾನ ಸಂರಕ್ಷಣಾ ಸಮಿತಿ ಪದಾಧಿಕಾರಿಗಳನ್ನು ಪೊಲೀಸರು ಬಂಧಿಸಿ, ಬಿಡುಗಡೆಗೊಳಿಸಿದ ಘಟನೆ ನಗರದಲ್ಲಿ ಜರುಗಿತು.

ಸಿಇಟಿ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಹಲವು ವಿದ್ಯಾರ್ಥಿಗಳ ಸಾವಿಗೆ ಕಾರಣರಾದವರನ್ನು ಕೂಡಲೇ ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಹಾಗೂ ಇದರ ನೈತಿಕ ಹೊಣೆಹೊತ್ತು ಕೇಂದ್ರ ಶಿಕ್ಷಣ ಮಂತ್ರಿ ಧರ್ಮೇಂದ್ರ ಪ್ರಧಾನ ಅವರ ರಾಜೀನಾಮೆಗೆ ಒತ್ತಾಯಿಸಿ ವಿಜಯನಗರ ಕಾಲೇಜು ಬಳಿ ಸಂವಿಧಾನ ಸಂರಕ್ಷಣಾ ಸಮಿತಿ ಪದಾಧಿಕಾರಿಗಳು ಪ್ರತಿಭಟನೆಗೆ ಮುಂದಾಗಿದ್ದರು. ಆದರೆ ಪೊಲೀಸರು ಅಲ್ಲಿ ಪ್ರತಿಭಟನೆಗೆ ಅವಕಾಶ ನೀಡಲಿಲ್ಲ. ಈ ಸಂದರ್ಭದಲ್ಲಿ ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ಮಾತಿನ ಚಕಮಕಿ ಜರುಗಿತು. ಪೊಲೀಸರು ಪ್ರತಿಭಟನೆಗೆ ಮುಂದಾಗಿದ್ದ ಸಮಿತಿ ಮುಖಂಡರಾದ ಸೋಮಶೇಖರ್ ಬಣ್ಣದಮನೆ, ಕೃಷ್ಣ ಮೊದಲಿಯರ್ ಬಂಧಿಸಿ ಕರೆದೊಯ್ದು ನಂತರ ಬಿಡುಗಡೆ ಮಾಡಿದರು. ಬಿಡುಗಡೆಗೊಂಡ ನಂತರ ಪ್ರತಿಭಟನಾಕಾರರು ತಹಶೀಲ್ದಾರರ ಕಚೇರಿ ಬಳಿ ಬಂದು ಮತ್ತೆ ಪ್ರತಿಭಟನೆ ನಡೆಸಿ, ತಹಶೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು. ಪದೇ ಪದೇ ಪ್ರಶ್ನೆ ಪತ್ರಿಕೆಗಳು ಸೋರಿಕೆ ಆಗುತ್ತಿದ್ದು, ಇದರಿಂದ ವಿದ್ಯಾರ್ಥಿಗಳಿಗೆ ಹಾಗು ಪೋಷಕರಿಗೆ ಸಾಕಷ್ಟು ತೊಂದರೆ ಆಗುತ್ತಿದ್ದರೂ ಕ್ರಮ ಕೈಗೊಳ್ಳದ ಕೇಂದ್ರ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಿದರು. ಈ ಹೋರಾಟ ಇಷ್ಟಕ್ಕೆ ನಿಲ್ಲಬಾರದು.

